ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 238
17–3–2025 ಸೋಮವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 238

### ಖಾತೆ ವರ್ಗಾವಣೆಗೆ ಲಂಚ

## ಲೋಕಾಯುಕ್ತ ಬಲೆಗೆ ಎಫ್‌ಡಿಎ

**ದಾವಣಗೆರೆ:** ನಿವೇಶನ ಖಾತೆ ವರ್ಗಾವಣೆಗೆ ಲಂಚ ಪಡೆಯುತ್ತಿದ್ದ ದಾವಣಗೆರೆ ಮಹಾ ನಗರ ಪಾಲಿಕೆ ವಲಯ ಕಚೇರಿ –2 ರ ಪ್ರಥಮ ದರ್ಜೆ ಸಹಾಯಕರೊಬ್ಬರು ಶುಕ್ರವಾರ ಲೋಕಾ ಯುಕ್ತ ಪೊಲೀಸರು ಬೀಸಿದ ಗಾಳಕ್ಕೆ ಸಿಕ್ಕಿ ಬಿದ್ದಿದ್ದಾರೆ.



ಪ್ರಥಮ ದರ್ಜೆ ಸಹಾಯಕ ಪಾಲನಾಯಕ ಲೋಕಾಯುಕ್ತ ಗಾಳಕ್ಕೆ ಸಿಕ್ಕಿಬಿದ್ದವರು. ಜಿ.ಯು.ಬಸವನಗೌಡ ಎನ್ನುವವರು ಆವರಗೆರೆ ವಾರ್ಡ್ ನಂ 30 ರಲ್ಲಿರುವ ಬಾಡಾ ಕ್ರಾಸ್(ಮೋತಿ ನಗರ)ದ ಖಾಲಿ ನಿವೇಶನ ಡೋರ್ ನಂಬರ್ 358/ 21 ರ 30*40 ಅಳತೆಯ ಸೈಟನ್ನು ತನ್ನ ತಂಗಿ ಶ್ರೀಮತಿ ಕಾವ್ಯ ಜಿ.ಯು.ಅವರಿಗೆ ಪಾಲು ವಿಭಾಗ ಯಾನೆ ಪಾರೀಖತ್ ಪತ್ರ ಮುಖಾಂತರ ನೋಂದಣಿ ಮಾಡಿಸಿದ್ದರು.

ಈ ಸೈಟನ್ನು ತನ್ನ ತಂಗಿಯ ಹೆಸರಿಗೆ ಖಾತೆ ವರ್ಗಾವಣೆ ಮಾಡಿಕೊಡಲು ಪಾಲಿಕೆ ವಲಯ ಕಚೇರಿ– 2 ರಲ್ಲಿ ಅರ್ಜಿ ಸಲ್ಲಿಸಿದ್ದರು.

ಖಾತೆ ವರ್ಗಾವಣೆ ಮಾಡಿಕೊಡಲು ಪಾಲನಾಯಕ 2500 ರೂ ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದರು. ಆದರೆ ಬಸವನಗೌಡ ಅವರಿಗೆ ಲಂಚದ ಹಣ ನೀಡಿ ತಮ್ಮ ಕೆಲಸ ಮಾಡಿಸಿಕೊಳ್ಳಲು ಇಷ್ಟವಿಲ್ಲದ ಕಾರಣ ಪಾಲನಾಯಕ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಲು ಲೋಕಾಯುಕ್ತ ಪೊಲೀಸ್ ಠಾಣೆಗೆ ದೂರು ನೀಡಿದ್ದರು.

ದೂರಿನ ಅನ್ವಯ ಶುಕ್ರವಾರ ಪ್ರಥಮ ದರ್ಜೆ ಸಹಾಯಕ ಪಾಲನಾಯಕ ಅವರು ತಮ್ಮ ಕಚೇರಿಯಲ್ಲಿ ಬಸವನಗೌಡ ಅವರಿಂದ 2500 ರೂ ಲಂದ ಹಣ ಪಡೆಯುತ್ತಿದ್ದಾಗ ಹಣದ ಸಮೇತ ಸಿಕ್ಕಿಬಿದ್ದಿದ್ದಾರೆ.

ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಎಂ.ಎಸ್. ಕೌಲಾಪೂರೆ ಅವರ ಮಾರ್ಗದರ್ಶನದಲ್ಲಿ ಪೊಲೀಸ್ ನಿರೀಕ್ಷಕ ಪ್ರಭು ಬ.ಸೂರಿನ, ಮುಸ್ತಾಕ್ ಅಹಮದ್ ಮತ್ತು ಠಾಣಾ ಸಿಬ್ಬಂದಿಗಳು ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದರು. ಪಾಲನಾಯಕ ಅವರನ್ನು ವಶಕ್ಕೆ ಪಡೆದು ಮುಂದಿನ ತನಿಖೆ ಕೈಗೊಳ್ಳಲಾಗಿದೆ.

### ಇಂದು ಸದನದಲ್ಲಿ ಇಬ್ಬರ ಹೆಸರು ಬಹಿರಂಗಪಡಿಸುವೆ: ಯತ್ನಾಳ್

## ಗೋಲ್ಡ್ ರಾಣಿ ಹಿಂದೆ ಇಬ್ಬರು ಸಚಿವರು

**ಬೆಂಗಳೂರು:** ಗೋಲ್ಡ್ ರಾಣಿಯೆಂದೇ ಐಕಾನ್ ಆಗುತ್ತಿರುವ ನಟಿ ರನ್ಯಾಳಿಗೆ ಸಹಾಯ ಮಾಡಿದ ಇಬ್ಬರು ಸಚಿವರ ಹೆಸರನ್ನು ಬಹಿರಂಗಪಡಿಸುವುದಾಗಿ ಶಾಸಕ ಬಸವನಗೌಡ ಯತ್ನಾಳ್ ಸ್ಫೋಟಕ ಹೇಳಿದ್ದಾರೆ.

ಅಂದುಕೊಂಡಂತೆ ನಡೆದರೆ ಸೋಮವಾರ ವಿಧಾನ ಸಭೆ ಅಧಿವೇಶನದಲ್ಲಿ ಇಬ್ಬರ ಸಚಿವರ ಹೆಸರು ಬಹಿರಂಗಹವಾಗುವ ಸಾಧ್ಯತೆ ಇದೆ. ಕಳೆದ ಒಂದು ವಾರದಿಂದ ರಾಜ್ಯ ಸರ್ಕಾರದ ಇಬ್ಬರು ಪ್ರಭಾವಿ ಸಚಿವರು ಇದ್ದಾರೆಂಬ ಸುದ್ದಿ ಹರಿದಾಡುತ್ತಿದೆ.

ಇದಕ್ಕೆ ರೆಕ್ಕೆಪುಕ್ಕವೆಂಬಂತೆ ಯತ್ನಾಳ್ ಅವರು ಸಚಿವರ ಹೆಸರು ಬಹಿರಂಗಪಡಿಸುವುದಾಗಿ ಹೇಳಿರುವುದು ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಿದೆ. ಒಂದು ವೇಳೆ ಸಚಿವರ ಹೆಸರು ಹೊರ ಬಂದರೆ ಸದನದಲ್ಲಿ ಕೋಲಾಹಲ ವಾತಾವರಣ ನಿರ್ಮಾಣವಾಗಬಹುದು.



### ಫೈರಿಂಗ್‌ನಲ್ಲಿ ಒಬ್ಬ ಆರೋಪಿ ಕಾಲಿಗೆ ಗುಂಡು, ಪೇದೆಗೆ ಮಚ್ಚಿನ ಹೊಡೆತ

## ಗುಂಡು ಹಾರಿಸಿ ಅಂತರ್ ರಾಜ್ಯ ನಾಲ್ವರು ದರೋಡೆಕೋರರ ಬಂಧನ

**ನ್ಯಾಮತಿ:** ಬ್ಯಾಂಕ್ ದರೋಡೆ ಮಾಡಲು ಆಗಮಿಸುತ್ತಿದ್ದ ಉತ್ತರ ಪ್ರದೇಶದ ಅಂತರ್ ರಾಜ್ ನಾಲ್ವರು ದರೋಡೆಕೋರರನ್ನು ಬಂಧಿಸಿದ್ದಾರೆ.

ಬಂಧಿಸುವ ಸಮಯ ಆತ್ಮ ರಕ್ಷಣೆಗಾಗಿ ಗುಂಡು ಹಾರಿಸಿದ್ದು ಗುಡ್ಡು ಎಂಬ ಆರೋಪಿ ಗಾಯಗೊಂಡಿದ್ದಾನೆ. ಆರೋಪಿಗಳು ಪೊಲೀಸರ ಮೇಲೆ ಮಚ್ಚಿನಿಂದ ಹಲ್ಲೆ ಮಾಡಿದ್ದು, ಆನಂದ ಎಂಬ ಪೇದೆ ಗಾಯಗೊಂಡಿದ್ದಾರೆ. ಇಬ್ಬರು ದಾವಣಗೆರೆ ಚಿಗಟೇಟರಿ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಇನ್ನು ನಾಲ್ವರು ತಲೆ ಮರೆಸಿಕೊಂಡಿದ್ದು, ಆರೋಪಿಗಳು ತಾಲೂಕಿನ ಸವಳಂಗ ಭಾರತೀಯ ಸ್ಟೇಟ್ ಬ್ಯಾಂಕ್ ದರೋಡೆಗೆ ಆಗಮಿಸಿದ್ದರು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಆರೋಪಿಗಳಿಂದ ಎರಡು ಕರು, ನಾಲ್ಕು ಜೀವಂತ ಗುಂಡು, ಒಂದು ಆಕ್ಸಿಜನ್ ಸಿಲಿಂಡರ್ ರೆಗ್ಯೂಲೇಟರ್, ಮೂರು ಕಬ್ಬಿಣದ ರಾಡ್, ಐದು ಖಾರದ ಪುಡಿ, ಐದು ಮಂಕಿ ಕ್ಯಾಪ್, ಐದು ಜೊತೆ ಹ್ಯಾಂಡ್ ಗ್ಲೋಸ್, ಒಂದು ಲಾಂಗ್ ಮಚ್ಚನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

## ಎಸ್.ಎಸ್. ಕೇರ್ ಟ್ರಸ್ಟ್ ನಿಂದ ಉಚಿತ ಉದ್ಯೋಗಾಧಾರಿತ ತರಬೇತಿ

**ದಾವಣಗೆರೆ:** ಎಸ್.ಎಸ್. ಕೇರ್ ಟ್ರಸ್ಟ್ ವತಿಯಿಂದ ದಾವಣಗೆರೆ ವಿಶ್ವವಿದ್ಯಾಲಯ ಹಾಗೂ ಬೆಂಗಳೂರಿನ ಕ್ಯೂ–ಸ್ಪೈಡರ್ಸ್ ಸಹಯೋಗದಲ್ಲಿ 'ಕೌಶಲ್ಯ' ಹೆಸರಿನಡಿ ಉಚಿತ ಉದ್ಯೋಗಾಧಾರಿತ ತರಬೇತಿ ಶಿಬಿರವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಎಸ್.ಎಸ್. ಕೇರ್ ಟ್ರಸ್ಟ್‌ನ ಲೈಫ್ ಟ್ರಸ್ಟಿಗಳು ಹಾಗೂ ಸಂಸದರೂ ಆದ ಡಾ. ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಭಾನುವಾರ, ನಗರದ ದೃಶ್ಯಕಲಾ ಮಹಾವಿದ್ಯಾಲಯದ ಆರ್ಟ್ ಗ್ಯಾಲರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ನಮ್ಮ ಜಿಲ್ಲೆಯಿಂದ ಹತ್ತು ಸಾವಿರಕ್ಕೂ ಹೆಚ್ಚು ಪದವೀಧರರು ಹೊರಬರುತ್ತಿದ್ದು, ಉದ್ಯೋಗ ಅರಸಿ ಬೆಂಗಳೂರಿನ ಕದ ತಟ್ಟುತ್ತಿದ್ದಾರೆ. ಆದರೆ ಉದ್ಯೋಗಾಧಾರಿತ ಕೌಶಲ್ಯಗಳ ಕೊರತೆಯಿಂದ ಉದ್ಯೋಗ ವಂಚಿತರಾಗುತ್ತಿರುವ ಹಲವರು ಉದ್ಯೋಗಾಧಾರಿತ ತರಬೇತಿ ಕೇಂದ್ರಗಳ ಮೊರೆ ಹೋಗುತ್ತಿರುವುದು ಸಾಮಾನ್ಯವಾಗಿದೆ. ವಸತಿ, ಊಟ, ತರಬೇತಿ ಶುಲ್ಕ ಹೊರೆಯಾಗಲಿದ್ದು, ಇದನ್ನರಿತ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಹಾಗೂ ನಾವುಗಳು



ಎಸ್.ಎಸ್. ಕೇರ್ ಟ್ರಸ್ಟ್ ವತಿಯಿಂದ ಜಿಲ್ಲೆಯ ಪದವೀಧರರಿಗೆ ದಾವಣಗೆರೆಯಲ್ಲಿಯೇ ಉಚಿತ ಶಿಬಿರವನ್ನು ಆಯೋಜಿಸುತ್ತಿದ್ದೇವೆ ಎಂದು ಶಿಬಿರದ ಧ್ಯೇಯೋದ್ದೇಶ ತಿಳಿಸಿದರು.

ಶಿಬಿರಕ್ಕಾಗಿ ಎಸ್.ಎಸ್. ಕೇರ್ ಟ್ರಸ್ಟ್ ವತಿಯಿಂದ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ತರಬೇತಿ ಕೇಂದ್ರ ಹಾಗೂ ಉನ್ನತ ಮಟ್ಟದ ಕಂಪ್ಯೂಟರ್ ಆಧಾರಿತ ತರಬೇತಿ ಹಾಗೂ ಮೂಲಭೂತ ಸೌಕರ್ಯವನ್ನು ಬಾಪೂಜಿ ವಿದ್ಯಾಸಂಸ್ಥೆಯಲ್ಲಿ ಒದಗಿಸಲಾಗುವುದು. ಬೆಂಗಳೂರಿನ ಪ್ರತಿಷ್ಠಿತ ಕ್ಯೂ ಸ್ಪೈಡರ್ಸ್ ತರಬೇತಿ ಸಂಸ್ಥೆಯ ಸಿಇಓ ಗಿರೀಶ್ ರಾಮಣ್ಣ ನವರು ದಾವಣಗೆರೆಯಲ್ಲಿ ಅತ್ಯವಶ್ಯಕತೆ ಇರುವ ಉದ್ಯೋಗಾಧಾರಿತ ಉನ್ನತ ಮಟ್ಟದ ತರಬೇತಿಯನ್ನು ತಮ್ಮ ಸಂಸ್ಥೆಯ ಸಿಎಸ್‌ಆರ್ ಅನುದಾನದಡಿಯಲ್ಲಿ ನೀಡಲು ಉತ್ಸುಕರಾಗಿದ್ದಾರೆ ಎಂದರು.

ಮೊದಲ ಹಂತದಲ್ಲಿ ನಾಳೆ ಮಾರ್ಚ್ 17 ರಿಂದ 20 ರವರೆಗೆ ಆಯಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಆಯ್ಕೆ ಪ್ರಕ್ರಿಯೆ ನಡೆಯಲಿದೆ. ಆಯ್ಕೆ ಪ್ರಕ್ರಿಯೆಯಲ್ಲಿ ಸುಮಾರು 5046 ವಿದ್ಯಾರ್ಥಿಗಳು ಭಾಗವಹಿಸಲಿದ್ದು, ಆಯ್ಕೆ ಪ್ರಕ್ರಿಯೆಯು ಆಪ್ಟಿಟ್ಯೂಡ್ ಟೆಸ್ಟ್, ಸಮೂಹ ಚರ್ಚೆ ಹಾಗೂ ಸಂದರ್ಶನಗಳ ಮೂಲಕ ನಡೆಯಲಿದೆ. ಅಂತಿಮವಾಗಿ ಆಯ್ಕೆಯಾದ 1200 ವಿದ್ಯಾರ್ಥಿಗಳನ್ನು 'ಕೌಶಲ್ಯ' ತರಬೇತಿಯಲ್ಲಿ ನಿಯೋಜಿಸಲಾಗುವುದು ಎಂದು ವಿವರಿಸಿದರು.

ಮಾರ್ಚ್ 22 ಶನಿವಾರ ಬೆಳಗ್ಗೆ 10.30 ಗಂಟೆಗೆ ಬಿಐಇಟಿ ಕಾಲೇಜು ಆವರಣದಲ್ಲಿರುವ ಎಸ್.ಎಸ್. ಮಲ್ಲಿಕಾರ್ಜುನ ಸಾಂಸ್ಕೃತಿಕ ಕೇಂದ್ರದಲ್ಲಿ ಶಿಬಿರಕ್ಕೆ ಚಾಲನೆ ನೀಡಲಾಗುವುದು.

ಮಾರ್ಚ್ 26 ಬುಧವಾರದಿಂದ ಶಿಬಿರ ಆರಂಭವಾಗಲಿದೆ.

ಬಿಕಾಂ, ಬಿ.ಎ. ಬಿಬಿಎ ವಿದ್ಯಾರ್ಥಿಗಳಿಗೆ ಬಾಪೂಜಿ ಎಂ.ಬಿ.ಎ. ಕಾಲೇಜು ಆವರಣದಲ್ಲಿ ಹಾಗೂ ಬಿಎಸ್ಸಿ, ಬಿಸಿಎ ವಿದ್ಯಾರ್ಥಿಗಳಿಗೆ ಬಿಐಇಟಿ ಕಾಲೇಜು ಆವರಣದಲ್ಲಿ ತರಬೇತಿ ನೀಡಲಾಗುವುದು. ಕಾಲೇಜು ಮುಗಿದ ನಂತರ ಮಧ್ಯಾಹ್ನ 2 ಗಂಟೆಯಿಂದ 6 ಗಂಟೆಯವರೆಗೆ ತರಬೇತಿ ತರಗತಿಗಳನ್ನು ನಡೆಸಲಾಗುವುದು.

ತರಬೇತಿ ಮುಗಿಸಿದ ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಕಂಪನಿಗಳಲ್ಲಿ ಸಂದರ್ಶನ ಹಾಗೂ ಉದ್ಯೋಗ ಮೇಳಗಳ ಮೂಲಕ ಉದ್ಯೋಗವಕಾಶ ಒದಗಿಸುವ ನಿಟ್ಟಿನಲ್ಲಿ ಕೌಶಲ್ಯ ಯೋಜನೆಯನ್ನು ರೂಪಿಸಲಾಗಿದೆ ಎಂದು ಮಾಹಿತಿ ನೀಡಿದರು. ಮುಂದಿನ ಹಂತದಲ್ಲಿ ತಾಲ್ಲೂಕು ಮಟ್ಟದಲ್ಲಿ ಸ್ನಾತಕೋತ್ತರ ಪದವಿ ಡಿಪ್ಲೊಮೋ ವಿದ್ಯಾರ್ಥಿಗಳಿಗೂ ಸಹ ವಿಸ್ತರಿಸಲಾಗುವುದು ಎಂದರು.

ದಾವಣಗೆರೆ ವಿಶ್ವವಿದ್ಯಾನಿಲಯದ ಉಪಕುಲಪತಿ ಪ್ರೋ ಬಿ.ಡಿ. ಕುಂಬಾರ ಮಾತನಾಡಿ, ಸ್ನಾತಕ ಪದವಿ ಪಡೆದ ಗ್ರಾಮೀಣ ವಿದ್ಯಾರ್ಥಿಗಳಿಗೆ ಎಲ್ಲಾ ಉದ್ಯೋಗಾಧಾರಿತ ಕೌಶಲ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಮೊದಲ ಹಂತವಾಗಿ ಸರ್ಕಾರಿ ಅನುದಾನಿತ, ಅನುದಾನರಹಿತ 26 ಕಾಲೇಜುಗಳಿಂದ ಆಯ್ಕೆ ಮಾಡುವ ಒಟ್ಟು 1200 ವಿದ್ಯಾರ್ಥಿಗಳಿಗೆ ತರಬೇತಿ ನೀಡಲಾಗುವುದು. ಮೊದಲ ಹಂತದ ಈ ಶಿಬಿರದಲ್ಲಿ ಎರಡು ತಿಂಗಳ ಕಾಲ ತರಬೇತಿ ನೀಡಲಾಗುವುದು. ಫಲಿತಾಂಶ ಗಮನಿಸಿ, ವಿಶ್ವವಿದ್ಯಾನಿಲಯದ ಅಡಿಯಲ್ಲಿ ಬರುವ ಅಂತಿಮ ವರ್ಷದ ಪದವಿ ವಿದ್ಯಾರ್ಥಿಗಳಿಗೆ 'ಕೌಶಲ್ಯ' ತರಬೇತಿ ಯೋಜನೆಯನ್ನು ವಿಸ್ತರಿಸುವ ಆಲೋಚನೆ ಇದೆ ಎಂದು ತಿಳಿಸಿದರು.

ಕ್ಯೂ–ಸ್ಪೈಡರ್ ಕೋ–ಆರ್ಡಿನೇಟರ್ ಸತೀಶ್ ಮಾತನಾಡಿ, ನಮ್ಮ ಸಂಸ್ಥೆ ಆರಂಭವಾಗಿ 17 ವರ್ಷಗಳಾಗಿದ್ದು, 13 ರಾಜ್ಯಗಳಲ್ಲಿ 53 ಸೆಂಟರ್ ಗಳು ಕಾರ್ಯನಿರ್ವಹಿಸುತ್ತಿದೆ. ಇಲ್ಲಿಯವರೆಗೂ 12 ಲಕ್ಷಕ್ಕೂ ಹೆಚ್ಚು ಯುವಜನರು ಆಫ್ ಲೈನ್ ಹಾಗೂ ಆನ್ ಲೈನ್ ಮೂಲಕ ತರಬೇತಿ ಪಡೆದಿದ್ದು, 4.5 ಲಕ್ಷ ಜನರು ಉದ್ಯೋಗಗಳಿಸಿದ್ದಾರೆ. ಐಟಿ ಸೈನ್ಸ್‌ನಲ್ಲಿ ಜಾವಾ, ಪೈಥಾಣ್ ತರಬೇತಿ ನೀಡಲಾಗುವುದು. ನಾನ್ ಐಟಿ ಸೈನ್ಸ್‌ನಲ್ಲಿ ನಲ್ಲಿ ಮ್ಯಾನೇಜ್ಮೆಂಟ್ ಇತ್ಯಾದಿ ಕೌಶಲ್ಯಗಳ ಬಗ್ಗೆ ತರಬೇತಿ ನೀಡಲಾಗುವುದು ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ, ವಿವಿಯ ಶಶಿಧರ್, ಸಿಂಡಿಕೇಟ್ ಸದಸ್ಯ ಪ್ರಶಾಂತ್, ವಿವಿಯ ಉದ್ಯೋಗಾಧಿಕಾರಿ ವಿರೂಪಾಕ್ಷಯ್ಯ, ವೀರೇಶ್ ಪಾಟೀಲ್ ಉಪಸ್ಥಿತರಿದ್ದರು.




## ಅಕ್ರಮ ಗೋವು ಸಾಗಾಟ: ರಕ್ಷಣೆಗೆ ಮುಂದಾದ ಪ್ರಮೋದ್ ಮುತಾಲಿಕ್

**ದಾವಣಗೆರೆ:** ರಾಷ್ಟ್ರೀಯ ಹೆದ್ದಾರಿ 48 ಹಳೇ ಕುಂದುವಾಡ ಬಳಿ ಅಕ್ರಮವಾಗಿ ಗೋವುಗಳನ್ನು ಸಾಗಿಸುತ್ತಿದ್ದ ವೇಳೆ, ಅದೇ ಮಾರ್ಗದಲ್ಲಿ ಹೋಗುತ್ತಿದ್ದ ಶ್ರೀ ರಾಮಸೇನೆ ಅಧ್ಯಕ್ಷ ಪ್ರಮೋದ್ ಮುತಾಲಿಕ್, ವಾಹನ ತಡೆದು, ಗೋರಕ್ಷಣೆ ಮಾಡಿದ ಘಟನೆ ಭಾನುವಾರ ನಡೆದಿದೆ.

ಮುತಾಲಿಕ್ ಅವರು ಹುಬ್ಬಳ್ಳಿಯಿಂದ ದಾವಣಗೆರೆಗೆ ಆಗಮಿಸುತ್ತಿದ್ದ ವೇಳೆ, ಸಣ್ಣ ಗಾಡಿಯಲ್ಲಿ ನಾಲ್ಕು ದೊಡ್ಡ ಹಸುಗಳನ್ನು ತುಂಬಿಕೊಂಡಿದ್ದ ವ್ಯಕ್ತಿಯೊಬ್ಬ ಗೋವುಗಳನ್ನು ಕಸಯಿಖಾನೆಗೆ ಒಯ್ಯುತ್ತಿರುವ ಶಂಕೆ ಹಿನ್ನೆಲೆಯಲ್ಲಿ ಅನುಮಾನದಿಂದ ಗಾಡಿ ತಡೆದು ವಿಚಾರಿಸಿದಾಗ ಪ್ರಕರಣ ಬೆಳಕಿಗೆ ಬಂದಿದೆ.

ದಾಖಲೆ ಇಲ್ಲದೇ ಹಸುಗಳ ಸಾಗಟವಾಗುತ್ತಿದೆ ಎಂದು ಅರಿತಮುತಾಲಿಕ್ ಖುದ್ದು ವಿದ್ಯಾನಗರ ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದಾರೆ.

ತಕ್ಷಣ ಸ್ಥಳಕ್ಕೆ ವಿದ್ಯಾನಗರ ಪೊಲೀಸ್ ಠಾಣೆಯ ಪಿಐ ಶಿಲ್ಪ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿಕೊಂಡಿದ್ದಾರೆ.



ರಾಜ್ಯದಲ್ಲಿ ಗೋ ಹತ್ಯೆ ನಿಷೇಧ ಇದೆ, ಆದರೂ ಕಸಾಯಿ ಖಾನೆಗೆ ಗೋವುಗಳು ಸಾಗಾಟವಾಗುತ್ತಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಇರುವುದರಿಂದಲೇ ಗೋ ಸಾಗಾಟ ನಿರ್ಭಿಡೆಯಿಂದ ನಡೆಯುತ್ತಿದೆ ಸರ್ಕಾರ ಈ ಕೂಡಲೇ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಪ್ರಮೋದ್ ಮುತಾಲಿಕ್ ಆಗ್ರಹಿಸಿದರು. ಇದೇ ವೇಳೆ ಶ್ರೀ ರಾಮಸೇನೆ ದಾವಣಗೆರೆ ಸದಸ್ಯರು ಸ್ಥಳಕ್ಕೆ ಆಗಮಿಸಿದ್ದರು.

### ಪಾಕ್‌ನಲ್ಲಿ ಮತ್ತೆ ಬಲೋಚ್ ಆರ್ಮಿ ಅಟ್ಟಹಾಸ

## ಆತ್ಮಾಹುತಿ ದಾಳಿಗೆ ಭದ್ರತಾ ಪಡೆಗಳಿದ್ದ ಬಸ್ ಛಿದ್ರ

### 100ಕ್ಕೂ ಹೆಚ್ಚು ಮಂದಿ ಸಾವು

**ಬಲೋಚಿಸ್ತಾನ:** ಪಾಕಿಸ್ತಾನದ ನೈಋತ್ಯ ಭಾಗದಲ್ಲಿ ಭದ್ರತಾ ಪಡೆಗಳನ್ನು ಗುರಿಯಾಗಿರಿಸಿಕೊಂಡು ಬಲೋಚ್ ಲಿಬರೇಷನ್ ಆರ್ಮಿ ದಾಳಿ ನಡೆಸಿದೆ.

ಭಾನುವಾರ ಭದ್ರತಾ ಪಡೆಗಳನ್ನು ಹೊತ್ತೊಯ್ಯುತ್ತಿದ್ದ ಬಸ್ ಬಳಿ ರಸ್ತೆ ಬದಿ ಬಾಂಬ್ ಸ್ಫೋಟಗೊಂಡು ಕನಿಷ್ಠ ಐದು ಅಧಿಕಾರಿಗಳು ಸಾವನ್ನಪ್ಪಿದ್ದು, 10 ಮಂದಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಬಲೋಚಿಸ್ತಾನದ ನೌಷ್ಕಿ ಜಿಲ್ಲೆಯಲ್ಲಿ ಈ ದಾಳಿ ನಡೆದಿದೆ ಎಂದು ಸ್ಥಳೀಯ ಪೊಲೀಸ್ ಮುಖ್ಯಸ್ಥ ಜಾಫರ್ ಜಮಾನಾನಿ ತಿಳಿಸಿದ್ದಾರೆ.

ಸ್ಫೋಟದಿಂದಾಗಿ ಹತ್ತಿರದ ಮತ್ತೊಂದು ಬಸ್‌ಗೆ ತೀವ್ರ ಹಾನಿಯಾಗಿದೆ. ಮೃತರು ಮತ್ತು ಗಾಯಾಳುಗಳನ್ನು ಹತ್ತಿರದ ಆಸ್ಪತ್ರೆಗೆ ಸಾಗಿಸಲಾಗಿದೆ ಎಂದು ಅವರು ಹೇಳಿದರು.

"(ಇರಾನ್ ಗಡಿಯಲ್ಲಿರುವ) ತಫ್ತಾನ್‌ಗೆ ಹೋಗುತ್ತಿದ್ದ ಬೆಂಗಾವಲು ಪಡೆಯಲ್ಲಿ ಏಳು ಬಸ್‌ಗಳು ಇದ್ದವು. ನೋಶ್ಕಿಯಲ್ಲಿ, ಸ್ಫೋಟಕಗಳನ್ನು ತುಂಬಿದ್ದ ಕಾರು ಒಂದು ಬಸ್‌ಗೆ ಡಿಕ್ಕಿ ಹೊಡೆದಿದೆ" ಎಂದು ಜಾಫರ್ ಹೇಳಿದರು.



ಬಲೋಚಿಸ್ತಾನದ ಮುಖ್ಯಮಂತ್ರಿ ಸರ್ಫ್ರಾಜ್ ಬುಗ್ತಿ ದಾಳಿಯನ್ನು ಖಂಡಿಸಿದ್ದಾರೆ. ಏತನ್ಮಧ್ಯೆ, ಬಲೋಚ್ ಲಿಬರೇಶನ್ ಆರ್ಮಿ (ಬಿಎಲ್‌ಎ) ದಾಳಿಯ ಹೊಣೆಯನ್ನು ಹೊತ್ತುಕೊಂಡಿದ್ದು, 90 ಸಿಬ್ಬಂದಿ ಸಾವನ್ನಪ್ಪಿದ್ದಾರೆ ಎಂದು ಹೇಳಿದೆ.

ತನ್ನ ಮಜೀದ್ ಬ್ರಿಗೇಡ್ ರಕ್ಷಾನ್ ಮಿಲ್ ಬಳಿಯ ಆರ್‌ಸಿಡಿ ಹೆದ್ದಾರಿಯಲ್ಲಿ ಪ್ರಯಾಣಿಸುತ್ತಿದ್ದ ಬೆಂಗಾವಲು ಪಡೆಯ ಮೇಲೆ ವಾಹನದಿಂದ ಆತ್ಮಾಹುತಿ ಬಾಂಬ್ ದಾಳಿ ನಡೆಸಿದ್ದೇವೆ ಎಂದು ಬಿಎಲ್‌ಎ ಗುಂಪು ಹೇಳಿದೆ.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಎಣ್ಣೆಯುಕ್ತ ಮತ್ತು ಮಸಾಲೆಯುಕ್ತ ಆಹಾರ ತಪ್ಪಿಸಿ. ದಿನದ ಆರಂಭದಲ್ಲಿ ಇಂದು ನೀವು ಯಾವುದೇ ಆರ್ಥಿಕ ನಷ್ಟವನ್ನು ಹೊಂದಿರಬಹುದು.ಇದರಿಂದ ನಿಮ್ಮ ಪೂರ್ತಿ ದಿನ ಹದಗೆಡಬಹುದು. ನಿಮ್ಮ ಮಕ್ಕಳ ಸಮಸ್ಯೆಗಳನ್ನು ನಿಭಾಯಿಸಲು ಸ್ವಲ್ಪ ಸಮಯ ತೆಗೆದುಕೊಳ್ಳಿ. ಧೃತಿಗೆಡಬೇಡಿ – ವೈಫಲ್ಯಗಳು ಸಹಜ ಅವುಗಳು ಜೀವನದ ಸೌಂದರ್ಯವಾಗಿವೆ. ಕಡಿಮೆ ಅಡೆತಡೆಗಳೊಂದಿಗೆ–ಇದು ಅದ್ಭುತ ಸಾಧನೆಗಳ ದಿನದಂತೆ ಕಾಣುತ್ತದೆ ತಾವು ಬಯಸಿದ್ದು ಸಿಗದಿದ್ದಲ್ಲಿ ಕಿರಿಕಿಯಾಗಿ ವರ್ತಿಸುವ ಸಹೋದ್ಯೋಗಿಗಳ ಎಚ್ಚರದಿಂದಿರಿ.

### ವೃಷಭ ರಾಶಿ

ಹೆಚ್ಚಿನ ಕ್ಯಾಲೊರಿ ಆಹಾರವನ್ನು ತಪ್ಪಿಸಿ ಮತ್ತು ನಿಮ್ಮ ವ್ಯಾಯಾಮವನ್ನು ಕೈಬಿಡಬೇಡಿ. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ. ನಿಮ್ಮ ಅತಿಥಿಗಳ ಜೊತ ಒರಟಾಗಿ ನಡೆದುಕೊಳ್ಳಬೇಡಿ. ನಿಮ್ಮ ವರ್ತನೆ ಕೇವಲ ನಿಮ್ಮ ಕುಟುಂಬಕ್ಕೆ ಮಾತ್ರವೇ ಅಸಮಾಧಾನ ತರದೇ ಸಂಬಂಧಗಳಲ್ಲೂ ಶೂನ್ಯತೆಯನ್ನು ತರಬಹುದು. ನಿಮ್ಮ ಪ್ರೇಮಿಗೆ ಇಷ್ಟವಿಲ್ಲದ ಉಡುಪುಗಳು ಅವರಿಗೆ ಮುಜುಗರ ಉಂಟುಮಾಡಬಹುದಾದ್ದರಿಂದ ಅವುಗಳನ್ನು ಧರಿಸಬೇಡಿ. ನೀವು ಕಷ್ಟಕರವೆಂದು ತೋರುವ ಸಮಸ್ಯೆಗಳನ್ನು ಪರಿಹರಿಸಲು ನಿಮಗಿರುವ ಸಂಪರ್ಕಗಳನ್ನು ಬಳಸಬೇಕಾಗುತ್ತದೆ

### ಮಿಥುನ ರಾಶಿ

ಒಬ್ಬ ಸಂತನಿಂದ ಆಧ್ಯಾತ್ಮಿಕ ಜ್ಞಾನ ಸಾಂತ್ವನ ಮತ್ತು ಆರಾಮವನ್ನು ಒದಗಿಸುತ್ತದೆ. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ. ಕೌಟುಂಬಿಕ ಸಮಸ್ಯೆಗೆ ಮೊದಲ ಆದ್ಯತೆ ನೀಡಬೇಕು. ನೀವು ವಿಳಂಬವಿಲ್ಲದೇ ಇದನ್ನು ಚರ್ಚಿಸಬೇಕು, ಏಕೆಂದರೆ ಒಮ್ಮೆ ಇದನ್ನು ಬಗೆಹರಿಸಿದ ನಂತರ ಮನೆಯಲ್ಲಿನ ಜೀವನ ನಡೆಸಲು ಹೆಚ್ಚು ಸುಲಭವಾಗುತ್ತದೆ ಮತ್ತು ನಿಮ್ಮ ಕುಟುಂಬದ ಸದಸ್ಯರ ಮೇಲೆ ಪ್ರಭಾವ ಬೀರಲು ನಿಮಗೆ ಯಾವುದೇ ತೊಂದರೆ ಕಂಡುಬರುವುದಿಲ್ಲ.

### ಕರ್ಕ ರಾಶಿ

ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ನೀವು ನಿಮ್ಮ ಹೂಡಿಕೆಗಳನ್ನು ಸಂಪ್ರದಾಯಬದ್ಧವಾಗಿ ಉಳಿತಾಯ ಮಾಡಿದರೆ ಹಣ ಮಾಡುತ್ತೀರಿ. ನಿಮಗೆ ಆಶ್ಚರ್ಯವಾಗುವ ಹಾಗೆ ನಿಮ್ಮ ಸಹೋದರ ನಿಮ್ಮನ್ನು ಪಾರು ಮಾಡುತ್ತಾರೆ. ನೀವು ಒಬ್ಬರೊಬ್ಬರನ್ನು ಸಂತೋಷವಾಗಿಡಲು ಒಟ್ಟೊಟ್ಟಿಗೆ ಕೆಲಸ ಮಾಡಬೇಕು.

### ಸಿಂಹ ರಾಶಿ

ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ಹಣದ ಲಾಭ ನಿಮ್ಮ ನಿರೀಕ್ಷೆಯಂತಿರುವುದಿಲ್ಲ. ಸ್ನೇಹಿತರು ಜೊತೆಗಿನ ಚಟುವಟಿಕೆಗಳು ಆಹ್ಲಾದಕರವಾಗಿರುತ್ತವೆ – ಇಲ್ಲದಿದ್ದರೆ ನೀವು ಖಾಲಿ ಕೈಯಲ್ಲಿ ಜೊತೆ ತೆರಳುತ್ತೀರಿ. ಪ್ರಣಯದ ಬಂಧಗಳು ನಿಮ್ಮ ಸಂತೋಷವನ್ನು ಆಸಕ್ತಿಕರವಾಗಿಸುತ್ತವೆ. ಇಂದು ಕೆಲಸದಲ್ಲಿ ನಿಮಗೆ ನಿಜಕ್ಕೂ ಒಳ್ಳೆಯದಾಗಬಹುದು, ಇಂದು ನಿಮ್ಮನ್ನು ದ್ವೇಷಿಸುವವರಿಗೆ 'ಹಲೋ' ಎಂದಲ್ಲಿ.

### ಕನ್ಯಾ ರಾಶಿ

ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ಅನಿರೀಕ್ಷಿತ ಬಿಲ್ಗಳು ಹಣಕಾಸಿನ ಹೊರೆಯನ್ನು ಹೆಚ್ಚಿಸುತ್ತದೆ. ಪ್ರೀತಿ ಸಾಂಗತ್ಯ ಮತ್ತು ಬಂಧ ಏರಿಕೆಯಲ್ಲಿರುತ್ತವೆ. ಪ್ರೀತಿ ಇಂದ್ರಿಯಗಳ ಮಿತಿಯನ್ನು ಮೀರಿದ್ದಾಗಿದೆ, ಆದರೆ ನಿಮ್ಮ ಇಂದ್ರಿಯಗಳು ಇಂದು ಪ್ರೀತಿಯ ಭಾವಪರವಶತೆಯನ್ನು ಅನುಭವಿಸುತ್ತವೆ. ನೀವು ಏನೂ ಮಾಡಿದರೂ ಪರಿಪೂರ್ಣವಾಗಿ ಮಾಡುತ್ತೀರಿ – ನಿಮ್ಮ ಸುತ್ತಲಿನವರಿಗೆ ನೀವೆಷ್ಟು ಪರಿಣಾಮಕಾರಿಯೆಂದು ತೋರಿಸುವ ಮೂಲಕ ನಿಮ್ಮ ಮೌಲ್ಯವನ್ನು ಸಾಬೀತು ಮಾಡಿ.

### ತುಲಾ ರಾಶಿ

ಇತ್ತೀಚೆಗೆ ನಿಮ್ಮಲ್ಲಿ ಕೆಲವರು ಓವರ್ಟೈಮ್ ಮಾಡುತ್ತಿರುತ್ತಾರೆ ಹಾಗೂ ನಿಮ್ಮ ಚೈತನ್ಯ ಉಡುಗುತ್ತಿರುತ್ತದೆ– ಇಂದು ನೀವು ಒತ್ತಡ ಹಾಗೂ ಸಂದಿಗ್ಧತೆಯನ್ನು ಬಯಸುವುದಿಲ್ಲ. ಯಾವುದೇ ಆಪ್ತ ಸಂಬಂಧಿಕರ ಬೆಂಬಲದಿಂದ ನೀವು ನಿಮ್ಮ ವ್ಯಾಪಾರದಲ್ಲಿ ಉತ್ತಮವಾಗಿ ಮಾಡಬಹುದು. ಇದು ನಿಮಗೆ ಆರ್ಥಿಕ ಲಾಭವನ್ನು ನೀಡುತ್ತದೆ. ಒಬ್ಬ ಹತ್ತಿರದ ಸಂಬಂಧಿಗೆ ಹೆಚ್ಚು ಗಮನ ನೀಡಬೇಕಾಗಬಹುದಾದರೂ ಅವರು ಬೆಂಬಲ ಮತ್ತು ಆರೈಕೆ ನೀಡಬಹುದು. ಪ್ರಣಯದ ಅವಕಾಶಗಳಿವೆ – ಆದರೆ ಅವು ಕ್ಷಣಿಕವಾಗಿರುತ್ತವೆ

### ವೃಶ್ಚಿಕ ರಾಶಿ

ನಿಮ್ಮ ಮಗುವಿನಂಥ ಸ್ವಭಾವ ಕಾಣಿಸಿಕೊಳ್ಳುತ್ತದೆ ಮತ್ತು ನೀವು ಒಂದು ಆಹ್ಲಾದಕಾರಿ ಮನಸ್ಥಿತಿಯಲ್ಲಿರುತ್ತೀರಿ. ತಮ್ಮ ವ್ಯಾಪರಕ್ಕಾಗಿ ಮನೆಯಿಂದ ಹೊರಗೆ ಹೋಗಿರುವ ವ್ಯಾಪಾರಿಗಳು, ತನ್ನ ಹಣವನ್ನು ಜಾಗರೂಕವಾಗಿಡಿ, ಹಣದ ಕಳ್ಳತನವಾಗುವ ಸಾಧ್ಯತೆ ಇದೆ. ಥಿಯೇಟರ್ ಅಥವಾ ನಿಮ್ಮ ಸಂಗಾತಿಯ ಜೊತೆಗಿನ ಊಟ ನಿಮ್ಮನ್ನು ಒಂದು ಶಾಂತವಾದ ಮತ್ತು ಅದ್ಭುತ ಲಹರಿಯಲ್ಲಿರಿಸುವಂತೆ ತೋರುತ್ತದೆ.

### ಧನು ರಾಶಿ

ಕ್ರೀಡೆಗಳು ಸಾರ್ವಕಾಲಿಕ ಯೌವನದ ರಹಸ್ಯವಾಗಿದ್ದರಿಂದ ಯಾವುದಾದರೂ ಆಟಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ನಿಮ್ಮ ಸಹಾನುಭೂತಿ ಮತ್ತು ತಿಳುವಳಿಕೆಗೆ ಪ್ರತಿಫಲ ದೊರಕುತ್ತದೆ. ಆದರೆ ಯಾವುದೇ ಆತುರದ ತೀರ್ಮಾನ ಒತ್ತಡ ಉಂಟುಮಾಡಬಹುದಾದ್ದರಿಂದ ಎಚ್ಚರಿಕೆಯಿಂದಿರಿ.

### ಮಕರ ರಾಶಿ

ನಿಮ್ಮ ಚಿಂತನೆ ಮತ್ತು ಶಕ್ತಿಯನ್ನು ನೀವು ವಾಸ್ತವವಾಗಿ ಏನನ್ನು ನೋಡಬಯಸುತ್ತೀರೋ ಅದನ್ನು ಸಾಧಿಸುವಲ್ಲಿ ನಿರ್ದೇಶಿಸಿ. ಇದುವರೆಗೆ ನಿಮ್ಮ ಸಮಸ್ಯೆಯಂದರೆ ನೀವು ಪ್ರಯತ್ನಿಸದೇ ಕೇವಲ ಆಸೆಪಡುತ್ತೀರಿ. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು.

### ಕುಂಭ ರಾಶಿ

ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ ಎಂದು ಭರವಸೆ ಇದೆ. ಇಂದು ನೀವು ಇತರರ ಅಗತ್ಯಗಳಿಗೆ ಗಮನ ನೀಡಬೇಕಾದರೂ ಮಕ್ಕಳೊಂದಿಗೆ ಅತೀ ಉದಾರತೆ ತೋರಿಸುವುದು ತೊಂದರೆಗೆ ಕಾರಣವಾಗುತ್ತದೆ.

### ಮೀನ ರಾಶಿ

ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ವಿಶ್ವಾಸರಾಹಿತ್ಯ ಅಹಂಭಾವ ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ. ಇಂದು, ನೀವು ಸಾಕಷ್ಟು ಸಕಾರಾತ್ಮಕತೆಯೊಂದಿಗೆ ಮನೆಯಿಂದ ಹೊರಬರುತ್ತೀರಿ, ಆದರೆ ಕೆಲವು ಅಮೂಲ್ಯ ವಸ್ತುವಿನ ಕಳ್ಳತನದಿಂದಾಗಿ, ನಿಮ್ಮ ಮನಸ್ಥಿತಿಗೆ ತೊಂದರೆಯಾಗಬಹುದು.

# ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳ, ದೇಶಾಭಿವೃದ್ದಿಯಲ್ಲಿ ಯುವ ಜನರ ಪಾತ್ರ ಬಹಳ ಅಗತ್ಯ: ಸಂಸದರಾದ ಡಾ:ಪ್ರಭಾ ಮಲ್ಲಿಕಾರ್ಜುನ್



**ದಾವಣಗೆರೆ :** ಯುವಕರು ದೇಶದ ಅಭಿವೃದ್ಧಿಯಲ್ಲಿ ಪ್ರಮುಖವಾಗಿದ್ದು ನಿಮ್ಮ ಕೆಲಸದ ಜೊತೆಗೆ ಕುಟುಂಬದ ಜವಾಬ್ದಾರಿಯನ್ನು ನಿಭಾಯಿಸುವ ಮೂಲಕ ಸಮಾಜಕ್ಕೆ ಒಳ್ಳೆಯ ಕೊಡುಗೆ ನೀಡಬೇಕು ಎಂದು ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಹಾಗೂ ಜಿಲ್ಲಾ ಕೌಶಲ್ಯ ಮಿಷನ್ ಇವರ ಸಹಯೋಗದಲ್ಲಿ ಸರ್ಕಾರಿ ಐ.ಟಿ.ಐ ಕಾಲೇಜು ಆವರಣದಲ್ಲಿ ಏರ್ಪಡಿಸಲಾದ ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳವನ್ನು ಉದ್ಘಾಟಿಸಿ ಮಾತನಾಡಿದರು. ಬೃಹತ್ ಉದ್ಯೋಗ ಮೇಳದಲ್ಲಿ ಸುಮಾರು 69 ಪ್ರಮುಖ ಕಂಪನಿಗಳು ಭಾಗವಹಿಸಿವೆ. ಇದರಲ್ಲಿ ಐಟಿಐಗೆ ಸಂಬಂಧಿಸಿದ 11 ಕಂಪನಿಗಳು ಭಾಗವಹಿಸಿವೆ. ಉದ್ಯೋಗಕ್ಕಾಗಿ ಆನ್ಲೈನ್ನಲ್ಲಿ 5413 ಜನ ಅಭ್ಯರ್ಥಿಗಳು, ಆಫ್ಲೈನ್ನಲ್ಲಿ 2500 ಸೇರಿ ಒಟ್ಟು 7913 ಅಭ್ಯರ್ಥಿಗಳು ನೋಂದಾಯಿಸಿಕೊಂಡಿರುವರು,

ಇದರಲ್ಲಿ 2097 ಪುರುಷರು, 2427 ಮಹಿಳೆಯರು, 395 ಅಂಗವಿಕಲರು, 13 ತೃತೀಯ ಲಿಂಗದ ಅಭ್ಯರ್ಥಿಗಳು ನೋಂದಾಯಿಸಿದ್ದಾರೆ. ಇದರಲ್ಲಿ ಸುಮಾರು 15 ಅಭ್ಯರ್ಥಿಗಳಿಗೆ ಸಾಂಕೇತಿಕವಾಗಿ ಉದ್ಯೋಗದ ನೇಮಕಾತಿ ಆದೇಶ ನೀಡಿದರು. ಅಭ್ಯರ್ಥಿಗಳ ಕುರಿತು ಸಂಸದರು ಮಾತನಾಡಿ ಕಂಪನಿಗಳು ನಿಮ್ಮನ್ನು ಆಯ್ಕೆ ಮಾಡಿಕೊಂಡಿವೆ, ಆದರೆ ನೀವು ಆ ಕೆಲಸಕ್ಕೆ ಹೋಗುವುದೇ ಇಲ್ಲ. ಉದ್ಯೋಗ ಪ್ರಮುಖವಾಗಿದ್ದು ಸೇವೆ ಮಾಡಿದ ನಂತರ ಅನುಭವದ ಮೇಲೆ ಇತರೆ ಕಂಪನಿಗಳಿಗೂ ತೆರಳುವ ಅವಕಾಶವಿರುತ್ತದೆ.

ಯುವಕರು ವಿದ್ಯಾಭ್ಯಾಸದ ಜೊತೆಗೆ ಉದ್ಯೋಗ ಕೈಗೊಳ್ಳುವ ಮೂಲಕ ಆರ್ಥಿಕಾಭಿವೃದ್ಧಿ ಯಲ್ಲಿ ಕೈಜೋಡಿಸಬೇಕು. ಗ್ಯಾರಂಟಿ ಯೋಜನೆಯಲ್ಲಿ ಒಂದಾದ ಯುವನಿಧಿ ಯೋಜನೆಗೆ ಜಿಲ್ಲೆಯಲ್ಲಿ 6226 ಪದವೀಧರರು, 119 ಡಿಪ್ಲೋಮಾ ವಿದ್ಯಾರ್ಥಿಗಳಿದ್ದು, ಒಟ್ಟು 6345 ನಿರುದ್ಯೋಗಿಗಳು ಯುವನಿಧಿ ಯೋಜನೆಯ ಉಪಯೋಗ ಪಡೆದುಕೊಳ್ಳುತ್ತಿದ್ದಾರೆ ಎಂದರು.

ದಾವಣಗೆರೆ ಆರಾಧ್ಯ ಸ್ಟೀಲ್ ಕಂಪನಿಯವರಿಗೆ 100 ಜನ ಕೆಲಸಗಾರರ ಅವಶ್ಯಕತೆ ಇದ್ದು, ಯಾರಿಗಾದರೂ ಆಸಕ್ತಿ ಇದ್ದರೆ ಕೆಲಸ ನಿರ್ವಹಿಸಬಹುದು. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಕಾರ್ಯಕ್ರಮ ಹಾಕಿಕೊಂಡು ಯುವ ಜನರಿಗೆ ಅನುಕೂಲ ಮಾಡಿಕೊಡಲಾಗುತ್ತದೆ ಎಂದರು.

ರೆಡ್ ಕ್ರಾಸ್ ಸಂಸ್ಥೆಯವರಿಂದ ರಕ್ತದಾನ ಶಿಬಿರ ಏರ್ಪಡಿಸಿದ್ದು, 18 ರಿಂದ 45 ವರ್ಷ ವಯಸ್ಸಿನವರು ರಕ್ತ ದಾನ ಮಾಡಬಹುದೆಂಬ ಮಾಹಿತಿ ನೀಡಿದರು.

ಪ್ಲಾಸ್ಟಿಕ್ ವಸ್ತುಗಳನ್ನು ನಿಷೇಧ ಮಾಡುವುದಕ್ಕಾಗಿ ಕ್ರಷ್ ಮಿಷನ್ನ್ನು ಉದ್ಘಾಟಿಸಿದರು.

ಎಸ್.ಎಸ್.ಕೇರ್ ಟ್ರಸ್ಟ್: ಸುಮಾರು 22000 ಜನರಿಗೆ ಡಯಾಲಿಸಸ್ನ್ನು ಉಚಿತವಾಗಿ ಮಾಡಲಾಗಿದೆ. ಸುಕ್ಷೇಮ ಕಾರ್ಯಕ್ರಮವನ್ನು ಏರ್ಪಡಿಸಿದ್ದು, ಇದರ ಉದ್ದೇಶ ಪಿಯುಸಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನೀಟ್ ಮತ್ತು ಸಿಇಟಿ ಕೋಚಿಂಗ್ ನೀಡಲಾಗಿದ್ದು, ಇದರಲ್ಲಿ 200 ಜನ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿ ಅವರಿಗೆ ಉಚಿತವಾಗಿ ಟ್ಯೂಷನ್ ವ್ಯವಸ್ಥೆ, ಹಾಸ್ಟೆಲ್ ವ್ಯವಸ್ಥೆ ಮಾಡಲಾಗುವುದು.

ಜಿಲ್ಲೆಯ ಜಗಳೂರು ತಾಲೂಕಿನ ದೊಡ್ಡಬೊಮ್ಮನಹಳ್ಳಿಯ ಪೂಜಾ ಡಿ. ಇವರು 2023 ರಲ್ಲಿ ಬಿ.ಇ ಸಿವಿಲ್ ಇಂಜಿನಿಯರಿಂಗ್ ಪದವೀಧರೆಯಾಗಿದ್ದು, ಸ್ಪರ್ಧಾತ್ಮಕ ಪರೀಕ್ಷೆಗೆ ತಯಾರಿ ನಡೆಸುತ್ತಿದ್ದೇನೆ. ಈ ಮೇಳದಲ್ಲಿ ಸುಮಾರು 6 ವಿವಿಧ ಕಂಪನಿಗಳಿಗೆ ಸಂದರ್ಶನ ನೀಡಿದ್ದು , ಪುಣೆ ಅಥವಾ ಬೆಂಗಳೂರಿನಲ್ಲಿ ಉದ್ಯೋಗಾವಕಾಶ ಸಿಗುವ ನಿರೀಕ್ಷೆ ಇದೆ ಎಂದು ಆಶಯ ವ್ಯಕ್ತಪಡಿಸಿದರು.

ಜಗಳೂರು ತಾಲ್ಲೂಕಿನ ವಿಶೇಷ ಚೇತನ ವ್ಯಕ್ತಿ ತಿಪ್ಪೇಸ್ವಾಮಿ 2020 ರಲ್ಲಿ ಬಿ.ಎ ಪದವಿ ಪಡೆದಿದ್ದಾರೆ. ಪದವಿ ನಂತರ ಏರ್ಟೆಲ್ ಟೆಲಿಕಾಂ ಕಂಪನಿ ಮತ್ತು ಇನ್ನಿತರೆ ಖಾಸಗಿ ಕಚೇರಿಗಳಲ್ಲಿ ಕಾರ್ಯನಿರ್ವಹಿಸಿದ್ದು. ವಿದ್ಯಾಭ್ಯಾಸಕ್ಕೆ ತಕ್ಕ ಉದ್ಯೋಗ ಸಿಗಬಹುದೆಂದು ಮೇಳದಲ್ಲಿ ಭಾಗಿಯಾಗಿರುವುದಾಗಿ ಹೇಳಿದರು.

ವಿಜಯನಗರ ಜಿಲ್ಲೆಯ ಹರಪನಹಳ್ಳಿ ತಾಲೂಕಿನ ಸಿದ್ದೇಶ್ ಎಂಬುವವರು 2023ರಲ್ಲಿ ಪಿಯುಸಿ ನಂತರ ಬಿ.ಎ ಪದವಿಯನ್ನು ಬಡತನ, ಮನೆ ನಿರ್ವಹಹಣೆ ಕಾರಣಕ್ಕೆ ವಿದ್ಯಾಭ್ಯಾಸವನ್ನು ಮೊಟಕುಗೊಳಿಸಿ ಸನ್ನೇರಾ ಖಾಸಗಿ ಕಂಪನಿಯಲ್ಲಿ 2ವರ್ಷಗಳಿಂದ ಕೆಲಸ ಮಾಡುತ್ತಿದ್ದೇನೆ. ಸ್ಥಳೀಯವಾಗಿ ಉದ್ಯೋಗ ಮಾಡುವ ಇಚ್ಛೆಯಿಂದ ಮೇಳದಲ್ಲಿ ಪಾಲ್ಗೊಂಡಿದ್ದೇನೆ.

ಜಿಲ್ಲೆಯ ಸ್ಥಳೀಯ ನಿವಾಸಿ ದಯಾನ ತೃತೀಯ ಲಿಂಗಿಯಾಗಿದ್ದು, ಪಿಯುಸಿ ವಿದ್ಯಾರ್ಹತೆ ಹೊಂದಿದ್ದು, ಮೇಳದಲ್ಲಿ ನಮಗೂ ಅವಕಾಶ ನೀಡಿದ್ದು ಖುಷಿಯಾಗಿದೆ. ಅಲ್ಲದೇ ಮುಂದೆ ನಮಗೂ ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗ ನೀಡುವ ಭರವಸೆಯನ್ನು ನೀಡಿದ್ದಕ್ಕಾಗಿ ಜಿಲ್ಲಾಡಳಿತಕ್ಕೆ ಧನ್ಯವಾದ ತಿಳಿದರು.

ಸ್ಥಳೀಯ ಕಂಪನಿಗಳಿಗೆ ಅವಕಾಶ ನೀಡದೆ ಹೊರ ರಾಜ್ಯ, ಜಿಲ್ಲೆಗಳಿಗೆ ಅವಕಾಶ ನೀಡಿದೆ. ಸ್ಥಳೀಯ ಕಂಪನಿಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರೆ, ಇನ್ನಷ್ಟು ಉಪಯೋಗ ವಾಗುತ್ತಿತ್ತು. ಸ್ಥಳೀಯ ನಿವಾಸಿ ಸುಷ್ಮಿತಾ ಬಿ.ಸಿ,ಎ ಪದವೀಧರೆಜಿಲ್ಲೆಯ ಐಗೂರು ನಿವಾಸಿ ಶಿವಕುಮಾರ್ ಕೆ.ಹೆ.ಚ್. 2015ರಲ್ಲಿ ಬಿಕಾಂ ಪದವಿ ಪಡೆದು 7 ವರ್ಷಗಳ ಕಾಲ ಲ್ಯಾಬ್ ಟೆಕ್ನಿಶಿಯನ್ ಆಗಿ ಕೆಲಸ ಮಾಡುತ್ತಿದ್ದೇನೆ. ಸ್ಥಳೀಯ ಮಟ್ಟದಲ್ಲಿ ಮೇಳ ಆಯೋಜನೆ ಮಾಡಿರುವುದು ಸಂತೋಷದ ಸಂಗತಿ. ರಾಜ್ಯ ತಾಂಡ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಯದೇವನಾಯ್ಕ, ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಆಸಗೋಡು ಜಯಸಿಂಹ, ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಜಿ.ಪಂ ಸಿಇಓ ಡಾ.ಸುರೇಶ್.ಬಿ.ಇಟ್ನಾಳ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಶಿವಕುಮಾರ ಮಲ್ಲಾಡದ, ಐಟಿಐ ಕಾಲೇಜಿನ ಪ್ರಾಚಾರ್ಯರರಾದ ಏಕನಾಥ.ಎನ್, ಆಯುಕ್ತೆ ರೇಣುಕಾ ಉಪಸ್ಥಿತರಿದ್ದರು.

# ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ




**ದಾವಣಗೆರೆ:** ನಗರದ ಶ್ರೀಮತಿ ಸಹನ ರವಿ ಇಂಟರ್ ನ್ಯಾಷನಲ್ ಶಾಲೆಯಲ್ಲಿ ಶುಕ್ರವಾರ ಶಾರದಾ ಪೂಜೆ ಹಾಗೂ ಎಸ್ಎಸ್ಎಲ್ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ವಕೀಲರಾದ ಅಮೀರಾ ಬಾನು ಮಾತನಾಡಿ, ಶಿಕ್ಷಣ ನಮ್ಮ ಬದುಕಿಗೆ ಅತ್ಯವಶ್ಯ. ಓದುವ ಸಮಯದಲ್ಲಿ ಶ್ರದ್ಧೆಯಿಟ್ಟು ಓದಿದರೆ ಯಶಸ್ಸು ಕಟ್ಟಿಟ್ಟ ಬುತ್ತಿ. ನೀವು ನಿಮ್ಮ ಕಾಲ ಮೇಲೆ ನಿಂತಾಗ ನಿಮಗಾಗಿ ಶ್ರಮಿಸಿದ ನಿಮ್ಮ ತಂದೆ ತಾಯಿಗಳನ್ನು ಮರೆಯದೆ, ಪ್ರೀತಿಯಿಂದ ನೋಡಿಕೊಳ್ಳಿರಿ. ಸದಾ ಗೌರವದಿಂದ ಕಾಣಿರಿ ಎಂದು ಕಿವಿಮಾತು ಹೇಳಿದರು. ಪತ್ರಕರ್ತೆ ದೇವಿಕಾ ಸುನೀಲ್ ಮಾತನಾಡಿ, ಎಸ್ಸೆಸ್ಸೆಲ್ಸಿ ನಿಮ್ಮ ಭವಿಷ್ಯ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಈ ಸಮಯವನ್ನು ನಿರ್ಲಕ್ಷಿಸಿದೆ, ಓದಿನ ಕಡೆಗೆ ಗಮನ ನೀಡಿ. ಕಷ್ಟಪಟ್ಟು ದುಡಿ-ದು ಓದಿಸುತ್ತಿರುವ ನಿಮ್ಮ ಪೋಷಕರಿಗೆ, ವಿದ್ಯೆ ನೀಡಿ ಸುಶಿಕ್ಷಿತರನ್ನಾಗಿಸುತ್ತಿರುವ ಗುರುಗಳಿಗೆ ಹೆಮ್ಮೆ ಎನಿಸುವ ಹಾಗೆ ನಡೆದುಕೊಳ್ಳಿ. ಈ ಶಾಲೆಯಲ್ಲಿ ವಿದ್ಯೆಯ ಜೊತೆಗೆ ಉತ್ತಮ ಸಂಸ್ಕಾರವನ್ನು ಸಹ ನೀಡುತ್ತಿದ್ದು, ನೀವುಗಳು ಕೇವಲ ದುಡಿಮೆಯ ದೃಷ್ಟಿಯಿಂದ ಓದದೆ, ಸಮಾಜ, ದೇಶಕ್ಕಾಗಿ ಕೊಡುಗೆ ನೀಡುವ ಪ್ರಜೆಗಳಾಗಿ ಎಂದು ಹಾರೈಸಿದರು. ಶಾಲೆಯ ಕಾರ್ಯದರ್ಶಿ ಸಹನಾ ರವಿ ಮಾತನಾಡಿ, ಮಕ್ಕಳು ಪ್ರತಿಭಾವಂತರಾಗಬೇಕಾದರೆ ಮನೆಯಲ್ಲಿ ಪೋಷಕರು ಹಾಗೂ ಶಾಲೆಯಲ್ಲಿ ಶಿಕ್ಷಕರ ಶ್ರಮ ಅತ್ಯಮೂಲ್ಯವಾಗಿರುತ್ತದೆ. ಶಾಲೆಯಲ್ಲಿ ಉತ್ತಮ ಸಂಸ್ಕಾರ ಸಂಸ್ಕೃತಿಯನ್ನು ಕಲಿಸುವುದರಿಂದ ಮಕ್ಕಳ ಪ್ರತಿಭೆ ಹೆಚ್ಚುತ್ತದೆ ಎಂದರು. ಈ ಕಾರ್ಯಕ್ರಮದಲ್ಲಿ ಸಮಾಜ ಸೇವಕರಾದ ಸರೋಜ ಸಿದ್ದಪ್ಪ ಮಕ್ಕಳಿಗೆ ಶುಭ ಹಾರೈಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲಾ ಮಂಡಳಿ ಅಧ್ಯಕ್ಷ ರವಿ ವಹಿಸಲಿದ್ದರು. ಪ್ರಾಂಶುಪಾಲೆ ಸಿಂಡ್ರೆಲಾ ಉಪಸ್ಥಿತರಿದ್ದರು. ಮಕ್ಕಳು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು. ಶಿಕ್ಷಕರು ಹಿತನುಡಿಗಳನ್ನಾಡಿದರು. ಕಾರ್ಯಕ್ರಮದಲ್ಲಿ ಶಿಕ್ಷಕ ಹಾಗೂ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಹಾಜರಿದ್ದರು.

# ಗ್ಯಾರಂಟಿ ಕಚೇರಿ ತೆರೆದು ಜನತೆಗೆ ಸೌಲಭ್ಯ : ಹೆಚ್.ಡಿ. ತಮ್ಮಯ್ಯ



**ಚಿಕ್ಕಮಗಳೂರು:** ಪಂಚ ಗ್ಯಾರಂಟಿಗಳು ಜನಸಾಮಾನ್ಯರಿಗೆ ಸಮಗ್ರವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಜಿಲ್ಲೆ ಸೇರಿದಂತೆ ಪ್ರತಿ ತಾಲ್ಲೂಕಿನಲ್ಲಿ ಗ್ಯಾರಂಟಿ ಕಚೇರಿ ತೆರೆದು ಕುಂದುಕೊರತೆ ಮತ್ತು ಸೌಲಭ್ಯ ತಲುಪಿಸುವ ಕಾರ್ಯ ರಾಜ್ಯಸರ್ಕಾರ ಮಾಡುತ್ತಿದೆ ಎಂದು ಶಾಸಕ ಹೆಚ್.ಡಿ.ತಮ್ಮಯ್ಯ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಕಟ್ಟಡದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ನವೀಕೃತ ಕಚೇರಿಯಲ್ಲಿ ಶನಿವಾರ ಪೂಜಾ ಕೈಂಕಾರ್ಯ ನೆರವೇರಿಸಿ ಅವರು ಮಾತನಾಡಿದರು.

ವಿಶೇಷವಾಗಿ ಗ್ಯಾರಂಟಿ ಯೋಜನೆಗಳಲ್ಲಿ ಮಹಿಳೆಯರಿಗೆ ಶಕ್ತಿ, ಗೃಹಲಕ್ಷ್ಮೀ ಯೋಜನೆ ರೂಪಿಸಿ ಮಹಿಳಾ ಸಬಲೀಕರಣಕ್ಕೆ ಕೈ ಜೋಡಿಸಿದೆ. ಪ್ರಸ್ತುತ ಗೃಹಲಕ್ಷ್ಮೀ ಹಣದಿಂದ ಇಂದು ಹಲವಾರು ಕುಟುಂಬಗಳು ವೈಯಕ್ತಿಕ ಖರ್ಚು, ಮನೆಗಳಿಗೆ ಉಪಯೋಗಿ ವಸ್ತುಗಳನ್ನು ಖರೀದಿಸಿ ಯೋಜನೆಯ ಸೌಲಭ್ಯವನ್ನು ಸಮರ್ಪಕವಾಗಿ ಬಳಸಿಕೊಂಡಿದ್ದಾರೆ ಎಂದರು.

ರಾಜ್ಯಸರ್ಕಾರ ಜಾತಿ-ಧರ್ಮ, ಮೇಲು-ಕೀಳು ಎಂಬ ತಾರತಮ್ಯ ಎಸಗದೇ ಮುಖ್ಯಮಂತ್ರಿಗಳು ಪ್ರತಿ ಕುಟುಂಬಕ್ಕೆ ಯೋಜನೆ ಕಲ್ಪಿಸಿದೆ. ಕೆಲವೇ ಕುಟುಂಬಗಳು ಆಧಾರ ತೆರಿಗೆ ಭರಿಸುವ ಹಾಗೂ ಇನ್ನಿತರೆ ದಾಖಲಾತಿಗಳ ವ್ಯತ್ಯಾಸದಿಂದ ಸೌಲಭ್ಯ ದೊರಕಿಲ್ಲ. ಹೀಗಾಗಿ ಗ್ಯಾರಂಟಿ ಪ್ರಾಧಿಕಾರದ ಪದಾಧಿಕಾರಿಗಳು ಪರಿಶೀಲಿಸಿ ಸೌಲಭ್ಯ ಒದಗಿಸಬೇಕು ಎಂದರು.

ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ. ಶಿವಾನಂದಸ್ವಾಮಿ ಮಾತನಾಡಿ ಬಡವರು ಸೇರಿದಂತೆ ಸರ್ವ ಸಮಾಜಕ್ಕೂ ಪಂಚ ಗ್ಯಾರಂಟಿ ಯೋಜನೆಗಳು ಉಪಯೋಗವಾಗಿದೆ. ಹೀಗಾಗಿ ರಾಜ್ಯಾದ್ಯಂತ ಜಿಲ್ಲೆ ಗ್ಯಾರಂಟಿ ಯೋಜನೆ ಸದ್ಬಳಕೆಯಲ್ಲಿ ಮೊದಲ ಸ್ಥಾನ ಪಡೆದುಕೊಂಡಿದೆ ಎಂದು ತಿಳಿಸಿದರು.

ಈ ಹಿಂದೆ ಕಚೇರಿಯನ್ನು ತಾತ್ಕಾಲಿಕವಾಗಿ ಜಿ.ಪಂ. ಕಟ್ಟಡದ ಸ್ಥಾಯಿ ಸಮಿತಿ ಕೊಠಡಿಯಲ್ಲಿತ್ತು. ಇದೀಗ ಸಿಇಓ ಸಹಕಾರದಿಂದ ಮೂರನೇ ಮಹಡಿಯಲ್ಲಿ ಮಿನಿ ಸಭಾಂಗಣ, ಅಧ್ಯಕ್ಷ ಕಚೇರಿ ಒಳಗೊಂಡಿರುವ ಸಕಲಸೌಲಭ್ಯಗಳಿಂದ ಕೂಡಿರುವ ನವೀಕರಣ ಕಚೇರಿ ತೆರೆಯಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹೆಚ್.ಎಸ್. ಕೀರ್ತನಾ, ಉಪ ಕಾರ್ಯದರ್ಶಿ ಶಂಕರ್ ಕೊರವರ್, ಮುಖ್ಯ ಯೋಜನಾಧಿಕಾರಿ ರಾಜು ಗೋಪಾಲ್, ಜಿಲ್ಲಾ ಗ್ಯಾರಂಟಿ ಉಪಾಧ್ಯಕ್ಷ ಎಸ್.ಎನ್.ಮಂಜುನಾಥ್, ಸದಸ್ಯರಾದ ಆರ್. ಎಂ.ಬಸವರಾಜ್, ಮಲ್ಲೇಶಸ್ವಾಮಿ, ರಾಜು, ಕಲ್ಲೇಶ್ ಮತ್ತಿತರರು ಉಪಸ್ಥಿತರಿದ್ದರು.

# ಸ್ವದೇಶಿ ವಸ್ತುಗಳ ಖರೀದಿಸಿ : ಜಿಲ್ಲಾಧಿಕಾರಿ




**ಹಾಸನ :** ಪ್ರತಿಯೊಬ್ಬರು ಸ್ವದೇಶಿ ವಸ್ತುಗಳನ್ನು ಖರೀದಿಸಿ ಬಳಸುವ ಮೂಲಕ ದೇಶದ ಬಗ್ಗೆ ಪ್ರೀತಿ ಬೆಳೆಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ ಸತ್ಯಭಾಮ ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗ, ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಮಾಹಿತಿ ಕೇಂದ್ರ ಹಾಗೂ ವಾಣಿಜ್ಯ ಶಾಸ್ತ್ರ ವಿಭಾಗ ಮಹಿಳಾ ಪ್ರಥಮ ದರ್ಜೆ ಕಾಲೇಜು ಇವರ ಸಂಯುಕ್ತಾಶ್ರದಲ್ಲಿಂದು ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ಏರ್ಪಡಿಸಲಾಗಿದ್ದ ವಿಶ್ವ ಗ್ರಾಹಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ನಾಗರೀಕರು ಯಾವುದೇ ವಸ್ತುವನ್ನು ಖರೀದಿಸುವಾಗ ಜವಾಬ್ದಾರಿಯಿಂದ ಗುಣಮಟ್ಟ, ದರ, ತೂಕ ಅಳತೆಯ ಬಗ್ಗೆ ಗಮನಹರಿಸಿ ತೆಗೆದುಕೊಳ್ಳುವಂತೆ ತಿಳಿಸಿದರು.

ಹೆಚ್ಚಿನ ಲಾಭಗಳಿಸುವ ಉದ್ದೇಶದಿಂದ ವ್ಯಾಪಾರಸ್ಥರು ಕಲಬೆರಕೆ ಮಾಡಿ ಮಾರಾಟ ಮಾಡುತ್ತಾರೆ ಈ ನಿಟ್ಟಿನಲ್ಲಿ ನಾಗರೀಕರು ಖರೀದಿ ಮಾಡುವ ಸಂದರ್ಭದಲ್ಲಿ ಪದಾರ್ಥಗಳನ್ನು ಪರಿಶೀಲಿಸಿ ತೆಗೆದುಕೊಳ್ಳಬೇಕು ಎಂದರು.

ಮೊದಲನೆಯದಾಗಿ ವಸ್ತುಗಳ ಬ್ರಾಂಡ್ ಹಾಗೂ ಅದರ ಮೌಲ್ಯದ ಬಗ್ಗೆ ಗಮನಹರಿಸಿ ಸಾಮಾನ್ಯ ಜ್ಞಾನದಿಂದ ಅರಿತುಕೊಂಡು ತಿಳುವಳಿಕೆಯಿಂದ ಸುಲಲಿತವಾಗಿ ವ್ಯವಹಾರಿಸಬೇಕು ಎಂಬುದನ್ನು ಉದಾಹರಣೆ ನೀಡುವ ಮೂಲಕ ತಿಳಿಸಿದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಡಿ.ಟಿ ಪ್ರಸನ್ನ ಅವರು ಮಾತನಾಡಿ ಅವರು ಗ್ರಾಹಕರು ಮೋಸ ಹೋಗದಂತೆ ಪ್ರಜ್ಞಾವಂತರಾಗಿ ಕೊಳ್ಳುವಾಗ ಎಚ್ಚರವಹಿಸುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯರಾದ ಅನುಪಮ ಆರ್, ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕರಾದ ಅರುಣ್ ಕುಮಾರ್ ಶಿಗ್ಗಾಂವಿ, ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ.ಕವಿತ.ಕೆ.ಜಿ, ಮಹಿಳಾ ಪ್ರಥಮ ದರ್ಜೆ ಕಾಲೇಜಿನ ವಾಣಿಜ್ಯ ಶಾಸ್ತ ವಿಭಾಗದ ಮುಖ್ಯಸ್ಥರಾದ ರಾಜಶೇಖರ ಜಿ.ಜೆ ಭಾಗವಹಿಸಿದ್ದರು.

# ನೋಡುಗರ ಕಣ್ಮನ ಸೆಳೆದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ

**ದಾವಣಗೆರೆ :** ನಗರದ ಹೈಸ್ಕೂಲ್ ಶಾಲಾ ಆವರಣದಲ್ಲಿ ಶನಿವಾರ ಜಿಲ್ಲಾ ಪಂಚಾಯತ್, ರಾಷ್ಟ್ರೀಯ ಗ್ರಾಮೀಣಾಭಿವೃದ್ಧಿ ಜೀವನೋಪಾಯ ಅಭಿಯಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ ವಿಸಂಜೀವಿನಿ ಸ್ವ ಸಹಾಯ ಗುಂಪುಗಳ ಉತ್ಪಾದಿತ ಉತ್ಪನ್ನಗಳ ಜಿಲ್ಲಾ ಮಟ್ಟದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳಹಿ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಉದ್ಘಾಟಿಸಿದರು. ಮೇಳದಲ್ಲಿ ಜಿಲ್ಲೆಯ ಚನ್ನಗಿರಿ, ದಾವಣಗೆರೆ, ಹರಿಹರ, ಹೊನ್ನಾಳಿ, ಜಗಳೂರು ಹಾಗೂ ನ್ಯಾಮತಿ ತಾಲ್ಲೂಕಿನ ಒಟ್ಟು 39 ಸ್ವ-ಸಹಾಯ ಗುಂಪುಗಳ ಸದಸ್ಯರು ವಸ್ತು ಪ್ರದರ್ಶನದಲ್ಲಿ ಪಾಲ್ಗೊಂಡಿದ್ದರು. ವಸ್ತುಗಳ ಪ್ರದರ್ಶನ ಮತ್ತು ಮಾರಾಟಕ್ಕಾಗಿ ಸುಮಾರು 20ಕ್ಕೂ ಹೆಚ್ಚು ಮಳಿಗೆಗಳನ್ನು ಒದಗಿಸಲಾಗಿದ್ದು, ವಸ್ತುಪ್ರದರ್ಶನ ಮಳಿಗೆಗಳಿಗೆ ದಂಡು ದಂಡೋಪಾದಿಯಲ್ಲಿ ಜನರು ಬಂದ ದೃಶ್ಯ ಕಂಡುಬಂದಿತು. ಅದರಲ್ಲೂ ಪ್ರಮುಖವಾಗಿ ಜಿಲ್ಲೆಯ ವಿವಿಧ ಸ್ವ-ಸಹಾಯ ಗುಂಪುಗಳು ಉತ್ಪಾದಿಸಿರುವ ತಿಂಡಿ ತಿನಿಸುಗಳು, ಆಯುರ್ವೇದಿಕ್ ಹೇರ್ ಆಯಿಲ್, ಮಣ್ಣಿನಿಂದ ತಯಾರಿಸಿದ ವಸ್ತುಗಳು, ಕರ ಕುಶಲತೆಯಿಂದ ತಯಾರಿಸಿದ ವೈರ್ ಬ್ಯಾಗ್, ಜ್ಯೂಟ್ ಬ್ಯಾಗ್, ಅಲಂಕಾರಿಕ ವಸ್ತುಗಳು, ರಾಗಿ ಹಾಗೂ ಟೊಮಾಟೊದಿಂದ ಮಾಡಿದ ಹಪ್ಪಳ, ಉಪ್ಪಿನಕಾಯಿ, ಖಾರದ ಪುಡಿ ಹಾಗೂ ದೇಶಿಯವಾಗಿ ತಯಾರಿಸಿದ ಆಹಾರ ಪದಾರ್ಥಗಳು ಸೇರಿದಂತೆ ವಿವಿಧ ಬಗೆಯ ಉತ್ಪನ್ನಗಳು ನೋಡುಗರ ಕಣ್ಮನ ಸೆಳೆಯಿತು. ಮೇಳವನ್ನು ವೀಕ್ಷಿಸಿದ ಎಸ್ಪಿ ಉಮಾ ಪ್ರಶಾಂತ್ ತಮಗಿಷ್ಟವಾದ ಕರಕುಶಲ ವಸ್ತು, ಸಿಹಿ ತಿನಿಸು ಮುಂತಾದ ಉತ್ಪನ್ನಗಳನ್ನು ಖರೀದಿಸಿದರು. ಸ್ವ-ಸಹಾಯ ಸಂಘದ ಸದಸ್ಯರನ್ನು ಬೆಂಬಲಿಸಿದರು. ಅಷ್ಟೇ ಅಲ್ಲದೇ ಸಾರ್ವಜನಿಕರು ಕೂಡ ವಸ್ತುಪ್ರದರ್ಶನ ಮಳಿಗೆಗೆ ಭೇಟಿ ನೀಡಿ ಅಲ್ಲಿನ ಸಿಬ್ಬಂದಿಯಿಂದ ಮಾಹಿತಿ ಪಡೆದುಕೊಂಡು ಆಕರ್ಷಕ ಉತ್ಪನ್ನಗಳ ಖರೀದಿಯನ್ನೂ ಮಾಡಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ, ಸಿಇಓ ಸುರೇಶ್ ಬಿ ಇಟ್ನಾಳ್, ಯೋಜನಾ ನಿರ್ದೇಶಕಿ ರೇಷ್ಮ ಕೌಸರ್, ಜಿಲ್ಲಾ ಯೋಜನಾ ವ್ಯವಸ್ಥಾಪಕ ನಿರ್ದೇಶಕ ಬೋಜರಾಜ್, ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# 53 ಅಂಗನವಾಡಿ ಸಹಾಯಕಿ ಹುದ್ದೆಗೆ ಅರ್ಜಿ ಆಹ್ವಾನ

**ಹಾಸನ :** ಸಕಲೇಶಪುರ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿಯಿರುವ 13 ಅಂಗನವಾಡಿ ಕೇಂದ್ರದ ಕಾರ್ಯಕರ್ತೆ ಹುದ್ದೆಗೆ ಹಾಗೂ 53 ಅಂಗನವಾಡಿ ಸಹಾಯಕಿ ಹುದ್ದೆಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿ ಪ್ರಕಟಣೆ ಹೊರಡಿಸಿದ್ದು, ವೆಬ್ ಸೈಟ್ ವಿಳಾಸ: https//karnemakaone.kar.nic.in/abcd/ ಅರ್ಜಿ ಸಲ್ಲಿಸಲು ದಿನಾಂಕ:09/04/2025 ಸಂಜೆ 5.30 ಕ್ಕೆ ಕೊನೆಯ ದಿನಾಂಕವಾಗಿರುತ್ತದೆ. ಆಯಾ ಅಂಗನವಾಡಿ ಕೇಂದ್ರದ ಸರ್ವೆ ವ್ಯಾಪ್ತಿಗೆ ಒಳಪಡುವ ಸ್ಥಳಿಯರಿಗೆ ಮಾತ್ರ ಆದ್ಯತೆಯಿರುತ್ತದೆ.ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಕಚೇರಿ ವೇಳೆಯಲ್ಲಿ ಹಾಗೂ ದೂರವಾಣಿ ಸಂಖ್ಯೆ: 08173-244557. ಸಂಪರ್ಕಿಸಬಹುದಾಗಿದೆ ಎಂದು ಸಕಲೇಶಪುರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ತಿಳಿಸಿದ್ದಾರೆ.



ದಾವಣಗೆರೆ: ಇತ್ತೀಚೆಗೆ ನಗರದ ಕುವೆಂಪು ಕನ್ನಡ ಭವನದಲ್ಲಿ ಅಕ್ಕಮಹಾದೇವಿ ಮಹಿಳಾ ಸಾಂಸ್ಕೃತಿಕ ಕಲಾಸಂಘ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಆಶ್ರಯದಲ್ಲಿ ಸುಗಮ ಸಂಗೀತ ಹಾಗೂ ವಾಯ್ಲಿನ್ ಸಂಗೀತ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದಲ್ಲಿ ಟಿ. ವಾಣಿಶ್ರೀ ಗದಗ ಮತ್ತು ಸಂಗಡಿಗ-ರಿಂದ ಸುಗಮ ಸಂಗೀತ ಹಾಗೂ ವಾಯ್ಲಿನ್ ಸಂಗೀತ ನೆರೆದಿದ್ದ ಎಲ್ಲ ಪ್ರೇಕ್ಷಕರ ಮನಸೂರೆಗೊಳಿಸಿತು. ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷರಾದ ಎಸ್. ಜಿ. ಶಾಂತ ಕಾರ್ಯದರ್ಶಿ, ಮಮತಾ ಸಿ. ಇವರು ಉಪಸ್ಥಿತರಿದ್ದು ಕಲಾವಿದರಿಗೆ ಪ್ರಶಸ್ತಿ ಪತ್ರ ನೀಡಿ ಗೌರವಿಸಿದರು. ಖಾದರ್ ಪಿ ಕಾರ್ಯಕ್ರಮ ನಿರೂಪಿಸಿದರು.

## ನಿಧನ ಸುದ್ಧಿಗಳು

### ಲಕ್ಷ್ಮೀದೇವಮ್ಮ ನಿಧನ

**ಚಿತ್ರದುರ್ಗ:** ಜಿಲ್ಲೆಯ ಚಳ್ಳಕೆರೆ ತಾಲೂಕು ನೇರಲಗುಂಟೆ ಗ್ರಾಮದ ದಿ. ಎನ್.ವಿ.ಲಕ್ಷ್ಮಯ್ಯ ಅವರ ಪತ್ನಿ ಲಕ್ಷ್ಮೀದೇವಮ್ಮ (85) ಶನಿವಾರ ನೇರಲಗುಂಟೆ ಗ್ರಾಮದಲ್ಲಿ ನಿಧನರಾದರು. ಮೃತರಿಗೆ ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಇದ್ದಾರೆ. ಸ್ವಗ್ರಾಮ ನೇರಲಗುಂಟೆಯಲ್ಲಿ ಮಾ.16ರಂದು ಮಧ್ಯಾಹ್ನ ಮೃತರ ಅಂತ್ಯಕ್ರಿಯೆ ನಡೆದಿದೆ ಎಂದು ಕುಟುಂಬ ಸದಸ್ಯರು ತಿಳಿಸಿದ್ದಾರೆ

# ನಂದಿಗುಡಿ ಶ್ರೀಗಳ ಅಡ್ಡಪಲ್ಲಕ್ಕಿ ಮಹೋತ್ಸವ, ಬಸವೇಶ್ವರಸ್ವಾಮಿಯ ರಥೋತ್ಸವ



ರಥೋತ್ಸವ ಅದ್ದೂರಿಯಾಗಿ ನಡೆಯಿತು.

**ಮಲೇಬೆನ್ನೂರು:** ಸಮೀಪದ ಸುಕ್ಷೇತ್ರ ನಂದಿಗುಡಿ ಗ್ರಾಮದಲ್ಲಿ ಶ್ರೀಗಳ ಅಡ್ಡಪಲ್ಲಕ್ಕಿ ಮಹೋತ್ಸವ ಮತ್ತು ಶ್ರೀ ಬಸವೇಶ್ವರ ಸ್ವಾಮಿ ರಥೋತ್ಸವ ಅಪಾರ ಭಕ್ತರ ಸಮ್ಮುಖದಲ್ಲಿ ಸಂಭ್ರಮದಿಂದ ನೆರವೇರಿತು.

ಬೆಳಗ್ಗೆ ನಂದಿಗುಡಿ ಬೃಹನ್ಮಠದ ಶ್ರೀ ಸಿದ್ದರಾಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳ ಅಡ್ಡಪಲ್ಲಕ್ಕಿ ಮಹೋತ್ಸವ ನಡೆಯಿತು. ವಿವಿಧ ವಾದ್ಯ ಮೇಳಗಳೊಂದಿಗೆ ಶ್ರದ್ದಾ ಭಕ್ತಿಯಿಂದ ನಡೆಯಿತು.

ದೇವಸ್ಥಾನದ ಆವರಣದಲ್ಲಿ ಸ್ವಾಮೀಜಿ ರಥಕ್ಕೆ ಮಹಾ ಪೂಜೆಯನ್ನು ಸಲ್ಲಿಸಿದರು.ವೇದ ಮಂತ್ರಗಳೊಂದಿಗೆ, ನಂದೀಶ್ವರ ಮಹಾರಾಜ್ ಕೀ ಜೈ, ಬಸವೇಶ್ವರ ಮಹಾರಾಜ್ ಕೀ ಜೈ ಎಂಬ ಬಿರುದು ಬಾವಲಿಗಳ ಉದ್ಘೋಷಗಳೊಂದಿಗೆ ಬಸವೇಶ್ವರ ದೇವರ ಉತ್ಸವ ಮೂರ್ತಿಯನ್ನು ಶ್ರೀಗಳು ರಥಾರೋಹಣ ಮಾಡಿಸಿದರು. ರಥದ ಗಾಲಿಗೆ ತೆಂಗಿನಕಾಯಿ ಒಡೆದು ಬಾಳೆಹಣ್ಣು ನೈವೇದ್ದಿಸಿದರು.ಅಷ್ಟಬಲಿದಾನ ಪೂಜೆ , ಮಹಾಪೂಜೆ ನಂತರ ಹರಹರ ಮಹಾದೇವ, ಬಸವೇಶ್ವರ ಮಹಾರಾಜ್ ಕೀ ಜೈ ಎಂದು ಕೂಗುತ್ತ ಅಪಾರ ಭಕ್ತರು ರಥೋತ್ಸವದಲ್ಲಿ ಪಾಲ್ಗೊಂಡಿರು.

ಭಕ್ತರು ರಥಕ್ಕೆ ಬಾಳೆಹಣ್ಣು ಎಸೆಯುವ ಮೂಲಕ ನೈವೇದ್ಯಿಸಿದರು. ರಥವನ್ನು ನಾನ ಪುಷ್ಪಗಳಿಂದ ಭಾಗವದ್ವಜಗಳಿಂದ ಅಲಂಕರಿಸಲಾಗಿತ್ತು. ಡೊಳ್ಳುಕುಣಿತ, ನಂದಿ ಕೋಲು ಕುಣಿತ,ಜಾಂಜಮೇಳ, ಕೋಲಾಟ, ನೃತ್ಯ, ಭಜನೆಗಳು ರಥೋತ್ಸವಕ್ಕೆ ಮೆರುಗು ತಂದವು.ದೇವಸ್ಥಾನದ ಬಳಿ ಹರಕೆ,ಜವಳ,ದಿಂಡುರುಳು, ಮುಂತಾದ ಭಕ್ತಿ ಸೇವೆಗಳನ್ನು ಸಮರ್ಪಿಸಿದರು.ದೊಡ್ಡಬಂಡಿ ಪ್ರದರ್ಶನ ಆಕರ್ಷಕವಾಗಿತ್ತು.ರಥೋತ್ಸವದ ಅಂಗವಾಗಿ ಬಸವೇಶ್ವರ ದೇವರಿಗೆ ಅಭಿಷೇಕ ಮತ್ತು ವಿಶೇಷ ಪೂಜೆ, ಪೂಜಾಲಂಕಾರ ಮಾಡಲಾಗಿತ್ತು.ನಂತರ ಫಲ ಪುಷ್ಪ ಹಾರಗಳನ್ನು ಹರಾಜು ಮಾಡಲಾಯಿತು. ರಥೋತ್ಸವದ ಪ್ರಯುಕ್ತ ಮಕ್ಕಳ ಆಟಿಕೆಗಳು,ಬಳೆ ಅಂಗಡಿಗಳು ಮುಂತಾದ ಅಂಗಡಿಗಳಲ್ಲಿ ವ್ಯಾಪಾರ ವಹಿವಾಟು ಕಂಡುಬಂತು. ದೇವಸ್ಥಾನ, ಶ್ರೀ ವೃಷಭ ಪುರಿ ಮಹಾಸಂಸ್ಥಾನ ಮಠ, ಗ್ರಾಮದ ಪ್ರಮುಖ ಬೀದಿಗಳಲ್ಲಿ ವಿದ್ಯುತ್ ಅಲಂಕಾರ ಮಾಡಲಾಗಿತ್ತು.ಸಂಜೆ ದೇವಸ್ಥಾನದ ಆವರಣದಲ್ಲಿ ಓಕುಳಿ ಮತ್ತು ಕಂಕಣ ವಿಸರ್ಜನೆ ಮಾಡಲಾಯಿತು.ಮುಖಂಡ ಚಂದ್ರಶೇಖರ್ ಪೂಜಾರ್ ರಥೋತ್ಸವದಲ್ಲಿ ಪಾಲ್ಗೊಂಡು ಶ್ರೀಗಳಿಂದ ಆಶೀರ್ವಾದ ಪಡೆದರು. ಹಿಂಡಸಘಟ್ಟ ಟಿ ಹೆಚ್ ಮುರಗೇಶಪ್ಪ,ಗ್ರಾಮ ಪಂಚಾಯಿತಿ ಸದಸ್ಯ ಕೆಂಚವೀರಯ್ಯ ಮತ್ತು ಅಪಾರ ಭಕ್ತ ಸಮೂಹ ಸೇರಿತ್ತು.



# ರೇಣುಕಾಂಬ ದೇವಿ ಜಾತ್ರೆ



**ಚಂದ್ರಗುತ್ತಿ:** ಪುರಾಣ ಪ್ರಸಿದ್ದ ಶ್ರೀ ರೇಣುಕಾಂಬ ದೇವಿಯಜಾತ್ರಾ ಮಹೋತ್ಸವದಅವಭ್ರುಥೋತ್ಸವ ಓಕಳಿ ಉತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ಸಂಪನ್ನಗೊಂಡಿತು.

ದೇವಾಲಯದಿಂದ ಶ್ರೀ ರೇಣುಕಾಂಬ ದೇವಿಯ ಪಲ್ಲಕ್ಕಿಉತ್ಸವ ಮೆರವಣಿಗೆಯು ಓಕಳಿ ಕಟ್ಟೆಗೆ ತೆರಳಿತು. ನಂತರ ಸಾಂಪ್ರದಾಯಿಕಧಾರ್ಮಿಕ ಪೂಜಾ ಕೈಂಕರ್ಯಗಳು ನಡೆದವು. ಕುಂಕುಮದ ನೀರುಎರಚುವುದರ ಮೂಲಕ ಓಕಳಿ ಆಡಿದರು. ಭಕ್ತರುಚಂದ್ರಗುತ್ಯಮ್ಮ ನಿನ್ನಾಲ್ಕುಉಧೋ.. ಉದ–ೋ ಎಂಬ ಘೋಷಣೆಯೊಂದಿಗೆ ಭಕ್ತಿ ಸ್ಮರಣೆಯಲ್ಲಿ ಮಿಂದೆದ್ದರು.

ಜಾತ್ರಾ ಮಹೋತ್ಸವದ ಮೂರನೇ ದಿನದಅವಭ್ರುಥೋತ್ಸವ ಓಕಳಿ ಉತ್ಸವಕ್ಕೆದೇವ ಸ್ಥಾನದಕಾರ್ಯನಿರ್ವಾಹಣಾಧಿಕಾರಿಜಿ.ಕೆ. ಪ್ರಮೀಳಾ ಕುಮಾರಿಅವರು ಚಾಲನೆ ನೀಡಿದರು.

ಬಳಿಕ ಶ್ರೀ ದೇವಿಯ ಪಲ್ಲಕ್ಕಿಉತ್ಸವ ಮೆರವಣಿಗೆಗ್ರಾಮದ ಮಂಗಳಾರತಿ ಕಟ್ಟೆ, ಹರೀಶಿ ರಸ್ತೆ, ಮುಖ್ಯರಸ್ತೆ ಮಾರ್ಗವಾಗಿ ನಾಲ್ಕು ಕಾಲು ಮಂಟಪದಲ್ಲಿ ಸಿಂಹಾಸನದ ಮೇಲೆ ಶ್ರೀ ದೇವಿ ಉತ್ಸವ ಮೂರ್ತಿಯನ್ನು ಪ್ರತಿಷ್ಠಾಪಿಸಲಾಯಿತು.

ಸೋಮವಾರದೇವಸ್ಥಾನದಲ್ಲಿತುಲಾಭಾರ ಸೇವೆ ಸೇರಿದಂತೆ ಹರಕೆ ವಗ್ಯೆರೆ ಮತ್ತುಧಾರ್ಮಿಕ ಪೂಜಾ ಕೈಂಕರ್ಯಗಳು ನಡೆಯಲಿದೆ.


## ಗ್ರಾಮ ಪಂಚಾಯಿತಿ ಕಾರ್ಯಾಲಯ ಪಲ್ಲಾಗಟ್ಟೆ

ಕ್ರ.ಸಂ.ಗ್ರಾ.ಪಂ.ಪ/ಇ/ಪ್ರೋ/1/2024-25 ದಿನಾಂಕ : 13-03-2025

### ಇ-ಪ್ರಕ್ಯೂರ್ ಮೆಂಟ್ ಮೂಲಕ ಟೆಂಡರ್ ಪ್ರಕಟಣೆ

ಪಲ್ಲಾಗಟ್ಟೆ ಗ್ರಾಮ ಪಂಚಾಯಿತಿಯಲ್ಲಿ ಟೆಂಡರ್‌ನಲ್ಲಿ ಷರತ್ತುಗಳ ಪ್ರಕಾರ 2024-25ನೇ ಸಾಲಿನ ಪಲ್ಲಾಗಟ್ಟೆ ಗ್ರಾಮ ಪಂಚಾಯಿತಿಯ 15ನೇ ಹಣಕಾಸು ಯೋಜನೆಯಡಿ ಪಲ್ಲಾಗಟ್ಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಅಗತ್ಯ ಕುಡಿಯುವ ನೀರಿನ ಸಾಮಗ್ರಿ ಖರೀದಿ/ ಕು.ನೀರಿನ ಮೊ.ಪಂಪ್.ದುರಸ್ಥಿಗಾಗಿ ಒಟ್ಟು ಅಂದಾಜು ಮೊತ್ತ: 13.60.388.00 ಲಕ್ಷ ಗಳಿಗೆ ಕೆ.ಟಿ.ಪಿ.ಪಿ ನಿಯಾಮಾನುಸಾರ ಇ-ಪ್ರಕೂರ್ ಮೆಂಟ್ ಮೂಲಕ ಟೆಂಡರ್ ಗಾಗಿ ಅರ್ಹ ಟೆಂಡರ್‌ದಾರರು/ಸಂಸ್ಥೆಗಳು ಭರ್ತಿ ಮಾಡಿದ ಟೆಂಡರ್ ಗಳನ್ನು ಈ ಕೆಳಕಂಡಂತೆ ಆಹ್ವಾಅನಿಸಲಾಗಿದ್ದು (ಟೆಂಡರ್ ಸಂಸ್ಥೆ ಸಂಖ್ಯೆ:RDPR/2024-25/SE2272, RDPR/2024-25/IND8653,RDPR/2024-25/SE2274,RDPR/2024-25/IND8398)ಸದರಿ ಟೆಂಡರ್‌ಗೆ ಸಂಬಂದಿಸಿದ ದಾಖಲೆಗಳನ್ನು ಇ-ಪ್ರಕ್ಯೂರ್ ಮೆಂಟ್ ವೆಬ್ ಸೈಟ್ ವೆಬ್ ಸೈಟ್ (wwwktpp.karnatka.gov.in) ಇಂದ ದಿನಾಂಕ: 13-03-2025 ರಿಂದ 21-03-2025 ಸಾಯಂಕಾಲ 5.00 ಗಂಟೆಯೊಳಗೆ ಡೌನ್ ಲೋಡ್ ಮಾಡಿಕೊಂಡು ದಿನಾಂಕ; 21-03-2025 ಸಂಜೆ 5 ಗಂಟೆಯ ವರೆಗೆ ಇ-ಟೆಂಡರ್‌ನ್ನು ಸಲ್ಲಿಸಬಹುದು ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಪಲ್ಲಾಗಟ್ಟೆ ಗ್ರಾಮ ಪಂಚಾಯಿತಿ ಕಛೇರಿಯನ್ನು ಸಂಪರ್ಕಿಸಬಹುದಾಗಿದೆ.

**ಟೆಂಡರ್ ವೇಳಾಪಟ್ಟಿ**

| | | |
|---|---|---|
| 1 | ಖಾಲಿ ಟೆಂಡರ್ ಅರ್ಜಿಗಳನ್ನು (ಅನುಬಂಧ-1ನ್ನು ಮತ್ತು ಅನುಬಂಧ-2ನ್ನು)ಇ-ಪ್ರಕ್ಯೂರ್‌ಮೆಂಟ್ ಮೂಲಕ ಡೌನ್ ಲೋಡ್ ಮಾಡಿಕೊಳ್ಳುವ ದಿನಾಂಕ ಮತ್ತು ಸಮಯ | ದಿನಾಂಕ:13-03-2025 ರಿಂದ 21-03-2025 ಸಾಯಂಕಾಲ 5-30 ಗಂಟೆಯೊಳಗೆ |
| 2 | ಇ-ಪೋರ್ಟನಲ್ಲಿ ಟೆಂಡರ್ ನ್ನು ಇಂಧೀಕರಿಸಲು ಕೊನೆಯ ದಿನಾಂಕ | ದಿನಾಂಕ: 21-03-2025 ರಿಂದ ಸಾಯಂಕಾಲ 5-30 ಗಂಟೆಯೊಳಗೆ |
| 3 | ಇ-ಪೋರ್ಟನಲ್ಲಿ ದಾಖಲೆಗಳ/ ತಾಂತ್ರಿಕ ಬೆಡ್ ಗಳನ್ನು ತೆರೆಯುವ ದಿನಾಂಕ ಮತ್ತು ಸಮಯ | ದಿನಾಂಕ:24-03-2025 ರಿಂದ ಸಾಯಂಕಾಲ 11-00 ಗಂಟೆಯ ನಂತರ |
| 4 | ಇ-ಪೋರ್ಟನಲ್ಲಿ ದಾಖಲಾತಿಗಳ/ ಆರ್ಥಿಕ ಬೆಡ್‌ಗಳನ್ನು ತೆರೆಯುವ ದಿನಾಂಕ ಮತ್ತು ಸಮಯ | ದಿನಾಂಕ: 25-03-2025 ರಿಂದ ಸಾಯಂಕಾಲ 11-00 ಗಂಟೆಯ ನಂತರ |

ಹೆಚ್ಚಿನ ಮಾಹಿತಿಗಾಗಿ ಅಧಿಕೃತ ಪೋರ್ಟಲ್ wwwktpp.karnatka.gov.in ಸಂಪರ್ಕಿಸಬಹುದಾಗಿದೆ

ಸಹಿ/-
ಅಧ್ಯಕ್ಷರು
ಗ್ರಾಮ ಪಂಚಾಯಿತಿ,
ಪಲ್ಲಾಗಟ್ಟೆ

ಸಹಿ/-
ಪಂಚಾಯಿತಿ ಅಭಿವೃದ್ದಿ ಅಧಿಕಾರಿ
ಗ್ರಾಮ ಪಂಚಾಯಿತಿ ,
ಪಲ್ಲಾಗಟ್ಟೆ


# ಮಾವಿನಹಳ್ಳಿ ಬಸವೇಶ್ವರ ತೇರು



**ಚಿತ್ರದುರ್ಗ:** ತಾಲ್ಲೂಕಿನ ಬಸವಾಪುರದ ಮಾವಿನಹಳ್ಳಿ ಗುರು ಬಸವೇಶ್ವರ ಸ್ವಾಮಿ ಮಹಾರಥೋತ್ಸವವೂ ಸಾವಿರಾರು ಭಕ್ತರ ಸಮ್ಮುಖದಲ್ಲಿ ಶನಿವಾರ ಅದ್ದೂರಿಯಾಗಿ ನೆರವೇರಿತು. ಸ್ವಾಮಿಯ ರಥವನ್ನು ಎಳೆಯುವ ಕ್ಷಣಕ್ಕಾಗಿ ರಾಜ್ಯದ ವಿವಿಧೆಡೆಯಿಂದ ಬಂದಿದ್ದ ಅನೇಕ ಭಕ್ತರು ಕಾತರದಿಂದ ಕಾದು ಕಣ್ತುಂಬಿಕೊಂಡರು. ಚಾಲನೆ ದೊರೆಯುತ್ತಿದ್ದ ಬಸವೇಶ್ವರ ಮಹರಾಜ್ ಕೀ ಜೈ, ಹರಹರ ಮಹಾದೇವ್ ಎಂದು ಜಯಘೋಷ ಮೊಳಗಿಸಿದರು. ರಥಕ್ಕೆ ಬಾಳೆಹಣ್ಣನ್ನು ಎಸೆಯುವ ಮೂಲಕ ಅನೇಕರು ಭಕ್ತಿ ಸಮರ್ಪಿಸಿದರು. ರಥೋತ್ಸವದ ಅಂಗವಾಗಿ ಬಸವೇಶ್ವರ ಸ್ವಾಮಿಗೆ ಮುಂಜಾನೆ ಮಹಾ ರುದ್ರಾಭಿಷೇಕ ಸೇರಿ ಇತರೆ ಪೂಜಾ ಕೈಂಕರ್ಯ ಶಾಸ್ತ್ರೋಕ್ತವಾಗಿ ನೆರವೇರಿದವು. ರಥೋತ್ಸವಕ್ಕೂ ಮುನ್ನ ಸ್ವಾಮಿಯ ಉತ್ಸವ ಮೂರ್ತಿಯನ್ನು ದೇಗುಲದ ಸಮೀಪವಿರುವ ಗದ್ದಗೆ ಬಳಿ ಪುಷ್ಪಾಲಂಕೃತ ಪಲ್ಲಕ್ಕಿಯಲ್ಲಿ ಕರೆತಂದು ಪೂಜೆ ಸಲ್ಲಿಸಲಾಯಿತು. ನಂತರ ಉತ್ಸವ ಮೂರ್ತಿಯನ್ನು ರಥದ ಬಳಿ ಕರೆತರುತ್ತಿದ್ದಂತೆ ಭಕ್ತೋತ್ಸಾಹ ಮುಗಿಲುಮುಟ್ಟಿತ್ತು. ಮೂರು ಬಾರಿ ಪ್ರದಕ್ಷಿಣೆ ಹಾಕಿಸಿ ರಥದಲ್ಲಿ ಪ್ರತಿಷ್ಠಾಪಿಸಲಾಯಿತು. ಅನೇಕ ಭಕ್ತರು ದೇಗುಲಕ್ಕೆ ಭೇಟಿ ನೀಡಿ ಸ್ವಾಮಿಯ ದರ್ಶನ ಪಡೆದರು. ಹಣ್ಣು, ಕಾಯಿ, ಹೂವಿನ ಹಾರಗಳೊಂದಿಗೆ ಭಕ್ತಿ ಸಮರ್ಪಿಸಿದರು. ಇಷ್ಟಾರ್ಥ ಸಿದ್ಧಿಗಾಗಿಯೂ ಪ್ರಾರ್ಥಿಸಿಕೊಂಡರು.

# ಕಟ್ಟಿಗೆಹಳ್ಳಿ ಬಸವೇಶ್ವರ ರಥೋತ್ಸವ

**ಜಗಳೂರು:** ತಾಲೂಕಿನ ಐತಿಹಾಸಿಕ ಗ್ರಾಮ ಕಟ್ಟಿಗೆಹಳ್ಳಿಯ ಶ್ರೀ ಬಸವೇಶ್ವರ ಸ್ವಾಮಿ ಮಹಾ ರಥೋತ್ಸವ ಸಂಜೆ 5.30ಕ್ಕೆ ಕ್ರೋಧಿನಾಮ ಸಂವತ್ಸರದ ಫಾಲ್ಗುಣ ಶುದ್ಧ ದಶಮಿ ಶುಭ ಘಳಿಗೆಯಲ್ಲಿ ಸಾವಿರಾರು ಭಕ್ತರು ರಥೋತ್ಸವ ಅದ್ದೂರಿಯಾಗಿ ಜರುಗಿತು.

ಐದು ದಿನಗಳ ಕಾಲ ನಡೆಯಲಿರುವ ರಥೋತ್ಸವಕ್ಕೆ ಸಾವಿರಾರು ಸಂಖ್ಯೆಯಲ್ಲಿ ಭಕ್ತ ಸಮೂಹ ಸಾಕ್ಷಿಯಾಗಿತ್ತು. ಶನಿವಾರ ಬೆಳಿಗ್ಗೆ ಬಸವ ಉತ್ಸವ ಆರಂಭದ ಧಾರ್ಮಿಕ ಕಾರ್ಯಕ್ರಮಕ್ಕೆ ನಾಂದಿ ಹಾಡಲಾಯಿತು.

ಮಧ್ಯಾಹ್ನದಿಂದ ರಥೋತ್ಸವಕ್ಕೆ ತೈಲ ಎರೆದ ನಂತರ ಹೂವಿನ ಅಲಂಕಾರ ನೆರವೇರಿಸಲಾಯಿತು. ಸಂಜೆ 5.30ಕ್ಕೆ ಬಸವೇಶ್ವರ ಸ್ವಾಮಿಯ ಉತ್ಸವ ಮೂರ್ತಿಯನ್ನು ಅಡ್ಡ ಪಲ್ಲಕ್ಕಿಯಲ್ಲಿ ಕೂರಿಸಿದ ನಂತರ ಭಕ್ತರು ತೇರಿನ ಸುತ್ತ ಮೂರು ಸುತ್ತು ಪ್ರದಕ್ಷಣೆ ಹಾಕಿಸಿದ ನಂತರ ರಥೋತ್ಸವದಲ್ಲಿ ಮುರ್ತಿಯನ್ನು ಪ್ರತಿಷ್ಠಾಪಿಸಿದ ನಂತರ ಮುಕ್ತಿ ಬಾವುಟ ಹರಾಜು ಪ್ರಕ್ರಿಯೆ ನೆರವೇರಿಸಲಾಯಿತು.

ಈ ಬಾರಿ ಮುಕ್ತಿ ಬಾವುಟವು ಅರಿಶಿಣಗುಂಡಿ ಗ್ರಾಮದ ಎನ್.ಎಸ್.ರಾಜು ಅವರು 65,101 ರೂಗೆ ತಮ್ಮದಾಗಿಸಿಕೊಂಡರು. ದಾವಣಗೆರೆ, ಶಿವಮೊಗ್ಗ, ಚಿತ್ರದುರ್ಗ, ವಿಜಯನಗರ, ಜಗಳೂರು, ಕೊಟ್ಟೂರು, ಶಿಕಾರಿಪುರ ಸೇರಿಂತೆ ಅನೇಕ ಭಾಗಗಳಿಂದ ಆಗಮಿಸಿದ ಸಹಸ್ರಾರು ಭಕ್ತ ಸಮೂಹ ತೇರನ್ನು ಪಾದಗಟ್ಟಯವರೆಗೆ ಎಳೆದರು.

ಕಲಾ ಪ್ರಕಾರಗಳಾದ ಸಮಾಳ, ನಂದಿ ಧ್ವಜ ಕುಣಿತ, ಕಹಳೆ, ಡ್ರಮ್ ಸೆಟ್ ಸೇರಿಂದತೆ ವಿರಗಾಸೆ ಕುಣಿತ ಸಾಥ್ ನೀಡಿಸವು. ಪಾದಗಟ್ಟೆಯಲ್ಲಿ ಪೂಜೆ ನೆರವೇರಿಸಿದ ನಂತರ ರಥವನ್ನು ಪುನಃ ಎಳೆದು ದೇವಸ್ಥಾನದ ಅವರಣದಲ್ಲಿ ನಿಲ್ಲಿಸಿದ ನಂತರ ಪಲ್ಲಕ್ಕಿಯಲ್ಲಿ ಉತ್ಸವ ಮೂರ್ತಿಯನ್ನು ಭಕ್ತರು ಮರವಣಿಗೆ ಮೂಲಕ ದೇವಸ್ಥಾನದಲ್ಲಿ ಭಕ್ತಿರ ದರ್ಶನಕ್ಕೆ ಅವಕಾಶ ನೀಡಲಾಯಿತು. ಭಕ್ತರು ಹರಕೆ ತೀರಿಸಿದರು. ಸೋಮವಾರ ಓಕುಳಿಯೊಂದಿಗೆ ರಥೋತ್ಸವಕ್ಕೆ ತೆರೆ ಬೀಳಲಿದೆ.



# ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆ: ಮಹಿಳೆಯರಿಗೆ ಅರಿವು ಮೂಡಿಸಿ: ನ್ಯಾ. ಸಹನ



**ಚಿತ್ರದುರ್ಗ:** "ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆ" ಕುರಿತು ಮಹಿಳೆಯರಿಗೆ ಹೆಚ್ಚಿನ ಅರಿವು ಮೂಡಿಸಬೇಕು ಎಂದು ಜಿಲ್ಲಾ ನ್ಯಾಯಾಲಯದ ಜೆಎಂಎಫ್‌ಸಿ 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಆರ್.ಸಹನ ಹೇಳಿದರು.

ನಗರದ ಜಿಲ್ಲಾ ಬಾಲಭವನ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ "ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆ ಅನುಷ್ಠಾನದಲ್ಲಿ ಭಾಗೀದಾರ ಇಲಾಖೆಗಳ ಪಾತ್ರದ ಕುರಿತು ಎರಡು ದಿನಗಳ ಓರಿಯಂಟೇಷನ್ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

"ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆ ಜಾರಿಗೆ ಬಂದಿದ್ದರೂ ಸಹ ಸಾಕಷ್ಟು ಪ್ರಕರಣಗಳು ವರದಿಯಾಗುವುದಿಲ್ಲ. ಕಾರಣ ಈ ಕಾಯ್ದೆ ಕುರಿತು ಮಹಿಳೆಯರಿಗೆ ಹೆಚ್ಚಿನ ಅರಿವು ಇರುವುದಿಲ್ಲ. ಹಾಗಾಗಿ ನಾವೆಲ್ಲರೂ ಸೇರಿ ಅರಿವು ಮೂಡಿಸಿದಾಗ ಮಾತ್ರ ಕಾಯ್ದೆಯನ್ನು ಸಮರ್ಪಕವಾಗಿ ಅನುಷ್ಠಾನ ಮಾಡಲು ಸಾಧ್ಯವಿದೆ ಎಂದು ಅಭಿಪ್ರಾಯಪಟ್ಟರು.

ಕೆಲಸದ ಸ್ಥಳದಲ್ಲಿ ಲೈಂಗಿಕ ಕಿರುಕುಳ ತಡೆ ಕಾಯ್ದೆ ಸಮಿತಿ ಅಧ್ಯಕ್ಷೆ ಹಾಗೂ ವಕೀಲೆ ಡಿ.ಕೆ. ಶೀಲಾ, "ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆ–2005 ಜಾರಿಗೆ ಬಂದಿದೆ. ಮಹಿಳೆ ಯಾವುದೇ ಧರ್ಮಕ್ಕೆ ಸೇರಿರಲಿ ಅಥವಾ ಯಾವುದೇ ಸಾಮಾಜಿಕ ಹಿನ್ನಲೆ ಹೊಂದಿರಲಿ 'ಕೌಟುಂಬಿಕ ಹಿಂಸೆಯಿಂದ ಮಹಿಳೆಯ ಸಂರಕ್ಷಣೆ ಕಾಯ್ದೆ ಆಕೆಗೆ ಅನ್ವಯವಾಗಲಿದೆ ಎಂದು ಹೇಳಿದರು.

# ಮಾನಸಿಕ ಆರೋಗ್ಯದಿಂದ ಸ್ವಾಸ್ಥ್ಯ ಸಮಾಜ ನಿರ್ಮಾಣ ಸಾಧ್ಯ : ವೈ. ರವಿಕುಮಾರ್



**ಚಿತ್ರದುರ್ಗ :** ಮಾನಸಿಕ ಆರೋಗ್ಯದಿಂದ ಸ್ವಾಸ್ಥ್ಯ ಸಮಾಜ ನಿರ್ಮಾಣ ಸಾಧ್ಯ. ಹಾಗೆಯೇ ವಿಕಲಚೇತನರಿಗೆ ಅವಕಾಶ ಕಲ್ಪಿಸಿಕೊಟ್ಟರೆ ಸಮಾಜದಲ್ಲಿ ಸ್ವಾವಲಂಭಿ ಬದುಕು ರೂಢಿಸಿಕೊಳ್ಳಲು ನೆರವಾಗಲಿದೆ ಎಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ವೈ.ರವಿಕುಮಾರ್ ಹೇಳಿದರು.

ಭಾರತ ಸೇವಾದಳ ಕಟ್ಟಡದಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ತಾಲ್ಲೂಕು ಪಂಚಾಯಿತಿ, ಸಮುದಾಯ ಆಧಾರಿತ ಸಮನ್ವಯ ಅಭಿವೃದ್ದಿ(ಸಿಬಿಐಡಿ) ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಪ್ರಮಾಣ ಪತ್ರ ತರಬೇತಿ ಕಾರ್ಯಕ್ರಮ ಇವರುಗಳ ಸಂಯುಕ್ತಾಶ್ರಯದಲ್ಲಿ ಭಾರತ್ ಸೇವಾದಳದ ಕಟ್ಟಡದಲ್ಲಿ ಗುರುವಾರ ಹಮ್ಮಿಕೊಳ್ಳಲಾಗಿದ್ದ ಮಾನಸಿಕ ಆರೋಗ್ಯ ಕುರಿತ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಸ್ವಾವಲಂಭಿಗಳು ಮತ್ತು ಬುದ್ದಿಶಕ್ತಿಯಿಂದ ಬದುಕುವಂತಾಗಿದ್ದು, ವಿಕಲಚೇತನರಾದ ಇವರುಗಳಿಗೆ ಸರ್ಕಾರದಿಂದ ಸೌಲಭ್ಯಗಳನ್ನು ಕಲ್ಪಿಸಿದರೆ ಸಮಾಜದಲ್ಲಿ ಅತ್ಯುತ್ತಮವಾದ ಬದುಕು ಕಟ್ಟಿಕೊಳ್ಳಬಹುದೆಂದು ತಿಳಿಸಿದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಮಾತನಾಡಿ ಸಮಾಜದಲ್ಲಿ (4ನೇ ಪುಟಕ್ಕೆ)

# ಜಗತ್ತಿನಲ್ಲಿ ಯಾರು ದೊಡ್ಡವರಲ್ಲ ಎಲ್ಲರೂ ಸಮಾನರು

**ಭದ್ರಾವತಿ:** ಜಗತ್ತಿನಲ್ಲಿ ಯಾರು ದೊಡ್ಡವರಲ್ಲ ಎಲ್ಲರೂ ಸಮಾನರು. ನಮ್ಮ ಸೃಷ್ಟಿಕರ್ತ ಮಾತ್ರ ದೊಡ್ಡವನು. ಇದನ್ನು ನಾವೆಲ್ಲರೂ ಅರ್ಥ ಮಾಡಿಕೊಳ್ಳಬೇಕು. ಈ ಉದ್ದೇಶದಿಂದ ಇಫ್ತಾರ್ ಕೂಟ ಆಯೋಜಿಸಲಾಗುತ್ತದೆ ಎಂದು ಜಮಾಅತೆ ಇಸ್ಲಾಮಿ ಹಿಂದ್ ಜಿಲ್ಲಾ ಸಂಚಾಲಕ ಜನಾಬ್ ಅಕ್ರಮ್ ಉಲ್ಲಾ ಷರೀಬ್ ಹೇಳಿದರು.

ಅವರು ಶನಿವಾರ ಪಾವನ ಮಾಸ ರಂಜಾನ್ ಪ್ರಯುಕ್ತ ಜಮಾಅತೆ ಇಸ್ಲಾಮಿ ಹಿಂದ್ ತಾಲೂಕು ಘಟಕದ ವತಿಯಿಂದ ನಗರದ ಡಾ. ರಾಜ್‌ಕುಮಾರ್ ರಸ್ತೆ(ಬಿ.ಎಚ್ ರಸ್ತೆ) ಆಯಿಷಾ ಮಸೀದಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಸೌಹಾರ್ದ ಇಫ್ತಾರ್ ಕೂಟ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಮುಸ್ಲಿಂ ಸಮುದಾಯದವರು ನಮ್ಮ ಸೃಷ್ಟಿಕರ್ತ ಒಬ್ಬನೆ. ಆತ ಮಾತ್ರ ನಮ್ಮೆಲ್ಲರಿಗೂ ದೊಡ್ಡವನು ಎಂಬುದನ್ನು ಅರಿಯಬೇಕು. ಈ ನಿಟ್ಟಿನಲ್ಲಿ 5 ಕರ್ಮಗಳನ್ನು ಕಡ್ಡಾಯವಾಗಿ ಆಚರಿಸಬೇಕು. ಆಗ ಮಾತ್ರ ನಮ್ಮಲ್ಲಿ ಒಳ್ಳೆಯ ಗುಣಗಳನ್ನು ರೂಪುಗೊಳ್ಳಲು ಸಾಧ್ಯ. ಜಾತಿ–ಧರ್ಮ, ಬಡವ–ಶ್ರೀಮಂತ ಯಾವುದೇ ಭಾವಿಸದೆ ಎಲ್ಲರನ್ನು ಒಂದಾಗಿ ನೋಡುವ ಮನೋಭಾವ, ಕಷ್ಟದಲ್ಲಿ ಇರುವವರಿಗೆ ನೆರವಾಗುವುದು. ಯಾರು ಮೊದಲು ಬರುತ್ತಾರೆಯೋ ಅವರಿಗೆ ಮೊದಲ ಆದ್ಯತೆ ನೀಡುವುದು. ಹೀಗೆ ಹಲವು ಸಮಾನತೆ ನಮ್ಮಲ್ಲಿ ಬೆಳೆಸಿಕೊಳ್ಳಬೇಕು. ಇಫ್ತಾರ್ ಕೂಟ ಇದನ್ನು ತಿಳಿಸುವ ಉದ್ದೇಶವಾಗಿದೆ ಎಂದರು. ಜಮಾಅತೆ ಇಸ್ಲಾಮಿ ಹಿಂದ್ ತಾಲೂಕು ಸಂಚಾಲಕ ಉಪಸ್ಥಿತರಿದ್ದರು. ನಗರಸಭೆ ಸದಸ್ಯ ಜಾರ್ಜ್, ಮುಖಂಡರಾದ ತೀರ್ಥೇಶ, ಮಂಜುನಾಥ್, ರಾಜು, ಮಹಮದ್ ರಫಿ(ಟೈಲರ್), ಖದೀರ್ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

# ಬೆಂಗಳೂರು: 9 ವರ್ಷ ತಲೆಮರೆಸಿಕೊಂಡಿದ್ದ ರೌಡಿಶೀಟರ್ ಬಂಧನಕ್ಕೆ ನೆರವಾದ ಸಾಮಾಜಿಕ ಮಾಧ್ಯಮ ಪೋಸ್ಟ್!

**ಬೆಂಗಳೂರು:** ಸಾಮಾಜಿಕ ಮಾಧ್ಯಮಗಳಲ್ಲಿನ ಪೋಸ್ಟ್‌ಗಳು ಮತ್ತು ಆನ್‌ಲೈನ್‌ನಲ್ಲಿ ಆಹಾರ ಆರ್ಡರ್ ಮಾಡಿದ್ದು ಬೆಂಗಳೂರು ಪೊಲೀಸರಿಗೆ ಒಂಬತ್ತು ವರ್ಷಗಳಿಂದ ತಲೆಮರೆಸಿಕೊಂಡಿದ್ದ 35 ವರ್ಷದ ರೌಡಿಶೀಟರ್ ಅನ್ನು ಬಂಧಿಸಲು ಸಹಾಯ ಮಾಡಿದೆ.

ಮೊಹಮ್ಮದ್ ಫಾರೂಕ್ ಎಂಬಾತನ ವಿರುದ್ಧ ಕೊಲೆ ಯತ್ನ ಸೇರಿದಂತೆ ಏಳು ಪ್ರಕರಣಗಳಿದ್ದು, ಒಂಬತ್ತು ವರ್ಷ ಈತ ಬಂಧನದಿಂದ ತಪ್ಪಿಸಿಕೊಂಡಿದ್ದ. ಮಡಿವಾಳ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ರೌಡಿಶೀಟರ್ ಆಗಿದ್ದ ಫಾರೂಕ್ 2012ರಲ್ಲಿ ಅಪರಾಧ ಕೃತ್ಯ ಎಸಗಿದ್ದು, 2016ರವರೆಗೂ ಭೂಗತನಾಗಿದ್ದ.

# ಮಕ್ಕಳು ಪುಸ್ತಕಗಳನ್ನು ಪ್ರೀತಿಸಬೇಕು: ಡಾ. ಗುರುನಾಥ



**ಚಿತ್ರದುರ್ಗ :** ಮಕ್ಕಳು ಪುಸ್ತಕಗಳನ್ನು ಪ್ರೀತಿಸಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಹಾಗೂ ಜಿಲ್ಲಾ ಬಾಲಭವನ ಸಮಿತಿ ಸದಸ್ಯ ಡಾ.ಬಿ.ಎಂ. ಗುರುನಾಥ್ ಹೇಳಿದರು.

ನಗರದ ಬಾಲಕಿಯರ ಪದವಿಪೂರ್ವ ಕಾಲೇಜಿನಲ್ಲಿ ಶನಿವಾರ ರಾಜ್ಯ ಬಾಲಭವನ ಸೊಸೈಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶ್ರೀ ಸಂಪಿಗೆ ಸಾಂಸ್ಕೃತಿಕ ಸಾಮಾಜಿಕ ಶೈಕ್ಷಣಿಕ ಸಂಸ್ಥೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 6 ರಿಂದ 16 ವರ್ಷದೊಳಗಿನ ಮಕ್ಕಳ ವಾರಾಂತ್ಯ ಚಟುವಟಿಕೆಗಳ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪರೀಕ್ಷೆಗಳನ್ನು ಕ್ರಿಯಾಶೀಲವಾಗಿ ಬರೆಯಬೇಕಾದರೆ ಆತ್ಮಸ್ಥೈರ್ಯ, ಶ್ರಮ ಬಹಳ ಮುಖ್ಯ. ಒಳ್ಳೆಯ ವಿಚಾರಗಳನ್ನು ಇಟ್ಟುಕೊಂಡು ದ್ವೇಷ ಅಸೂಯೆ ತೊಡೆದು ಹಾಕಬೇಕು. ಆಧುನಿಕ ಜೀವನ ಶೈಲಿ ಮತ್ತು ವಾಣಿಜ್ಯೀಕರಣದಿಂದ ಸಂಬಂಧಗಳು ಬಿರುಕು ಮೂಡುತ್ತಿವೆ. ಕುಟುಂಬ ವ್ಯವಸ್ಥೆಯಲ್ಲಿ ನಮ್ಮ ಜೊತೆ ಹಿರಿಯರು ಇಲ್ಲದಿರುವುದು ಮಾರ್ಗದರ್ಶನದ ಕೊರತೆ–ಯಾಗಿದೆ. ಶಿಕ್ಷಣದೊಂದಿಗೆ ಬದುಕು ಕಟ್ಟಿಕೊಳ್ಳುವುದು ಮಕ್ಕಳ ಬಹುದೊಡ್ಡ ಜವಾಬ್ದಾರಿಯಾಗಿದೆ ಎಂದರು.

ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜು ಉಪ ಪ್ರಾಂಶುಪಾಲ ಕರಿಯಪ್ಪ ಮಾತನಾಡಿ ಸರ್ಕಾರಿ ಶಾಲೆ ಮಕ್ಕಳಿಗೆ ಎಲ್ಲ ಸೌಲಭ್ಯಗಳು ಸಿಕ್ಕಿವೆ. ಸೌಲಭ್ಯಗಳನ್ನು ಬಳಸಿಕೊಂಡು ವಿನಯ ಮತ್ತು ಕ್ರಿಯಾಶೀಲತೆಯಿಂದ ಬದುಕು ಕಟ್ಟಿಕೊಳ್ಳಬೇಕು. ವಿದ್ಯಾರ್ಥಿಗಳು ಸೋಮಾರಿಗಳಾಗದೆ ಓದಿನ ಕಡೆ ಹೆಚ್ಚು ಆಸಕ್ತಿವಹಿಸಿ, ಪಠ್ಯಕ್ಕೆ ಪೂರಕವಾದ ಚಟುವಟಿಕೆಗಳನ್ನು ಅಳವಡಿಸಿಕೊಂಡು ಯಶಸ್ವಿಯಾಗಬೇಕೆಂದು ಹಾರೈಸಿದರು.

ಜಿಲ್ಲಾ ಬಾಲ ಭವನ ಕಾರ್ಯಕ್ರಮ ಸಂಯೋಜಕ ಡಿ.ಶ್ರೀಕುಮಾರ್ ಮಾತನಾಡಿ, ಮಕ್ಕಳು ಕನಸುಗಳನ್ನು ಕಾಣಬೇಕು. ಕನಸುಗಳನ್ನು ನನಸಾಗುವ ನಿಟ್ಟಿನಲ್ಲಿ ಪಠ್ಯೇತರ ಚಟುವಟಿಕೆಗಳ ಜೊತೆಗೆ ಸೃಜನಶೀಲತೆಯೊಂದಿಗೆ ವಿದ್ಯಾಭ್ಯಾಸ ಮಾಡಬೇಕು. ಈ ನಿಟ್ಟಿನಲ್ಲಿ ರಾಜ್ಯಬಾಲ ಭವನದ ಅಧ್ಯಕ್ಷರಾದ ಬಿ.ಆರ್ ನಾಯ್ಡು ಅವರ ಮಾರ್ಗದರ್ಶನದಂತೆ ರಾಜ್ಯಾದ್ಯಂತ ವಾರಂತ್ಯದಲ್ಲಿ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಂಡಿದ್ದೇವೆ ಎಂದರು.

ಇದೇ ಸಂದರ್ಭದಲ್ಲಿ ಆಶು ಭಾಷಣ ಸ್ಪರ್ಧೆ, ಗಾಯನ ಸ್ಪರ್ಧೆ ಮತ್ತು ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ಮಕ್ಕಳಿಗೆ ಪ್ರಮಾಣ ಪತ್ರ ನೀಡಲಾಯಿತು.

ಶಿಕ್ಷಕ ಕಲ್ಲೇಶ್ ಡಿ ಮೌರ್ಯ ಕಾರ್ಯಕ್ರಮ ನಿರೂಪಿಸಿದರು. ವಿಜಯಕುಮಾರ್, ಮಹಮದ್ ಖಾನಂ ಮುಕ್ತಾಯಿ, ಗಂಗೂಬಾಯಿ ಇದ್ದರು.

# ನರ್ಸಿಂಗ್ ವೃತ್ತಿಗೆ ಸೇವಾ ಮನೋಭಾವ ಮುಖ್ಯ: ಶಶಿಕಲಾ



**ಚಿಕ್ಕಮಗಳೂರು:** ನರ್ಸಿಂಗ್ ವೃತ್ತಿಗೆ ಸೇವಾ ಮನೋಭಾವ ಪ್ರಧಾನ ಎಂದು ನೈಟಿಂಗೇಲ್ ಸ್ಕೂಲ್ ಆಫ್ ನರ್ಸಿಂಗ್ ಕಾರ್ಯದರ್ಶಿ ಶಶಿಕಲಾನಾಯ್ಕ ನುಡಿದರು.

ಕಲ್ಯಾಣ ನಗರದ ನೈಟಿಂಗೇಲ್ ಸ್ಕೂಲ್ ಆಫ್ ನರ್ಸಿಂಗ್ ಮೊದಲವರ್ಷ ವಿದ್ಯಾರ್ಥಿಗಳ ಸ್ವಾಗತಿಸುವ ಜ್ಞಾನ ಜ್ಯೋತಿಗಳು ಸಮಾರಂಭದ ಅಧ್ಯಕ್ಷತೆ ವಹಿಸಿ ಅವರಿಂದು ಮಾತನಾಡಿದರು.

ಭಾರತದ ಮಣ್ಣಿನಲ್ಲಿ ಸೇವಾ ಮನೋಭಾವ ಸಹಜವಾಗಿರುತ್ತದೆ. ಸಾಮಾನ್ಯವಾಗಿ ಅಜ್ಜ–ಅಜ್ಜಿ, ಅಪ್ಪ–ಅಮ್ಮ ಸೇರಿದಂತೆ ತುಂಬು ಕುಟುಂಬದಿಂದ ಬಂದವರಿಗೆ ಬಾಂಧವ್ಯ ಸೇವಾ ಮನೋಧರ್ಮ ರಕ್ತಗತವಾಗಿರುತ್ತದೆ. ನರ್ಸಿಂಗ್ ವೃತ್ತಿಗೆ ಭಾರತ ಮೂಲದವರಿಗೆ ವಿಶೇಷ ಆದ್ಯತೆ ಇದೆ. ಅರಬ್ ರಾಷ್ಟ್ರಗಳು ಸೇರಿದಂತೆ ಬಹುತೇಕ ಮುಂದುವರೆದ ರಾಷ್ಟ್ರಗಳಲ್ಲಿ ಭಾರತದ ನರ್ಸ್‌ಗಳಿಗೆ ಅಪಾರ ಬೇಡಿಕೆ ಇದೆ ಎಂದರು.

ಎರಡು–ಮೂರು ದಶಕಗಳ ಹಿಂದಿನವರೆಗೂ ನರ್ಸ್ ಎಂದರೆ ಮೂಗು ಮುರಿಯುವವರೆ ಹೆಚ್ಚಾಗಿದ್ದರು. ಕೇರಳ ಮೂಲದವರು ಹೆಚ್ಚು ನರ್ಸಿಂಗ್ ತರಬೇತಿಗೆ ಬರುತ್ತಿದ್ದರು. ಇತ್ತೀಚಿನ ವರ್ಷಗಳಲ್ಲಿ ನರ್ಸಿಂಗ್ ಪ್ರಾಮುಖ್ಯತೆಯ ಅರಿವು ಸಮಾಜಕ್ಕೆ ಆಗಿದೆ. ಎಲ್ಲೆಡೆಯಿಂದ ಈ ವೃತ್ತಿಗೆ ಆಸಕ್ತಿ ವ್ಯಕ್ತವಾಗುತ್ತಿದೆ. ಜಿಲ್ಲೆಯ ಯುವಜನರು ನರ್ಸಿಂಗ್ ಕಾಲೇಜಿನತ್ತ ಮುಖ ಮಾಡುತ್ತಿದ್ದಾರೆಂದರು. ಗ್ರಾಮೀಣ ಹಿನ್ನಲೆಯ ಬಡತನದ ಬೇಗೆಯಲ್ಲಿ ನೊಂದುಬೆಂದವರು ಬಹುತೇಕ ನರ್ಸಿಂಗ್ ಕೋರ್ಸ್ ಸೇರುತ್ತಿದ್ದಾರೆ. ಮೂರುವರ್ಷ ಕಲಿತು ತರಬೇತಿ ಪಡೆದರೆ ಬೇಗನೆ ಕೆಲಸ ಪಡೆಯಲು ಇಲ್ಲಿ ಮಾತ್ರ ಅವಕಾಶವಿದೆ ಎಂದು ಶಶಿಕಲಾ ವಿವರಿಸಿದರು.

ನರ್ಸಿಂಗ್ ವೃತ್ತಿ ಅತ್ಯಂತ ಶ್ರೇಷ್ಠ ಹಾಗೂ ಸರ್ವೋತ್ತಮ ಕಾರ್ಯವೆಂದು ಪರಿಗಣಿತವಾಗಿದೆ. ಇಲ್ಲಿ ತರಬೇತಿ ಪಡೆದ ಯುವತಿಯರನ್ನು ವಿವಾಹವಾಗಲು ಇತರೆ ವೃತ್ತಿನಿರತ ಯುವಕರೂ ಆಸಕ್ತಿ ತೋರುತ್ತಿದ್ದಾರೆ. ಹುಟ್ಟಿನಿಂದಲೇ ಬರುವ ಸೇವಾಮನೋಭಾವದ ವಿಸ್ತರಣೆಗೆ ಇಲ್ಲಿ ವಿಪುಲ ಅವಕಾಶಗಳಿವೆ ಎಂದ ಶಶಿಕಲಾನಾಯ್ಕ, ನರ್ಸಿಂಗ್ ಶಿಕ್ಷಣಕ್ಕೆ ಇಷ್ಟಪಟ್ಟು ಸೇರ್ಪಡೆಗೊಂಡಿರುವ ವಿದ್ಯಾರ್ಥಿಗಳನ್ನು ಅಭಿನಂದಿಸಿ ಸ್ವಾಗತಿಸಿದರು.

ಇನ್ನರ್‌ವ್ಹೀಲ್ ಕ್ಲಬ್ ಮಾಜಿ ಅಧ್ಯಕ್ಷೆ ಉಮಾನಾಗೇಶ್ ಮುಖ್ಯ ಅತಿಥಿಗಳಾಗಿ ಮಾತನಾಡಿ, ಸ್ವಚ್ಛತೆಯ ಬಗ್ಗೆ ವಿಶೇಷವಾಗಿ ಕಾಳಜಿವಹಿಸಬೇಕು. ನರ್ಸಿಂಗ್ ವೃತ್ತಿಯ ಬಗ್ಗೆ ಅಭಿಮಾನವಿರಲಿ, ಶ್ರದ್ಧೆಯಿಂದ ಕಲಿಕೆಯಲ್ಲಿ ತೊಡಗಿಸಿಕೊಳ್ಳಿ, ಒಳ್ಳೆಯದನ್ನು ಅರಿತು, ಓದಿ ಜ್ಞಾನ ಸಂಪಾದಿಸಬೇಕೆಂದರು.

ಸಮಾರಂಭ ಉದ್ಘಾಟಿಸಿದ ಶ್ರೀಪಾರ್ವತಿ ಮಹಿಳಾಮಂಡಳಿ ಅಧ್ಯಕ್ಷೆ ಸುಮಿತ್ರಾಶಾಸ್ತ್ರಿ ಮಾತನಾಡಿ, ಸನಾತನ ಜೀವನಪದ್ಧತಿಯಲ್ಲೆ ಆರೋಗ್ಯಪಾಲನೆ ಪೂರಕ ಅಂಶಗಳಿವೆ. ಹಬ–ದಿನಗಳ ಆಚರಣೆಯಲ್ಲಿ ದೇಹಕ್ಕೆ ಬೇಕಾದ ಆಹಾರ ಸೇನೆಯ ಪದ್ಧತಿ ಇದೆ. ಚರಕ, ಸುಶ್ರೂಷ ಸೇರಿದಂತೆ ನಮ್ಮ ಋಷಿಮುನಿಗಳು ವೈದ್ಯರೂ ಆಗಿದ್ದರು. ಮನೆಮದ್ದು, ಶಸ್ತ್ರಚಿಕಿತ್ಸೆ, ಪ್ಲಾಸ್ಟಿಕ್ ಸರ್ಜರಿ, ಅಂಗಾಂಗ ಕಸಿ ನಮ್ಮ ದೇಶದಲ್ಲಿ ಸಾವಿರಾರು ವರ್ಷಗಳ ಹಿಂದೆಯೆ ಆಚರಣೆಯಲ್ಲಿತ್ತು ಎಂದು ಆನೆಮುಖ ಹೊತ್ತ ಗಣಪತಿಯ ಕಥೆಯನ್ನು ಉಲ್ಲೇಖಿಸಿದರು.

ನರ್ಸಿಂಗ್ ವಿದ್ಯಾರ್ಥಿಗಳಲ್ಲಿ ಸೇವಾಮನೋಭಾವ, ತಾಳ್ಮೆ, ಸಹನೆ, ನಗುಮುಖ ಅತ್ಯವಶ್ಯ. ಇಷ್ಟಪಟ್ಟು ಕಲಿತರೆ ಕಷ್ಟವಾಗುವುದಿಲ್ಲ. ಉತ್ತಮ ಬೋಧನೆಯ ಜೊತೆಗೆ ಸೌಲಭ್ಯ–ಸೌಕರ್ಯಗಳನ್ನು ಹೊಂದಿರುವ ನೈಟಿಂಗೇಲ್ ಸ್ಕೂಲ್ ವಿದ್ಯಾರ್ಥಿಗಳ ಕಲಿಕೆಯ ಜೊತೆಗೆ ಆತ್ಮವಿಶ್ವಾಸ ಮೂಡಿಸುತ್ತದೆ ಎಂದರು ಸುಮಿತ್ರಾ ನುಡಿದರು.

# ಶರಾವತಿ ಮುಳುಗಡೆ ಸಂತ್ರಸ್ಥರ ಸಮಸ್ಯೆ ಕುರಿತು ಅರಣ್ಯ ಸಚಿವರೊಂದಿಗೆ ಚರ್ಚೆ



**ತರೀಕೆರೆ:** ತಾಲ್ಲೂಕಿನ ಗೋಪಾಲ ಗ್ರಾಮದ ಶರಾವತಿ ಮುಳುಗಡೆ ಸಂತ್ರಸ್ಥರ ಸಮಸ್ಯೆಗಳ ಬಗ್ಗೆ ಚರ್ಚಿಸಲು ರಾಜ್ಯ ಸರಕಾರದ ಅರಣ್ಯ ಖಾತೆ ಸಚಿವರಾದ ಈಶ್ವರ್ ಖಂಡ್ರೆರವರ ಬಳಿ ತರೀಕೆರೆ ಶಾಸಕ ಜಿ.ಹೆಚ್.ಶ್ರೀನಿವಾಸ ಮತ್ತು ಗೋಪಾಲ ಗ್ರಾಮದ ಮುಖಂಡರ ನಿಯೋಗದೊಂದಿಗೆ ಸಚಿವರನ್ನು ಭೇಟಿ ಮಾಡಲಾಯಿತು.

ಹಲವಾರು ವರ್ಷದಿಂದ ನೆನೆಗುದಿಗೆ ಬಿದ್ದಿರುವ ಸಂತ್ರಸರಿಗೆ ಪರಿಹಾರ ಒದಗಿಸುವ ಕುರಿತು ಚರ್ಚಿಸಿ ಪರಿಹಾರವನ್ನು ಒದಗಿಸಿಕೊಡಲು ಮನವಿಯನ್ನು ಸಲ್ಲಿಸಲಾಯಿತು. ಸಚಿವರು ನಿಯೋಗದ ಮನವಿಯನ್ನು ಪರಿಶೀಲಿಸಿ ನಂತರ ಪರಿಹಾರವನ್ನು ಒದಗಿಸಿಕೊಡುವುದಾಗಿ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ.

ಈ ಸಂದರ್ಭದಲ್ಲಿ ಸಮಸ್ಯೆಗಳನ್ನು ಬಗೆಹರಿಸಲು ಹಾಗೂ ಸಚಿವರಿಗೆ ಮನದಟ್ಟು ಮಾಡಲು ಸಹಕರಿಸಿದ ಶಾಸಕ ಜಿ. ಎಚ್.ಶ್ರೀನಿವಾಸ್‌ರವರಿಗೆ ಗ್ರಾಮಸ್ಥರು ಅಭಿನಂದಿಸಿದರು. ನಿಯೋಗದಲ್ಲಿ ವಕೀಲರಾದ ದಿನೇಶ್, ಗೋಪಾಲ ಗ್ರಾಮ ಪಂಚಾಯತಿ ಅಧ್ಯಕ್ಷರು, ಸದಸ್ಯರು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು ಎಂದು ಕೆಪಿಸಿಸಿ (ಪರಿಶಿಷ್ಟ ಜಾತಿ ವಿಭಾಗ) ಸಂಚಾಲಕ ಎಲ್.ಟಿ.ಹೇಮಣ್ಣ ಪತ್ರಿಕೆ ಹೇಳಿಕೆಯಲ್ಲಿ ತಿಳಿಸಿದ್ದಾರೆ.

# ಕೆಸಗೋಡು ಗ್ರಾ.ಪಂ ಅಧ್ಯಕ್ಷರಾಗಿ ರಾಜನಹಳ್ಳಿ ಚಂದ್ರಯ್ಯ ಅವಿರೋಧ ಆಯ್ಕೆ



**ಬೇಲೂರು:** ತಾಲೂಕಿನ ಬಿಕ್ಕೋಡು ಹೋಬಳಿ ಕೆಸಗೋಡು ಗ್ರಾಮ ಪಂಚಾಯಿತಿಯ ಅಧ್ಯಕ್ಷರಾಗಿ ಕೆರಲೂರು ಕ್ಷೇತ್ರದ ರಾಜನಹಳ್ಳಿ ಗ್ರಾಮದ ಚಂದ್ರಯ್ಯರವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಹಿಂದಿ ಅಧ್ಯಕ್ಷರಾಗಿದ್ದ ನವೀನ್ ಕುಮಾರ ಹೆಚ್.ಬಿ. ರವರ ರಾಜೀನಾಮೆಯಿಂದ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಶುಕ್ರವಾರ ಚುನಾವಣೆ ನಿಗಧಿಯಾಗಿದ್ದು, ಪಂಚಾಯಿತಿಯ ಏಳು ಮಂದಿ ಸದಸ್ಯರುಗಳ ಒಮ್ಮತದಿಂದ ಚಂದ್ರಯ್ಯ ಒಬ್ಬರೆ ನಾಮಪತ್ರ ಸಲ್ಲಿಕೆ ಮಾಡಿದ್ದು, ಚುನಾವಣಾಧಿಕಾರಿಗಳು ಹಾಗೂ ತಾಲೂಕು ದಂಡಾಧಿಕಾರಿಗಳಾದ ಮಮತಾ ಎಂ. ರವರು ಚಂದ್ರಯ್ಯರವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಘೋಷಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ನೂತನ ಅಧ್ಯಕ್ಷ ಚಂದ್ರಯ್ಯ, ನನ್ನ ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳ ಅಭಿವೃದ್ಧಿಗಾಗಿ ಸರ್ವಸದಸ್ಯರ ಸಹಕಾರದಿಂದ ಜನಸಾಮಾನ್ಯರಿಗೆ ಅಗತ್ಯ ಇರುವ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು ಎಂದರು. ಹಾಗೂ ಅಧ್ಯಕ್ಷರಾಗಿ ಆಯ್ಕೆಯಾಗಲು ಸಹಕಾರ ನೀಡಿದ ಸದಸ್ಯರೆಲ್ಲರಿಗೂ ಮತ್ತು ನನ್ನ ಕ್ಷೇತ್ರದ ಜನತೆಗೆ ಧನ್ಯವಾದ ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ತೇಜಸ್ವಿ ಸತೀಶ್, ಸದಸ್ಯರುಗಳಾದ ವಿಶ್ವನಾಥ್, ನವೀನ್ ಕುಮಾರ ಹೆಚ್.ಬಿ, ರತ್ನಕಾಂತರಾಜು, ಲಕ್ಷ್ಮೀಲಕ್ಷ್ಮಣ, ಚಿಕ್ಕಮ್ಮ ನಾಗಯ್ಯ ಮುಖಂಡರಾದ ಮರಿಯಪ್ಪ, ಪರ್ವತಯ್ಯ, ರೇಣುಕಾನಂದ, ಅರುಣಕುಮಾರ, ಬಾಬು, ಸತೀಶ್ ಹಾಗೂ ಗ್ರಾಮಸ್ಥರು ಹಾಜರಿದ್ದರು.

# ಇಂಧನ ಸಚಿವರ ಉಸ್ತುವಾರಿ ಜಿಲ್ಲೆಯಲ್ಲಿ ಸಮರ್ಪಕ ವಿದ್ಯುತ್ ಸರಬರಾಜಿಲ್ಲ



**ಕಡೂರು :** ಇಂಧನ ಸಚಿವ ಕೆ.ಜೆ.ಜಾರ್ಜ್ ಜಿಲ್ಲಾ ಉಸ್ತುವಾರಿ ಜಿಲ್ಲೆಯಲ್ಲಿಯೆ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಇಲ್ಲದೆ ಪರದಾಡುವ ಸ್ಥಿತಿ ಬಂದಿದೆ.

ಕಡೂರು ತಾಲೂಕಿನ ಯಳಗೊಂಡನಹಳ್ಳಿ, ಯಳ್ಳಂಬಳಸೆ, ವಿಟ್ಲಾಪುರ, ಚಿಕ್ಕನಾಯ್ಕನಹಳ್ಳಿಗಳ ಸುತ್ತಮುತ್ತ ಕಳೆದ ಮೂರು ದಿನಗಳಿಂದ ವಿದ್ಯುತ್ ನಿಲುಗಡೆಯಾಗಿ ಮೆಸ್ಕಾಂ ಅಧಿಕಾರಿಗಳು ಸಂಪರ್ಕಕ್ಕೆ ಸಿಗದ ಹಿನ್ನೆಲೆಯಲ್ಲಿ ಕಡೂರು ಮೆಸ್ಕಾಂ ಇಲಾಖೆಗೆ ರೈತರು ಮುತ್ತಿಗೆಹಾಕಿ ಆಕ್ರೋಶ ವ್ಯಕ್ತಪಡಿಸಿದರು.

ಇಂಧನ ಸಚಿವರು ವಿಧಾನ ಪರಿಷತ್‌ನಲ್ಲಿ ರೈತರ ಪಂಪ್‌ಸೆಟ್‌ಗಳಿಗೆ ನಿರಂತರವಾಗಿ 7 ಗಂಟೆ ವಿದ್ಯುತ್ ನೀಡುವುದಾಗಿ ಹೇಳಿಕೆ ನೀಡಿದ್ದು, ಇದು ಶುದ್ಧ ಸುಳ್ಳು ಎಂದು ನಿರುಪಿಸುತ್ತದೆ. ಕಳೆದ ಒಂದು ವಾರದಿಂದ ಹಳ್ಳಿಗಳ ವಿದ್ಯುತ್ ಸಮಸ್ಯೆಗಳನ್ನು ಲೈನ್‌ಮ್ಯಾನ್‌ಗಳ ಮೂಲಕ ತಿಳಿಸಿದರೂ ಯಾವುದೇ ಪ್ರಯೋಜನವಾಗುತ್ತಿಲ್ಲ ಲೈನ್‌ಮ್ಯಾನ್‌ಗಳು ನಾವು 2 ಗಂಟೆ ಮಾತ್ರ ವಿದ್ಯುತ್ ನೀಡುವುದು ನೀವು ಏನು ಮಾಡುತ್ತೀರಿ? ಎಂದು ಉಡಾಫೆ ಉತ್ತರ ನೀಡುತ್ತಾರೆ. ಈಗಾಗಲೆ ಬೇಸಿಗೆ ಆರಂಭವಾಗಿದ್ದು, ಬೆಳೆಗಳನ್ನು, ತೋಟಗಳನ್ನು ರಕ್ಷಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ರೈತರು ದೂರಿದರು.

ಕಡೂರು ಮೆಸ್ಕಾಂ ಇಲಾಖೆಯ ಇಂಜಿನಿಯರ್‌ಗಳೊಂದಿಗೆ ಮಾತಿನ ಚಕಮಕಿ ನಡೆಸಿದ ರೈತರು 7 ಗಂಟೆ ಸಮರ್ಪಕವಾಗಿ ವಿದ್ಯುತ್ ಯಾಕೆ ನೀಡುತ್ತಿಲ್ಲ ಎಂದು ಪ್ರಶ್ನಿಸಿದರು, ಇದಕ್ಕೆ ಅಧಿಕಾರಿಗಳು ಸಮಂಜಯಿಸಿ ಉತ್ತರ ನೀಡದಿದ್ದಾಗ ಆಕ್ರೋಶಗೊಂಡ ರೈತರು ಇಂಜಿನಿಯರ್‌ಗಳ ಮೇಲೆ ಹರಿಹಾಯ್ದರು.

ರೈತರ ಪರವಾಗಿ ಮಾತನಾಡಿದ ಶೇಖರಪ್ಪ ತಂಗಲಿ ಫೀಡರ್‌ನಿಂದ ವಿದ್ಯುತ್ ನೀಡುತ್ತಿದ್ದು, ಇದು ಸಮರ್ಪಕವಾಗಿ ಇಲ್ಲದೆ 30ಕ್ಕೂ ಹೆಚ್ಚಿನ ಮೋಟರ್‌ಗಳು ಸುಟ್ಟುಹೋಗಿದ್ದರ ಹಿನ್ನೆಲೆಯಲ್ಲಿ ಕಳೆದ ಫೆ.21 ರಂದು ಇಲಾಖೆಗೆ ಬಂದು ಮೌಕಿಕವಾಗಿ ದೂರು ನೀಡಿದ್ದೇವು ಅದರು ಇಲಾಖೆ ಎಚ್ಚೆತ್ತುಕೊಳ್ಳಲಿಲ್ಲ ಎಂದು ಆರೋಪಿಸಿದರು.

ಯಳಗೊಂಡನಹಳ್ಳಿ ಜಯಣ್ಣ ಮಾತನಾಡಿ, 7 ಗಂಟೆ ವಿದ್ಯುತ್ ನೀಡುತ್ತೀರೋ ಇಲ್ಲವೂ ತಿಳಿಸಿ ಎಂದು ಇಂಜಿನಿಯರ್‌ಗಳಿಗೆ ತರಾಟೆ ತೆಗೆದುಕೊಂಡರು. ನಾಳೆಯಿಂದಲೆ 7 ಗಂಟೆ ವಿದ್ಯುತ್ ನೀಡುವುದಾಗಿ ಇಂಜಿನಿಯರ್ ಬಸವರಾಜಪ್ಪ, ತಿರುಪತಿ ಭರವಸೆ ನೀಡಿದರು. ಇದನ್ನು ಕೆಲವು ರೈತರು ವಿಡಿಯೋ ಮಾಡಿಕೊಂಡು ಮತ್ತೆರಡು ದಿನ ಬಿಟ್ಟು ಬರುತ್ತೆವೆ ಎಂದು ಗ್ರಾಮಗಳತ್ತ ತೆರಳಿದರು.

ತಾಲೂಕಿನಲ್ಲಿ ಇದೇ ರೀತಿ ಇನ್ನು ಅನೇಕ ಹಳ್ಳಿಗಳಿಗೆ ವಿದ್ಯುತ್ ಸರಬರಾಜುನಲ್ಲಿ ವ್ಯತ್ಯಯವಾಗಿದ್ದು, ಸರಿಪಡಿಸದಿದ್ದರೆ ಮುಂದಿನ ತಿಂಗಳಲ್ಲಿ ರೈತರು ಮೆಸ್ಕಾಂ ಇಲಾಖೆಯ ಮುಂದೆ ಹೋರಾಟ ಮಾಡಬೇಕಾಗುತ್ತದೆ ಎಂಬ ಎಚ್ಚರಿಕೆ ನೀಡಿದರು.

ಚಿಕ್ಕನಾಯ್ಕನಹಳ್ಳಿ ಕಲ್ಲೇಗೌಡರು, ವಿಟ್ಲಾಪುರದ ಮಂಜಣ್ಣ, ಚಂದ್ರಪ್ಪ, ಮಧು, ಹರೀಶ್, ಆನಂದ್ ಸೇರಿದಂತೆ ಮತ್ತಿತರರು ಇದ್ದರು.

# ಶ್ರೀ ಶನೇಶ್ವರ ಸ್ವಾಮಿಯವರ ವಾರ್ಷಿಕ ರಥೋತ್ಸವ ಸಂಪನ್ನ



**ಚಿಕ್ಕಮಗಳೂರು:** ತಾಲ್ಲೂಕಿನ ಅಲ್ಲಂಪುರ ಗ್ರಾಮದ ಶ್ರೀ ಶನೇಶ್ವರ ಸ್ವಾಮಿ ವಾರ್ಷಿಕ ರಥೋತ್ಸವ, ಕೆಂಡಾರ್ಚನೆ ಹಾಗೂ ಪೂಜಾ ಮಹೋತ್ಸವವು ಶನಿವಾರ ಮುಂಜಾನೆ ಹೋಮ–ಹವನ ಮೂಲಕ ನೂರಾರು ಭಕ್ತಗಣಗಳ ಸಮ್ಮುಖದಲ್ಲಿ ಅತ್ಯಂತ ಶ್ರದ್ಧಾಭಕ್ತಿಯಿಂದ ಸಂಪನ್ನಗೊಂಡಿತು.

ಪೂಜಾ ಕೈಂಕಾರ್ಯವು ಕಳೆದ ಎರಡು ದಿನಗಳಿಂದ ಜರುಗಿದ್ದು, ಶ್ರೀ ಶನೇಶ್ವರ ಸ್ವಾಮಿಗೆ ಎಳನೀರು, ಕಬ್ಬಿನಹಾಲಿನ ಮಹಾಭಿಷೇಕ, ಧ್ವಜಾರೋಹಣ, ಪುಣ್ಯಾಹ, ಗಣಪತಿ ಪೂಜೆ, ಮಹಾಸಂಕಲ್ಪ, ಕಳಸ ಸ್ಥಾಪನೆ, ಗಣಪತಿ, ನವಗ್ರಹ, ಶನೇಶ್ವರ, ಆಂಜನೇಯ ಮತ್ತು ಗಾಯತ್ರಿ ಹವನ ಜೊತೆಗೆ ತೊಟ್ಟಿಲು ಸೇವೆ ನಡೆಯಿತು.

ಇಂದು ಬೆಳಿಗ್ಗೆ ಶನೇಶ್ವರಸ್ವಾಮಿ ಕಲಶ ಮತ್ತು ಸವಾರಿ ನಡೆಮುಡಿ ಮೇಲೆ ಬಂದು ಸ್ವಾಮಿಯವರ ಕೆಂಡಾರ್ಚನೆ ಜರುಗಿತು. ಮಧ್ಯಾಹ್ನ 12.30ಕ್ಕೆ ಸಾರ್ವಜನಿಕ ಅನ್ನದಾಸೋಹ ಏರ್ಪಡಿಸಲಾಗಿತ್ತು. 2 ಗಂಟೆಗೆ ಬ್ರಹ್ಮರಥದಲ್ಲಿ ಶ್ರೀಯವರನ್ನು ಕುಳ್ಳರಿಸಿ ಭಕ್ತಾದಿಗಳು ಗ್ರಾಮದ ಸುತ್ತಮುತ್ತಲು ಮೆರವಣಿಗೆ ನಡೆಸಿ ಬಳಿಕ ದೇಗುಲಕ್ಕೆ ಕರೆತಂದರು.

ಬಳಿಕ ಶ್ರೀ ಶನೇಶ್ವರಸ್ವಾಮಿ ಮಹಾಮಂಗಳಾರತಿ ನಡೆಯಿತು. ಈ ಭವ್ಯ ರಥೋತ್ಸವದ ಎರಡು ದಿನದ ಕಾರ್ಯದಲ್ಲಿ ಸುಮಾರು ಐದಾರು ಸಾವಿರ ಭಕ್ತರು ಪಾಲ್ಗೊಂಡಿರುವುದು ವಿಶೇಷವಾಗಿತ್ತು.

# ಮಧುಮೇಹ ಹೆಚ್ಚಲು ಕರಿದ ಆಹಾರಗಳಾದ ಸಮೋಸ, ಚಿಪ್ಸ್ ಪಾತ್ರ ದೊಡ್ಡದು



ಸಂಸ್ಕರಿಸಿದ ಮತ್ತು ಎಣ್ಣೆಯಲ್ಲಿ ಕರಿದ ಆಹಾರಗಳಲ್ಲಿ ಅಡ್ವಾನ್ಸ್ಡ ಗ್ಲೈಕೇಶನ್ ಎಂಡ್-ಪ್ರೊಡಕ್ಟ್‌ಗಳಲ್ಲಿ (ಂಉಇ) ಅಧಿಕವಾಗಿರುವ ಕಾರಣ ಮಧುಮೇಹಿಗಳು ಇಂತಹ ಆಹಾರ ಸೇವಿಸಿದರೆ ಸಮಸ್ಯೆ ತೀವ್ರವಾಗುತ್ತದೆ ಎಂದು ಇಂಡಿಯನ್ ಕೌನ್ಸಿಲ್ ಆಫ್ ಮೆಡಿಕಲ್ ರಿಸರ್ಚ್ (ಱಅಒಖ) ಕ್ಲಿನಿಕಲ್ ಪ್ರಯೋಗವು ತಿಳಿಸಿದೆ.

ಮದ್ರಾಸ್ ಡಯಾಬಿಟಿಸ್ ರಿಸರ್ಚ್ ಫೌಂಡೇಶನ್, ಮಧುಮೇಹದಲ್ಲಿ ಸುಧಾರಿತ ಸಂಶೋಧನೆಗಾಗಿ ಱಅಒಖ ಕೇಂದ್ರದಿಂದ ಈ ಪ್ರಯೋಗ ನಡೆಸಲ್ಪಟ್ಟಿದ್ದು, ಈ ಅಧ್ಯಯನವು ಭಾರತದಲ್ಲಿ ಇದೇ ಮೊದಲನೆಯದಾಗಿದೆ. ಮಧುಮೇಹದ ಅಪಾಯವನ್ನು ತಗ್ಗಿಸಲು ಕಡಿಮೆ ಪ್ರಮಾಣದಲ್ಲಿ ಅಡ್ವಾನ್ಸ್ಡ ಗ್ಲೈಕೇಶನ್ ಎಂಡ್ (ಂಉಇ) ಆಹಾರವನ್ನು ಅಳವಡಿಸಿಕೊಳ್ಳುವುದು ಪರಿಣಾಮಕಾರಿ ತಂತ್ರವಾಗಿದೆ ಎಂದು ಸೂಚಿಸುತ್ತದೆ.

ಕೆಂಪು ಮಾಂಸ, ಫ್ರೆಂಚ್ ಫ್ರೈಗಳು, ಕರಿದ ಪದಾರ್ಥಗಳು, ಬೇಕರಿ ಉತ್ಪನ್ನಗಳು, ಪರೋಟ, ಸಮೋಸಾಗಳು ಮತ್ತು ಸಕ್ಕರೆಯ ಆಹಾರ ಗಳಲ್ಲಿ ಂಉಇ ಹೆಚ್ಚಿರುತ್ತದೆ. ಬಯೋಟೆಕ್ನಾಲಜಿ ಇಲಾಖೆಯಿಂದ ಧನಸಹಾಯ ಪಡೆದ ಸಂಶೋಧನೆಯ ವರದಿಯು ಕಳೆದ ವಾರ ಇಂಟರ್ನ್ಯಾಷನಲ್ ಜರ್ನಲ್ ಆಫ್ ಫುಡ್ ಸೈನ್ಸಸ್ ಅಂಡ್ ನ್ಯೂಟ್ರಿಷನ್‌ನಲ್ಲಿ ಪ್ರಕಟವಾಗಿದೆ ಎಂದು ಓಆಖಿಗಿ ವರದಿ ಮಾಡಿದೆ.


ಸುಧಾರಿತ ಗ್ಲೈಕೇಶನ್ ಎಂಡ್-ಉತ್ಪನ್ನಗಳು (ಂಉಇ) ಗ್ಲೈಕೇಶನ್ ಮೂಲಕ ರೂಪುಗೊಂಡ ಹಾನಿಕಾರಕ ಸಂಯುಕ್ತಗಳಾಗಿವೆ, ಈ ಪ್ರಕ್ರಿಯೆಯಲ್ಲಿ ಪ್ರೋಟೀನ್‌ಗಳು ಅಥವಾ ಲಿಪಿಡ್‌ಗಳನ್ನು ಆಲ್ಡೋಸ್ ಸಕ್ಕರೆಯನ್ನು, ಒಂದು ರೀತಿಯ ಕಾರ್ಬೋಹೈಡ್ರೇಟ್‌ಗಳಿಂದ ಮಾರ್ಪಡಿಸಲಾಗುತ್ತದೆ. ಂಉಇ ಗಳ ಅಧಿಕ ಸೇವನೆಯಿಂದ ಉರಿಯೂತ, ಆಕ್ಸಿಡೇಟಿವ್ ಒತ್ತಡ, ಇನ್ಸುಲಿನ್ ಉತ್ಪಾದನೆ ಕಡಿಮೆ ಮಾಡುತ್ತದೆ. ಹೀಗಾಗಿ ವಿವಿಧ ಆರೋಗ್ಯ ಸಮಸ್ಯೆಗಳು ಉಟಾಗುತ್ತವೆ.

12 ವಾರಗಳ ಕಾಲ ನಡೆದ ಅಧ್ಯಯನದಲ್ಲಿ 23 ಅಥವಾ ಅದಕ್ಕಿಂತ ಹೆಚ್ಚಿನ ಬಾಡಿ ಮಾಸ್ ಇಂಡೆಕ್ಸ್ (ಃಒಋ) ಹೊಂದಿರುವ 38 ಅಧಿಕ ತೂಕ ಮತ್ತು ಸ್ಥೂಲಕಾಯದ ವಯಸ್ಕರನ್ನು ಒಳಗೊಂಡಿತ್ತು.ಸಂಶೋಧಕರು ಎರಡು ಆಹಾರಗಳ ಪರಿಣಾಮಗಳನ್ನು ಹೋಲಿಸಿ ನೋಡಿದ್ದಾರೆ. ಒಂದು ಹೆಚ್ಚು ಂಉಇ ಮತ್ತು ಇನ್ನೊಂದರಲ್ಲಿ ಕಡಿಮೆ ಂಉಇ ಇರುವ ಆಹಾರ ಪದಾರ್ಥಗಳನ್ನು ಪರೀಕ್ಷಿಸಲಾಯಿತು. ಕಡಿಮೆ-ಂಉಇ ಇರುವ ಆಹಾರದಲ್ಲಿ ಭಾಗವಹಿಸಿದವರಿಗೆ ಸುಧಾರಿತ ಇನ್ಸುಲಿನ್ ಸಂವೇದನೆ ಮತ್ತು ರಕ್ತದಲ್ಲಿ ಕಡಿಮೆ ಸಕ್ಕರೆ ಮಟ್ಟ ಕಂಡು ಬಂತು. ಆದರೆ ಹೆಚ್ಚಿನ ಂಉಜಇರುವ ಆಹಾರ ಸೇವಿಸಿದವರಲ್ಲಿ ಅಧಿಕ ಮಟ್ಟದ ಉರಿಯೂತವನ್ನು ಕಂಡು ಬಂದಿದೆ.

ಮಧುಮೇಹದ ಅಪಾಯವನ್ನು ತಗ್ಗಿಸಲು, ಹಸಿರು ಎಲೆಗಳ ತರಕಾರಿಗಳು, ಹಣ್ಣುಗಳು, ಮೀನುಗಳು, ಬೇಯಿಸಿದ ಆಹಾರಗಳು ಮತ್ತು ಕೆಂಪು ಅನ್ನದಲ್ಲಿ ಕಡಿಮೆ ಪ್ರಮಾಣದಲ್ಲಿ ಂಉಇ ಇರುತ್ತದೆ ಹೀಗಾಗಿ ಇಂತಹ ಆಹಾರ ಸೇವಿಸಲು ಸಂಶೋಧಕರು ಶಿಫಾರಸ್ಸ ಮಾಡಿದ್ದಾರೆ.ಕಡಿಮೆ-ಂಉಇ ಆಹಾರಗಳು ಹೆಚ್ಚಿನ ಂಉಇ ಆಹಾರಗಳಿಗೆ ಹೋಲಿಸಿದರೆ ಇನ್ಸುಲಿನ್ ಸೂಕ್ಷ್ಮತೆ ಮತ್ತು ಉರಿಯೂತದಲ್ಲಿ ಸುಧಾರಣೆಗಳನ್ನು ತೋರಿಸಿದೆ. ಈ ಅಧ್ಯಯನವು ಭಾರತದಲ್ಲಿ ಮೊದಲನೆಯದು, ಕಡಿಮೆ ಂಉಇ ಆಹಾರಗಳು ಮಧುಮೇಹದ ಅಪಾಯವನ್ನು ಕಡಿಮೆ ಮಾಡಲು ತಂತ್ರವಾಗಿದೆ ಎಂದು ಸೂಚಿಸುತ್ತದೆ ಎಂದು ಈ ಅಧ್ಯಯನವು ತೀರ್ಮಾನಿಸಿದೆ. ಹುರಿಯುವುದು, ಕರಿಯುವುದು ಹಾಗು ಗ್ರಿಲ್ಲಿಂಗ್ ಮಾಡುವಂತಹ ಅಡುಗೆ ವಿಧಾನಗಳು ಂಉಇ ಮಟ್ಟವನ್ನು ಹೆಚ್ಚಿಸುತ್ತವೆ, ಆದರೆ ಬೇಯಿಸಿದ ಆಹಾರದಲ್ಲಿ ಂಉಜ ಪ್ರಮಾಣ ನಿಯಂತ್ರಣದಲ್ಲಿಡಲು ಸಹಾಯ ಮಾಡುತ್ತದೆ ಎಂದು ಸಂಶೋಧಕರು ಹೈಲೈಟ್ ಮಾಡಿದ್ದಾರೆ.

# ಮೆದುಳು ತಿನ್ನುವ ಅಮೀಬಾ ಸೋಂಕು

## ಕೆರೆ-ಕಟ್ಟೆ, ಈಜುಕೊಳಗಳಿಗೆ ಇಳಿಯುವ ಮುನ್ನ ಇರಲಿ ಎಚ್ಚರ..!



**ಬೆಂಗಳೂರು:** ದಕ್ಷಿಣ ರಾಜ್ಯಗಳಲ್ಲಿ ಮಳೆ ಹಿನ್ನೆಲೆ ಕೆರೆ ಕಟ್ಟೆ, ಕೊಳಗಳು ತುಂಬಿದ್ದು, ಈಜಾಡುವುದನ್ನು ತಪ್ಪಿಸುವುದು ಸೂಕ್ತ. ನಿಂತ ನೀರಿನಲ್ಲಿ ಮಿದುಳು ತಿನ್ನುವ ಅಮೀಬಾಗಳಿರುತ್ತವೆ. ಅವು ದೇಹದಲ್ಲಿ ಸೇರಿಕೊಳ್ಳುವ ಸಾಧ್ಯತೆಗಳಿವೆ ಎಂದು ವೈದ್ಯರು ಎಚ್ಚರಿಕೆ ನೀಡಿದ್ದಾರೆ.

ಈಗಾಗಲೇ ಇಂತಹ ಮಿದುಳು ತಿನ್ನುವ ಅಮೀಬಾಕ್ಕೆ ಕೇರಳದಲ್ಲಿ ಈಗಾಗಲೇ ಇಬ್ಬರು ಬಲಿಯಾಗಿದ್ದಾರೆ. ಅಮೀಬಿಕ್ ಎನ್ಸೆಫಾಲಿಟಿಸ್ ಅಪರೂಪ ಹಾಗೂ ಮಾರಣಾಂತಿಕವಾಗಿದ್ದು, ಕೇಂದ್ರ ನರಮಂಡಲದ ಮೇಲೆ ಪರಿಣಾಮ ಬೀರುತ್ತದೆ. ಇದು ಮುಕ್ತ ಜೀವಂತ ಅಮೀಬಾ ಆಗಿರುವ ನೈಗ್ಲೇರಿಯಾ ಫೌಲೇರಿ ಯಿಂದ ಉಂಟಾಗುತ್ತದೆ. ಇದು ತಾಜಾ ನೀರಿನ ಸೆಲೆಗಳಾದ, ಕೆರೆ, ನದಿಗಳಲ್ಲೂ ಕಾಣಬಹುದಾಗಿದೆ.

ಈ ಸೋಂಕಿನ ಲಕ್ಷಣಗಳು ಎಂದರೆ ತಲೆನೋವು, ಜ್ವರ, ತಲೆಸುತ್ತು, ವಾಂತಿ, ಗೊಂದಲ, ಸೀನು, ಭ್ರಮೆ, ಬೆಳಕಿನ ಸೂಕ್ಷ್ಮತೆ ಮತ್ತು ಕೋಮಾ ಆಗಿದೆ. ಅಮೀಬಿಕ್ ಎನ್ಸಿಫಾಲಿಟಿಸ್‌ನಲ್ಲಿ ಎರಡು ವಿಧಗಳಿವೆ. ಪ್ರಾಥಮಿಕ ಮೆನಿಂಗೊಎನ್ಸೆಫಾಲಿಟಿಸ್ (ಪಿಎಎಂ) ಮತ್ತು ಗ್ರ್ಯಾನುಲೋಮಾಟಸ್ ಅಮೀಬಿಕ್ ಎನ್ಸೆಫಾಲಿಟಿಸ್ (ಜಿಎಇ). ಪಿಎಂನ ಆರಂಭಿಕ ಲಕ್ಷಣಗಳನ್ನು ಮೆನಿಂಜೈಟಿಸ್‌ನಿ ರೀತಿಯಲ್ಲಿದೆ. ಜಿಎಇ ಲಕ್ಷಣಗಳು ಮೆದುಳಿನ ಬಾವು, ಎನ್ಸೆಫಾಲಿಟಿಸ್ ಅಥವಾ ಮೆನಿಂಜೈಟಿಸ್ ಹೊಂದಿದೆ. ಇದರ ಸಾವಿನ ದರ 90ರಷ್ಟಿದೆ.

ಈ ಹಿನ್ನೆಲೆಯಲ್ಲಿ ಪೋಷಕರು ನೀರಿನ ಮೂಲಗಳಲ್ಲಿ ಮಕ್ಕಳು ಆಡುವ ಮುನ್ನ ಎಚ್ಚರಿಕೆವಹಿಸಬೇಕು ಎಂದು ಫೋರ್ಟಿಸ್ ಆಸ್ಪತ್ರೆಯ ನರಶಸ್ತ್ರಚಿಕಿತ್ಸೆಯ ಸಲಹೆಗಾರ ಡಾ.ವಿಕಾಸ್ ನಾಯಕ್ ಹೇಳಿದ್ದಾರೆ.


ಪಿಎಎಂ ಕೇಂದ್ರ ನರ ವ್ಯವಸ್ಥೆ ಮೇಲೆ ತ್ವರಿತ ಪರಿಣಾಮ ಬೀರುತ್ತದೆ. ಇದರ ಸಾವಿನ ದರ 90ರಷ್ಟಿದೆ. ಅಮೀಬಾ ನೈಗ್ಲೇರಿಯಾ ಫೌಲೆರಿ ಇರುವಂತಹ ನೀರಿನ ಸೆಲೆಗಳಲ್ಲಿ ಆರೋಗ್ಯಯುತ ಮಕ್ಕಳು ಮತ್ತು ಯುವ ವಯಸ್ಕರರಲ್ಲೂ ಈ ಸೋಂಕು ತಗಲುತ್ತದೆ. ಈ ಅಮೀಬಾವು ತಾಜಾ ಮತ್ತು ಬೆಚ್ಚಗಿನ ನೀರು ಮತ್ತು ಮಣ್ಣಿನಲ್ಲಿ ಅಡಗಿರುತ್ತದೆ ತಿಳಿಸಿದ್ದಾರೆ.

ಈ ಸೋಂಕು ತಗುಲಿದ ವಾರದೊಳಗೆ ಇದರ ಲಕ್ಷಣಗಳಾದ ಕುತ್ತಿಗೆ ನೋವು, ಸೀನುವಿಕೆ, ಗೊಂದಲ, ಭ್ರಮೆ ಮತ್ತು ವ್ಯಕ್ತಿತ್ವ ಬದಲಾವಣೆ, ಫೋಟೋಫೋಬಿಯಾ, ಸಮತೋಲನ ನಷ್ಟಗಳು ಕಾಣುತ್ತದೆ. ಇವುಗಳನ್ನು ಆರಂಭಿಕ ಹಂತದಲ್ಲಿ ಪತ್ತೆಯಾಗದಿದ್ದರೆ, ಕೋಮಾ, ಮಿದುಳಿನ ಊತ ಮತ್ತು ಸಾವಿಗೆ ಕಾರಣವಾಗುತ್ತದೆ,

ಈ ಸೋಂಕಿಗೆ ಒಳಗಾಗುವುದನ್ನು ತಡೆಯಲು ಇರುವ ಪ್ರಮುಖ ಮುನ್ನೆಚ್ಚರಿಕೆ ಎಂದರೆ, ನಿಂತ ನೀರಿನಲ್ಲಿ ಈಜುವುದು, ಡೈವಿಂಗ್ ಮಾಡುವುದನ್ನು ತಪ್ಪಿಸುವುದಾಗಿದೆ.

ಒಂದು ವೇಳೆ ಈಜು ಅನಿವಾರ್ಯವಾದರೆ, ಮೂಗಿಗೆ ಕ್ಲಿಪ್?ನಂತಹ ಸುರಕ್ಷತಾ ಕ್ರಮ ತೆಗೆದುಕೊಳ್ಳುವುದು ಅವಶ್ಯವಾಗಿದೆ. ಸೋಂಕು ಪತ್ತೆ ಮಾಡಲು ಹಾಗೂ ಚಿಕಿತ್ಸೆ ನಿರ್ಧರಿಸಲು ಮೆದುಳಿನ ಬಯಾಪ್ಸಿಗೆ ಶಿಫಾರಸು ಮಾಡಲಾಗುತ್ತದೆ ಎಂದು ಆಸ್ಟರ್ ಸಿಎಂಐ ಆಸ್ಪತ್ರೆಯ ಸಾಂಕ್ರಾಮಿಕ ರೋಗ ಮತ್ತು ಪ್ರವಾಸ ಮೆಡಿಸಿನ್ ಕನ್ಸಲ್ಟೆಂಟ್ ಡಾ ಸ್ವಾತಿ ರಾಜಗೋಪಾಲ್ ಹೇಳಿದ್ದಾರೆ.

# ವಯಸ್ಸು 40 ದಾಟಿದಂತೆ ಕಾಣಿಸಿಕೊಳ್ಳುವ ಸಂದು ನೋವು



ಮನುಷ್ಯನಿಗೆ 40 ವರ್ಷ ಕಳೆಯುತ್ತಿದ್ದಂತೆ ಮೂಳೆಗಳು ಸವೆಯಲು ಆರಂಭವಾಗುತ್ತದೆ. ಸಂದುಗಳಲ್ಲಿ ನೋವು ಕಾಣಿಸಲು ಶುರುವಾಗುತ್ತದೆ. ಸಂದುಗಳೆಂದರೆ ಆಯುರ್ವೇದದಲ್ಲಿ ಉಲ್ಲೇಖಿಸಿರುವಂತೆ ಕೀಲುಗಳಾಗಿರುತ್ತವೆ. ಇದು ಮುಖ್ಯವಾಗಿ ಅಸ್ಥಿ ಮತ್ತು ಮಜ್ಜದಿಂದ ಹಾಗೂ ಇತರ ರಚನೆಗಳಾದ ಸ್ನಾಯು, ಕಂದರಾ, ಸಿರಗಳಿಂದ ಮಾಡಲಟ್ಟಿರುತ್ತವೆ.

ಆಯುರ್ವೇದದಲ್ಲಿ ಹೇಳುವಂತೆ ಮನುಷ್ಯನಿಗೆ ವಯಸ್ಸಾದಂತೆ ವಾತ, ಪಿತ್ತ, ಕಫದ ದೋಷಗಳು ಬರುತ್ತವೆ. ಮನುಷ್ಯನ ಮೂಳೆಗಳು, ಸಂದುಗಳಲ್ಲಿ ಶಕ್ತಿ ಕುಂದಿ ನೋವು ಕಾಣಿಸಿಕೊಳ್ಳಲಾರಂಭಿಸುತ್ತದೆ. 40 ವರ್ಷವನ್ನು ದಾಟಿದಾಗ ಮೊಣಕಾಲು, ಕೆಳ ಬೆನ್ನು, ಸೊಂಟ, ಕುತ್ತಿಗೆ ಮತ್ತು ಮೊಣಕೈಗಳಲ್ಲಿ ಹತ್ತಾರು ಆರೋಗ್ಯ ಸಮಸ್ಯೆಗಳು ಕಾಡುತ್ತವೆ. ದೇಹದ ತೂಕ ಹೆಚ್ಚಾಗಿದ್ದರೆ ನೋವು ಇನ್ನೂ ಜಾಸ್ತಿಯಾಗುತ್ತದೆ. ಹೀಗಾಗಿ 40 ವರ್ಷ ಕಳೆದ ನಂತರ ಆರೋಗ್ಯ ನಿರ್ವಹಣೆ ಮುಖ್ಯವಾಗುತ್ತದೆ.

ಅಸ್ವಸ್ಥತೆ

ಸಂದು ನೋವು ಸಂಧಿವಾತದ ವರ್ಣಪಟಲದ ಅಡಿಯಲ್ಲಿ ಬರುವ ಸ್ನಾಯು ಮತ್ತು ದೇಹದಲ್ಲಿ ಆಯಾಸ, ಕೀಲುಗಳಲ್ಲಿ ನೋವು ಕಾಣಿಸುವುದು ಇತ್ಯಾದಿ ವ್ಯವಸ್ಥಿತ ಅಸ್ವಸ್ಥತೆಗಳ ಒಂದು ಭಾಗ. ಆಯುರ್ವೇದವು ಈ ಪರಿಸ್ಥಿತಿಗಳನ್ನು ಮೂರು ಪ್ರಮುಖ ಕಾಯಿಲೆಗಳಾದ ವತಾರಕ್ತ, ಅಮಾವಾಟಾ ಮತ್ತು ವಾಟಾ ವೃಧಿ ನಲ್ಲಿ ನೋಡುತ್ತದೆ. ರೋಗನಿರ್ಣಯದ ತೀರ್ಮಾನಕ್ಕೆ ಬರಲು ಪ್ರತಿಯೊಂದು ಅಸ್ವಸ್ಥತೆಯನ್ನು ಪರೀಕ್ಷೆ ಮಾಡಲಾಗುತ್ತದೆ. ಕಾರಣಗಳು, ಕ್ಲಿನಿಕಲ್ ಅಧ್ಯಯನ, ಕಾಯಿಲೆ ಉಲ್ಬಣಗೊಳ್ಳುವಿಕೆ ಮತ್ತು ನಿವಾರಣೆ ಅಂಶಗಳು ಇತ್ಯಾದಿಗಳಿಗೆ ಸಂಬಂಧಿಸಿದಂತೆ ಸಂಧಿವಾತವನ್ನು ವೈದ್ಯಕೀಯವಾಗಿ ನಿರ್ವಹಿಸಬೇಕಾಗಿದೆ.

**ಅಭ್ಯಂಗ:** ಸಾಮಾನ್ಯವಾಗಿ, ವ್ಯಕ್ತಿಗೆ ಸೂಕ್ತವಾದ ನಿಗದಿತ ಔಷಧೀಯ ತೈಲವನ್ನು ದೇಹಕ್ಕೆ ಮಸಾಜ್ ಮಾಡುವುದನ್ನು ಅಭ್ಯಂಗ ಎನ್ನುತ್ತಾರೆ. ಕೀಲುಗಳಿಗೆ ತೈಲ ಲೇಪನ, 15-20 ನಿಮಿಷಗಳ ಕಾಲ ಮಸಾಜ್ ಮಾಡುವುದು ನಂತರ ಬಿಸಿನೀರಿನಲ್ಲಿ ತೊಳೆದಾಗ ಬಿಗಿತ, ಸೌಮ್ಯವಾದ ಉರಿಯೂತವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ, ಇದರಿಂದಾಗಿ ನೋವು ಕಡಿಮೆಯಾಗುತ್ತದೆ. ಕಫ, ಜ್ವರ, ಕೀಲುಗಳಲ್ಲಿನ ಮೃದುತ್ವ ಮುಂತಾದ ಸ್ಥಿತಿಗಳಿಗೆ ಸಹ ಅಭ್ಯಂಗ ಉತ್ತಮ ಪರಿಹಾರವಾಗುತ್ತದೆ.

**ಪಂಚಕರ್ಮ ಚಿಕಿತ್ಸೆ**

ಪಂಚಕರ್ಮ ಚಿಕಿತ್ಸೆಗಳಲ್ಲಿ ವಾಸ್ತಿ (ಚಿಕಿತ್ಸಕ ಎನಿಮಾ) ಇವೆ, ಇದು ಆಸ್ತಿ ಧಾತು (ಮೂಳೆ ಅಂಗಾಂಶ) ಗೆ ವಿಶೇಷ ಸಂಬಂಧವನ್ನು ಹೊಂದಿದೆ, ಮೂಳೆಗಳ ಕ್ಷೀಣತೆಯನ್ನು ತಡೆಯುತ್ತದೆ. ಕೀಲುಗಳನ್ನು ನಯಗೊಳಿಸುವ ಮೂಲಕ ಸಂದುಗಳಲ್ಲಿ ನೋವು ಕಡಿಮೆ ಮಾಡುತ್ತದೆ. ಕೀಲುಗಳಲ್ಲಿನ ಉರಿಯೂತವನ್ನು ತಡೆಯಲು ಸಹಾಯ ಮಾಡುತ್ತದೆ. ಪ್ಯಾಟ್ರಪೋಟಾಲಾ ಸ್ವೀಡಾ, ಜಂಬೀರಪಿಂದ ಸ್ವೀಡಾ, ಶಸ್ತಿಕಾ ಪಿಂಡಾ ಸ್ವೇಡಾದಂತಹ ಚಿಕಿತ್ಸಾ ಪದ್ಧತಿಗಳಿವೆ.

# ಕೋವಿಡ್-19 ಮೊದಲ ಅಲೆಯ ಸೋಂಕಿತರಲ್ಲಿ Heart Attack ಅಪಾಯ ಹೆಚ್ಚು: ಅಧ್ಯಯನ!




ನವದೆಹಲಿ: ಇಡೀ ಜಗತ್ತನ್ನೇ ಬೆಚ್ಚಿ ಬೀಳಿಸಿದ್ದ ಮಹಾಮಾರಿ ಕೋವಿಡ್ ಆತಂಕ ಇನ್ನೂ ಕಡಿಮೆಯಾಗಿಲ್ಲ.. ಒಂದಲ್ಲ ಒಂದು ರೀತಿಯಲ್ಲಿ ಮಾನುಷ್ಯರನ್ನು ಕೋವಿಡ್ ವೈರಸ್ ಕಾಡುತ್ತಲೇ ಇದ್ದು, ಇದೀಗ ಹಾರ್ಟ್ ಅಟ್ಯಾಕ್ ರೂಪದಲ್ಲಿ ಕೋವಿಡ್ ಭೀತಿ ಹೆಚ್ಚಿಸಿದೆ.

ಹೌದು.. ಹೊಸ ಅಧ್ಯಯನದ ಪ್ರಕಾರ, ಕೋವಿಡ್ ಸಾಂಕ್ರಾಮಿಕ ರೋಗದ ಆರಂಭಿಕ ಅಂದರೆ ಮೊದಲ ಅಲೆಯಲ್ಲಿ ತೀವ್ರವಾದ ಕೋವಿಡ್ -19 ಸೋಂಕಿಗೆ ಒಳಗಾಗಿದ್ದ ವ್ಯಕ್ತಿಗಳು ಹೃದಯಾಘಾತ ಮತ್ತು ಪಾರ್ಶ್ವವಾಯುಗಳನ್ನು ಅನುಭವಿಸುವ ಅಪಾಯ ಎರಡು ಪಟ್ಟು ಹೆಚ್ಚು ಎಂದು ಹೇಳಲಾಗಿದೆ.

ಆರ್ಟೆರಿಯೊಸ್ಕ್ಲೆರೋಸಿಸ್, ಥ್ರಂಬೋಸಿಸ್ ಮತ್ತು ನಾಳೀಯ ಜೀವಶಾಸ್ತ್ರದ ಜರ್ನಲ್‌ನಲ್ಲಿ ಈ ವಾರ ಪ್ರಕಟವಾದ ಸಂಶೋಧನೆ ಮತ್ತು ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಹೆಲ್ತ್ ಈ ಕುರಿತು ಮಾಹಿತಿ ನೀಡಿದ್ದು, ಹೆಚ್ಚಿದ ಅಪಾಯವು ಮೂರು ವರ್ಷಗಳವರೆಗೆ ಇರುತ್ತದೆ ಎಂದು ಬಹಿರಂಗಪಡಿಸಿದೆ.

ಕೋವಿಡ್ ಸೋಂಕಿಗೆ ಒಳಗಾಗದವರಿಗೆ ಹೋಲಿಸಿದರೆ ಕೋವಿಡ್ -19 ಸೋಂಕಿಗೆ ಒಳಗಾದವರು ಹೃದಯಾಘಾತ, ಪಾರ್ಶ್ವವಾಯು ಮತ್ತು ಮರಣವನ್ನು ಅನುಭವಿಸುವ ಸಾಧ್ಯತೆ ಎರಡು ಪಟ್ಟು ಹೆಚ್ಚು ಎಂದು ಅಧ್ಯಯನವು ಕಂಡುಹಿಡಿದಿದೆ. ಇದಲ್ಲದೆ, ವೈರಸ್‌ನಿಂದ ಆಸ್ಪತ್ರೆಗೆ ದಾಖಲಾದವರಿಗೆ, ಅಪಾಯವು ನಾಲ್ಕು ಪಟ್ಟು ಹೆಚ್ಚಾಗಿರುತ್ತದೆ ಎಂದು ವರದಿ ಹೇಳಿದೆ.

0 ವರ್ಷಗಳ ಪ್ರಗತಿ ನಾಶ ಮಾಡಿದ ಕೋವಿಡ್!

ಅಧ್ಯಯನದ ಪ್ರಧಾನ ತನಿಖಾಧಿಕಾರಿಯಾದ ಡಾ ಹೂಮನ್ ಅಲ್ಲಾಯೀ ಈ ಬಗ್ಗೆ ಮಾಹಿತಿ ನೀಡಿದ್ದು, 'ತೀವ್ರವಾದ ಕೋವಿಡ್ -19 ನಿಂದ ಉಂಟಾಗುವ ಹೃದಯರಕ್ತನಾಳದ ಬೆದರಿಕೆಗಳನ್ನು ಟೈಪ್ 2 ಮಧುಮೇಹಕ್ಕೆ ಹೋಲಿಸಬಹುದು. "2010 ರಿಂದ 2019 ರವರೆಗಿನ ಹೃದಯರಕ್ತನಾಳದ ಸಮಸ್ಯೆಯಿಂದ ಸಂಭವಿಸಿದ ಮರಣ ಪ್ರವೃತ್ತಿಗಳು ಸ್ಥಿರವಾಗಿ ಕ್ಷೀಣಿಸಿದ್ದವು.

ಆದರೆ ಇದ್ದಕ್ಕಿದ್ದಂತೆ, 2020 ಮತ್ತು 2022 ರ ನಡುವೆ ಅಂದರೆ ಕೋವಿಡ್ -19 ಸೋಂಕಿನ ಕಾರಣದಿಂದ ಹತ್ತು ವರ್ಷಗಳ ಈ ಪ್ರಗತಿಯು ಸಂಪೂರ್ಣವಾಗಿ ನಾಶವಾಯಿತು. ಹೃದಯರಕ್ತನಾಳದ ಸಮಸ್ಯೆ ಅಥವಾ ಹಾರ್ಟ್ ಅಟ್ಯಾಕ್ ನಿಂದ ಸಾವನ್ನಪ್ಪಿದವರ ಸಂಖ್ಯೆ ಗಣನೀಯವಾಗಿ ಏರಿಕೆಯಾಗುತ್ತಾ ಸಾಗಿದೆ ಎಂದು ಹೇಳಿದ್ದಾರೆ.

ಈ ರಕ್ತದ ಗುಂಪುಗಳಿಗೆ ಅಪಾಯ ಹೆಚ್ಚು!

ಸಂಶೋಧನೆಗಳು ನಿರ್ದಿಷ್ಟವಾಗಿ ವಿಭಿನ್ನ ರಕ್ತದ ಪ್ರಕಾರಗಳಿಗೆ ಸಂಬಂಧಿಸಿದ ಅಪಾಯಗಳನ್ನು ಒತ್ತಿಹೇಳುತ್ತವೆ, ಂ, ಃ ಮತ್ತು ಂಃ ರಕ್ತದ ಪ್ರಕಾರಗಳನ್ನು ಹೊಂದಿರುವ ವ್ಯಕ್ತಿಗಳು ಕೋವಿಡ್ -19 ನಿಂದ ಹೆಚ್ಚಿದ ಹೃದಯರಕ್ತನಾಳದ ತೊಡಕುಗಳಿಗೆ ಹೆಚ್ಚು ದುರ್ಬಲರಾಗಿರುತ್ತಾರೆ, ಆದರೆ ಔ ಪ್ರಕಾರದ ರಕ್ತ ಹೊಂದಿರುವವರು ಕಡಿಮೆ ಅಪಾಯವನ್ನು ಪ್ರದರ್ಶಿಸುತ್ತಾರೆ ಎಂದು ವರದಿ ಹೇಳಿದೆ.

ಈ ಸಂಶೋಧನೆಗಾಗಿ ಬ್ರಿಟನ್ ನ ಬಯೋಬ್ಯಾಂಕ್‌ನಿಂದ ಡೇಟಾವನ್ನು ಬಳಸಿಕೊಂಡಿದ್ದು, ಆದಾಗ್ಯೂ, ಇತರ ಜನಸಂಖ್ಯಾಶಾಸ್ತ್ರದಲ್ಲಿ ಇದೇ ರೀತಿಯ ಅಧ್ಯಯನಗಳು ಹೋಲಿಸಬಹುದಾದ ಫಲಿತಾಂಶಗಳನ್ನು ನೀಡಿವೆ ಎಂದು ಡಾ.ಹೂಮನ್ ಅಲ್ಲಾಯೀ ಹೇಳಿದ್ದಾರೆ.

ಲಸಿಕೆಗಳದ್ದೇ ನಿರ್ಣಾಯಕ ಪಾತ್ರ

ಇನ್ನು ವ್ಯಾಕ್ಸಿನೇಷನ್‌ಗಳ ನಿರ್ಣಾಯಕ ಪಾತ್ರವನ್ನು ಒತ್ತಿಹೇಳಿದ ಡಾ ಅಲಾಯಿ ಅವರು ಹೇಳಿದರು, "ನೀವು ಯಾವುದೇ ಲಸಿಕೆಯನ್ನು ಪಡೆದರೂ, ಲಸಿಕೆ ಅಥವಾ ಬೂಸ್ಟರ್‌ನ ಕೇವಲ ಆರು ತಿಂಗಳ ನಂತರ, ಹೃದಯಾಘಾತ ಮತ್ತು ಪಾರ್ಶ್ವವಾಯುವಿನ ಸಾಧ್ಯತೆ ಕಡಿಮೆಯಾಗಿದೆ. ಆದರೆ ಕಾಲಾನಂತರದಲ್ಲಿ ರೋಗನಿರೋಧಕ ಶಕ್ತಿ ಕ್ಷೀಣಿಸುತ್ತದೆ, ಅದಕ್ಕಾಗಿಯೇ ನಿಮಗೆ ಬೂಸ್ಟರ್‌ಗಳು ಬೇಕಾಗುತ್ತವೆ. ತೀವ್ರವಾದ ಕೋವಿಡ್-19 ಸೋಂಕು ಹೊಂದಿದ್ದ ವ್ಯಕ್ತಿಗಳು, ವಿಶೇಷವಾಗಿ ಆಸ್ಪತ್ರೆಗೆ ದಾಖಲಾದವರು, ವೈರಸ್‌ನ ಸಂಭಾವ್ಯ ದೀರ್ಘಕಾಲೀನ ಆರೋಗ್ಯ ಪರಿಣಾಮಗಳ ಬಗ್ಗೆ ತಮ್ಮ ವೈದ್ಯರನ್ನು ಸಂಪರ್ಕಿಸಲು ಒತ್ತಾಯಿಸಲಾಗುತ್ತದೆ.

ಕೋವಿಡ್ ನಮ್ಮನ್ನು ಬಿಟ್ಟು ಹೋಗುತ್ತಿಲ್ಲ, ಆದ್ದರಿಂದ ನಾವು ಅದರ ಬಗ್ಗೆ ಮಾತನಾಡಲು ಪ್ರಾರಂಭಿಸಬೇಕು. ನಿಮ್ಮ ವ್ಯಾಕ್ಸಿನೇಷನ್ ಮತ್ತು ಬೂಸ್ಟರ್‌ಗಳು ಮತ್ತು ನಿಯಮಿತ ತಪಾಸಣೆಗಳನ್ನು ಪಡೆದುಕೊಳ್ಳಿ" ಎಂದು ಡಾ ಅಲ್ಲಾಯೀ ಸಲಹೆ ನೀಡಿದ್ದಾರೆ.

# ಮಕ್ಕಳಲ್ಲಿ ಮಧುಮೇಹ ತಡೆಯುವುದು ಹೇಗೆ...?



**ಬದಲಾದ ಜೀವನಶೈಲಿಯಿಂದ ಇಂದು ಮಕ್ಕಳಲ್ಲಿಯೂ ಮಧುಮೇಹವನ್ನು ಸರ್ವೇಸಾಮಾನ್ಯವಾಗಿ ನೋಡುತ್ತಿದ್ದೇವೆ. ಮಕ್ಕಳಲ್ಲಿಯೂ ಟೈಪ್?1 ಮತ್ತು ಟೈಪ್?2 ಡಯಾಬಿಟಿಸ್ ಕಾಣಿಸಿಕೊಳ್ಳುತ್ತಿದ್ದು, ಇದು ಮಕ್ಕಳ ಭವಿಷ್ಯದ ದೃಷ್ಟಿಯಿಂದ ಅತ್ಯಂತ ಅಪಾಯಕಾರಿಯಾಗಿದೆ.**

**ಇಂದು ಮಕ್ಕಳ ದಿನಾಚರಣೆ, ಈ ದಿನದಂದು ಮಕ್ಕಳಲ್ಲಿ ಹೆಚ್ಚಾಗುತ್ತಿರುವ ಡಯಾಬಿಟಿಸ್ ನಿಯಂತ್ರಿಸಲು ಒಂದಷ್ಟು ಸಲಹೆಯನ್ನು ವೈದ್ಯರು ನೀಡಿದ್ದಾರೆ.**

**ಬಂಜಾರಾ ಹಿಲ್‌ನ ರೆನೋವಾ ಸೆಂಚುರಿ ಹಾಸ್ಪಿಟಲ್‌ನ ಕನ್ಸಲ್ಟೆಂಟ್ ಕ್ಲಿನಿಕಲ್ ಡಯೆಟಿಷಿಯನ್ ಸೌಜನ್ಯ ಗನಿವಾಡ ಅವರು ಮಾತನಾಡಿ, ಪೌಷ್ಟಿಕಾಂಶದ ಸಲಹೆ ನೀಡುವುದಷ್ಟೇ ಅಲ್ಲ, ಸಕ್ಕರೆ ಅಂಶವುಳ್ಳ ಆಹಾರ ಪದಾರ್ಥಗಳು ಮತ್ತು ಸಂಸ್ಕರಿಸಿದ ಆಹಾರಗಳಿಂದ ಎದುರಾಗುವ ಅಪಾಯಗಳ ಕುರಿತು ತಿಳಿಸಬೇಕಾಗಿದೆ. ಮೈದಾ, ಬ್ರೆಡ್ ಬದಲಿಗೆ ಧಾನ್ಯ ಅಥವಾ ಕಡಿಮೆ ಸಕ್ಕರೆ ಅಂಶವುಳ್ಳ ಹಣ್ಣುಗಳನ್ನು ಬಳಕೆ ಮಾಡುವಂತೆ ತಿಳಿಸಲಾಗುವುದು. ಇದು ಜೀವನಶೈಲಿಯನ್ನು ಬದಲಾಯಿಸುತ್ತದೆ ಎಂದು ಹೇಳಿದ್ದಾರೆ.**

ಎಲ್‌ಬಿ ನಗರದ ಕಾಮಿನೇನಿ ಹಾಸ್ಪಿಟಲ್ಸ್‌ನ ಕನ್ಸಲ್ಟೆಂಟ್ ಎಂಡೋಕ್ರೈನಾಲಜಿಸ್ಟ್ ಡಾ ಜಿ ಸಂದೀಪ್ ರೆಡ್ಡಿ ಅವರು ಮಾತನಾಡಿ, ಮಧುಮೇಹ ದೈಹಿಕ ಆರೋಗ್ಯದ ಮೇಲಷ್ಟೇ ಅಲ್ಲ, ಮಕ್ಕಳ ಮಾನಸಿಕ ಆರೋಗ್ಯದ ಮೇಲೂ ಪರಿಣಾಮ ಬೀರುತ್ತದೆ. ಹೀಗಾಗಿ ಮಕ್ಕಳಿಗೆ ಅವರ ಸ್ಥಿತಿಯ ಬಗ್ಗೆ ಅರ್ಥ ಮಾಡಿಸುವುದು ಮುಖ್ಯವಾಗುತ್ತದೆ. ಇದರಿಂದ ಮಧುಮೇಹವನ್ನು ಸುಲಭವಾಗಿ ನಿರ್ವಹಣೆ ಮಾಡಬಹುದು. ಸ್ನೇಹಿತರೊಂದಿಗೆ ಕೂಡಿದಾಗ ಮಕ್ಕಳು ಒತ್ತಡವನ್ನು ಅನುಭವಿಸುತ್ತಾರೆ. ಇದು ಅವರ ಆತ್ಮವಿಶ್ವಾಸದ ಮೇಲೆ ಪರಿಣಾಮ ಬೀರುತ್ತದೆ. ಹೀಗಾಗಿ ಮಕ್ಕಳಿಕೆ ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡಬೇಕು ಎಂದು ಹೇಳಿದ್ದಾರೆ.

ಮಕ್ಕಳನ್ನು ನಿಯಂತ್ರಿಸುವ ಬದಲು ಅವರಿಗೆ ಆಹಾರ ಸಿದ್ಧಪಡಿಸಿಕೊಳ್ಳಲು ಬಿಡಬೇಕು. ಇದು ಅವರ ಆತ್ಮಸ್ಥೈರ್ಯವನ್ನು ಹೆಚ್ಚಿಸುವುದಲ್ಲದೆ ಇದು ಅವರ ಆತ್ಮವಿಶ್ವಾಸದ ಮೇಲೆ ಪರಿಣಾಮ ಬೀರುತ್ತದೆ. ಹೀಗಾಗಿ ಮಕ್ಕಳಿಕೆ ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡಬೇಕು ಎಂದು ಹೇಳಿದ್ದಾರೆ.

ಮಕ್ಕಳನ್ನು ನಿಯಂತ್ರಿಸುವ ಬದಲು ಅವರಿಗೆ ಆಹಾರ ಸಿದ್ಧಪಡಿಸಿಕೊಳ್ಳಲು ಬಿಡಬೇಕು. ಇದು ಅವರ ಆತ್ಮಸ್ಥೈರ್ಯವನ್ನು ಹೆಚ್ಚಿಸುವುದಲ್ಲದೆ,, ಆರೋಗ್ಯಕರ ಆಹಾರ ಸೇವನೆ ರೂಢಿಸಿಕೊಳ್ಳಲು ಸಹಾಯ ಮಾಡುತ್ತದೆ. ಇಲ್ಲದೆ, ದೈಹಿಕ ಚಟುವಟಿಕೆ ಕೂಡ ನಿರ್ಣಾಯವಾಗಿದ್ದು, ಈ ಬಗ್ಗೆಯೂ ಅರಿವು ಮೂಡಿಸಬೇಕು. ವ್ಯಾಯಾಮವು ಮಧುಮೇಹವನ್ನು ನಿರ್ವಹಿಸಲು ಸಹಾಯ ಮಾಡುವ ಸರಳ ಮಾರ್ಗಗಳಲ್ಲಿ ಒಂದಾಗಿದೆ. ಇದು ಅವರ ಮಾನಸಿಕ ಯೋಗಕ್ಷೇಮಕ್ಕೂ ಒಳ್ಳೆಯದು ಎಂದು ತಿಳಿಸಿದ್ದಾರೆ.ಮಕ್ಕಳಲ್ಲಿ ಮಧುಮೇಹ ನಿಯಂತ್ರಿಸುವುದು ಹೇಗೆ?

ಮಕ್ಕಳಲ್ಲಿ ಮಧುಮೇಹ ನಿಯಂತ್ರಿಸಲು ಸಮತೋಲಿತ ಮತ್ತು ಪೌಷ್ಟಿಕ ಆಹಾರ ಅತ್ಯಗತ್ಯ. ಹೆಚ್ಚು ತರಕಾರಿ, ಹಣ್ಣು, ಧಾನ್ಯ ಮತ್ತು ಪ್ರೋಟೀನ್ ಸೇವನೆ ಹೆಚ್ಚಾಗಿರಲಿ. ಸಕ್ಕರೆ, ಕಾರ್ಬೋಹೈಡ್ರೇಟ್ ಆಹಾರದ ಮೇಲೆ ಸಂಪೂರ್ಣ ನಿಯಂತ್ರಣ ಇರಿಸಬೇಕು.ನಿಯಮಿತ ಏರೋಬಿಕ್ ವ್ಯಾಯಾಮ, ಮಕ್ಕಳನ್ನು ಕ್ರೀಡೆಯಲ್ಲಿ ತೊಡಗಿಸುವುದು ಸೇರಿದಂತೆ ದೈಹಿಕ ಚಟುವಟಿಕೆಯಲ್ಲಿ ಕ್ರಿಯಾಶೀಲರಾಗಿರುವಂತೆ ನೋಡಿಕೊಳ್ಳಿ. ಜೊತೆಗೆ, ಸಕ್ಕರೆ ಮಟ್ಟವನ್ನು ಪ್ರತಿ ನಿತ್ಯ ತಪಾಸಣೆ ಮಾಡುತ್ತ ಬರುವುದರಿಂದ ಸಕ್ಕರೆ ಮಟ್ಟದ ಬಗ್ಗೆ ತಿಳಿದುಕೊಳ್ಳಲು ಸಾಧ್ಯವಾಗುತ್ತದೆ.

### ಪೋಷಕರಿಗೆ ಕೆಲ ಸಲಹೆಗಳು...


**ಮಕ್ಕಳೊಂದಿಗೆ ಮುಕ್ತವಾಗಿ ಮಾತನಾಡಿ.**
**ಆರೋಗ್ಯದ ಬಗ್ಗೆ ಮಕ್ಕಳಿಗೆ ಶಿಕ್ಷಣ ನೀಡಿ.**
**ನಿಮ್ಮ ಕೆಲಸಗಳಲ್ಲಿ ಅವರನ್ನು ತೊಡಗಿಸಿಕೊಳ್ಳಿ**
**ಭಾವನಾತ್ಮಕ ಬೆಂಬಲ**
**ಮಕ್ಕಳು ವಿಭಿನ್ನವಾಗಿ ಭಾವಿಸಬೇಡಿ**
**ಆರೋಗ್ಯಕರ ದಿನಚರಿಯನ್ನು ರೂಪಿಸಿ.**
**ಅವರ ಪ್ರತಿಯೊಂದು ಕಾರ್ಯಕ್ಕೂ ಪ್ರೋತ್ಸಾಹಿಸಿ.**

### ಪರ್ಯಾಯ ಹಾಗೂ ಆರೋಗ್ಯಕರ ಸಿಹಿ ಪದಾರ್ಥಗಳು ಇಂತಿವೆ...

**ಡಾರ್ಕ್ ಚಾಕೊಲೇಟ್**
**ಸಿರಿಧಾನ್ಯದ ಹಿಟ್ಟು**
**ಡ್ರೈಫ್ರೂಟ್ಸ್ ಲಡ್ಡು**
**ಹಣ್ಣುಗಳಿಂದ ತಯಾರಿಸಿದ ತಿನಿಸುಗಳು (ಸ್ಮೂಥಿಸ್, ಮೊಸರು, ಕಸ್ಟರ್ಡ್ ಇತ್ಯಾದಿ...)**

**ಚಿಕ್ಕಿ, ಮಖಾನ, ಧಾನಗಳಿಂದ ಮಾಡಿದ ಬಿಸ್ಕೆಟ್.**

# ದೇಶದಲ್ಲಿ ಬಂಜೆತನ ಹೆಚ್ಚಳ: ಶೇ.50 ರಷ್ಟು ಕೇಸ್ ಗಳಿಗೆ ಪುರುಷರಲ್ಲಿನ ಸಮಸ್ಯೆಗಳೇ ಕಾರಣ



**ಬೆಂಗಳೂರು: ಕಳೆದೊಂದು ದಶಕದಲ್ಲಿ ಪ್ರಮುಖವಾಗಿ ಯುವಕರಲ್ಲಿ ಬಂಜೆತನ ಪ್ರಕರಣಗಳು ನಿರಂತರವಾಗಿ ಹೆಚ್ಚಾಗುತ್ತಿದೆ. ಶೇ. 40-50 ರಷ್ಟು ಬಂಜೆತನ ಪ್ರಕರಣಗಳು ಪುರುಷರ ಅಂಶಗಳೊಂದಿಗೆ ಸಂಬಂಧ ಹೊಂದಿವೆ ಎಂದು ಸಮಗ್ರ ಬಂಜೆತನದ ಕಾನ್ಕ್ಲೇವ್ (ಅಖಅ) 2025 ರ ಸಂಘಟನಾ ಅಧ್ಯಕ್ಷ ಡಾ.ಪ್ರವೀಣ್ ಜೋಶಿ ಹೇಳಿದರು.**

**ಭಾನುವಾರ ಗ್ಲೋಬಲ್ ಹೆಲ್ತ್‌ಕೇರ್ ಅಕಾಡೆಮಿ ನಗರದಲ್ಲಿ ಆಯೋಜಿಸಿದ್ದ ಅಖಅ 2025 ರಲ್ಲಿ ಮಾತನಾಡಿದ ಅವರು, ಭಾರತದಲ್ಲಿ ದಂಪತಿಗಳಲ್ಲಿ ಬಂಜೆತನವು ಆತಂಕಕಾರಿಯಾಗಿ ಹೆಚ್ಚಾಗುತ್ತಿರುವುದರಿಂದ ಆರಂಭಿಕ ರೋಗನಿರ್ಣಯ ಮತ್ತು ಸಮಗ್ರ ಫಲವತ್ತತೆಯ ಆರೈಕೆಯ ಅಗತ್ಯವನ್ನು ತಜ್ಞರು ಒತ್ತಿ ಹೇಳುತ್ತಿದ್ದಾರೆ. ಆರಂಭಿಕ ರೋಗನಿರ್ಣಯ ಮತ್ತು ಸಮಗ್ರ ಫಲವತ್ತತೆಯ ಆರೈಕೆಗೆ ಗಮನ ನೀಡಬೇಕು ಎಂದರು.**

ಬಂಜೆತನ ಹೆಚ್ಚಳಕ್ಕೆ ಕಾರಣಗಳು: ನಗರ ಪ್ರದೇಶಗಳಲ್ಲಿ ಬಂಜೆತನದ ಹೆಚ್ಚುತ್ತಿರುವ ಕುರಿತು ಪ್ರತಿಕ್ರಿಯಿಸಿದ ಡಾ. ಜೋಶಿ, ಕಡಿಮೆ ವೀರ್ಯಾಣು ಹಾಗೂ ವೀರ್ಯಗಳ ಕಡಿಮೆ ಚಲನಶೀಲನತೆ, ಹಾರ್ಮೋನುಗಳ ಅಸಮತೋಲನ, ಆನುವಂಶಿಕತೆ, ಧೂಮಪಾನ, ಅತಿಯಾದ ಮದ್ಯಪಾನ, ಸ್ಥೂಲಕಾಯತೆ ಮತ್ತು ಶಾಖ,ವಿಕಿರಣಕ್ಕೆ ಹೆಚ್ಚಿನ ಕಾಲ ಒಡ್ಡಿಕೊಳ್ಳುವುದು ಮುಂತಾದ ಜೀವನಶೈಲಿ ಪುರುಷ ಬಂಜೆತನದ ಹೆಚ್ಚಳಕ್ಕೆ ಕಾರಣವಾಗಿವೆ.

ಅಲ್ಲದೇ, ಬೆಂಗಳೂರಿನಂತಹ ನಗರಗಳಲ್ಲಿ ಹೆಚ್ಚುತ್ತಿರುವ ಮಾಲಿನ್ಯ ಮಟ್ಟ ವೀರ್ಯದ ಆರೋಗ್ಯ ಕ್ಷೀಣಿಸುವುದಕ್ಕೆ ಸಂಬಂಧಿಸಿದೆ ಎಂದು ಡಾ. ಪ್ರವೀಣ್ ಹೇಳಿದರು.

ಕರ್ನಾಟಕದಲ್ಲಿ ಶೇ. 5.9 ರಷ್ಟು ವಿವಾಹಿತ ಮಹಿಳೆಯರಲ್ಲಿ ಬಂಜೆತನ: ಸ್ತ್ರೀ ಬಂಜೆತನವನ್ನು ಉದ್ದೇಶಿಸಿ ಮಾತನಾಡಿದ ಅಖಅ 2025 ರ ಸಂಘಟನಾ ಕಾರ್ಯದರ್ಶಿ ಡಾ.ಮೇಘನಾ ನ್ಯಾಪತಿ, ?2019-20ರ ರಾಷ್ಟ್ರೀಯ ಕುಟುಂಬ ಕರ್ನಾಟಕದಲ್ಲಿ ಶೇ. 5.9 ರಷ್ಟು ವಿವಾಹಿತ ಮಹಿಳೆಯರಲ್ಲಿ ಬಂಜೆತನ: ಸ್ತ್ರೀ ಬಂಜೆತನವನ್ನು ಉದ್ದೇಶಿಸಿ ಮಾತನಾಡಿದ ಅಖಅ 2025 ರ ಸಂಘಟನಾ ಕಾರ್ಯದರ್ಶಿ ಡಾ.ಮೇಘನಾ ನ್ಯಾಪತಿ, ?2019-20ರ ರಾಷ್ಟ್ರೀಯ ಕುಟುಂಬ ಆರೋಗ್ಯ ಸಮೀಕ್ಷೆ -5 (ಓಈಊಖ-5) ಪ್ರಕಾರ 15-49 ವರ್ಷ ವಯಸ್ಸಿನ ಪ್ರತಿ 1,000 ವಿವಾಹಿತ ಮಹಿಳೆಯರಲ್ಲಿ ಶೇ. 18.7 ರಷ್ಟು ಮಹಿಳೆಯರ ಮೇಲೆ ಬಂಜೆತನ ಪರಿಣಾಮ ಬೀರುತ್ತದೆ. ಗೋವಾ, ಲಕ್ಷದ್ವೀಪ ಮತ್ತು ಛತ್ತೀಸ್‌ಗಢದಂತಹ ಕೆಲವು ಪ್ರದೇಶಗಳು ಇನ್ನೂ ಹೆಚ್ಚಿನ ದರಗಳನ್ನು ಹೊಂದಿವೆ. ಕರ್ನಾಟಕದಲ್ಲಿ ಸುಮಾರು ಶೇ. 5.9 ರಷ್ಟು ವಿವಾಹಿತ ಮಹಿಳೆಯರು ಬಂಜೆತನ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ.

ಗ್ರಾಮೀಣ ಪ್ರದೇಶಗಳಲ್ಲಿ ನಗರ ಪ್ರದೇಶಗಳಿಗಿಂತ (ಶೇ.5.5) ತುಸು ಹೆಚ್ಚು (ಶೇ. 6.1 ರಷ್ಟು) ಮಹಿಳೆಯರು ಬಂಜೆತನ ಅನುಭವಿಸುತ್ತಿದ್ದಾರೆ ಎಂದು ಜಿಲ್ಲಾ ಮಟ್ಟದ ಗೃಹಿಣಿಯರ ಸರ್ವೆ (ಆಐಊಖ) ತೋರಿಸಿದೆ. ಈ ವ್ಯತ್ಯಾಸಗಳು ವಿವಿಧ ಪ್ರದೇಶಗಳಲ್ಲಿನ ಮಹಿಳೆಯರಿಗೆ ಸಂತಾನೋತ್ಪತ್ತಿ ಆರೋಗ್ಯವನ್ನು ಸುಧಾರಿಸುವ ತುರ್ತು ಅಗತ್ಯವನ್ನು ತೋರಿಸಿವೆ ಎಂದು ಅವರು ಹೇಳಿದರು.

ಸಾಮಾಜಿಕ ಕಟ್ಟುಪಾಡು ತೊಡೆದುಹಾಕಬೇಕು: ಸಂತಾನೋತ್ಪತ್ತಿ ವೈದ್ಯಶಾಸ್ತ್ರದಲ್ಲಿ ಅನೇಕ ಸಂಶೋಧನೆಗಳ ಹೊರತಾಗಿಯೂ, ಬಂಜೆತನವು ವಿಶೇಷವಾಗಿ ಪುರುಷರಲ್ಲಿ ಕಳಂಕಿತ ಮತ್ತು ಕಡಿಮೆ ರೋಗನಿರ್ಣಯದ ಸಮಸ್ಯೆಯಾಗಿ ಉಳಿದಿದೆ. ಬಂಜೆತನ ಕುರಿತ ಸಾಮಾಜಿಕ ಕಟ್ಟುಪಾಡುಗಳನ್ನು ತೊಡೆದುಹಾಕಬೇಕಾದ ಅಗತ್ಯವಿದೆ ಎಂದು ಹೆಲ್ತ್‌ಕೇರ್ ಗ್ಲೋಬಲ್ ಎಂಟರ್‌ಪ್ರೈಸಸ್ ಲಿಮಿಟೆಡ್‌ನ ಕಾರ್ಯನಿರ್ವಾಹಕ ಅಧ್ಯಕ್ಷ ಡಾ ಬಿ ಎಸ್ ಅಜೈಕುಮಾರ್ ಹೇಳಿದರು.




Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**